ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 296
20–5–2025 ಮಂಗಳವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 296

## ಸೇನಾ ಸಂಘರ್ಷ ಶಮನ : ದ್ವಿಪಕ್ಷೀಯ ನಿರ್ಧಾರ

**ನವದೆಹಲಿ:** "ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಘರ್ಷವು ಯಾವಾಗಲೂ ಸಾಂಪ್ರದಾಯಿಕ ಕ್ಷೇತ್ರ ವ್ಯಾಪ್ತಿಯ ನಡೆದಿದೆ ಹಾಗೂ ಪಾಕಿಸ್ತಾನದಿಂದ ಅಣ್ವಸ್ತ್ರ ಕುರಿತು ಯಾವುದೇ ಸಂಕೇತ ಬಂದಿಲ್ಲ' ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ತ್ರಿ ಅವರು ಸೋಮವಾರ ಸಂಸದೀಯ ಸಮಿತಿಗೆ ತಿಳಿಸಿದರು.



ವಿದೇಶಾಂಗ ವ್ಯವಹಾರಗಳಿಗೆ ಸಂಬಂಧಿಸಿದಂತೆ ಸಂಸದ ಶಶಿ ತರೂರ್ ಅಧ್ಯಕ್ಷತೆಯಲ್ಲಿ ನಡೆದ ಸಂಸತ್ತಿನ ಸ್ಥಾಯಿ ಸಮಿತಿ ಸಭೆಗೆ ಅವರು ವಿವರಣೆ ನೀಡಿದರು.

ಉಭಯ ದೇಶಗಳ ನಡುವಿನ ಸೇನಾ ಸಂಘರ್ಷವನ್ನು ನಿಲ್ಲಿಸುವಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ನಿರ್ವಹಿಸಿದ ಪಾತ್ರದ ಕುರಿತ ಕೆಲ ಸಂಸದರು ಕೇಳಿದ ಪ್ರಶ್ನೆಗೆ, ಎರಡೂ ದೇಶಗಳ ಸೇನಾ ಸಂಘರ್ಷವನ್ನು ನಿಲ್ಲಿಸುವ ನಿರ್ಧಾರವನ್ನು ದ್ವಿಪಕ್ಷೀಯ ಮಟ್ಟದಲ್ಲಿ ತೆಗೆದುಕೊಳ್ಳಲಾಗಿದೆ' ಎಂದು ಉತ್ತರಿಸಿದರು. ಈ ಮೂಲಕ ಅವರು ಸರ್ಕಾರದ ನಿಲುವನ್ನು ಪುನರುಚ್ಚರಿಸಿದರು.

ಸೇನಾ ಸಂಘರ್ಷ ಶಮನಕ್ಕೆ ಸಂಬಂಧಿಸಿದಂತೆ

### ಸಂಸದೀಯ ಸಮಿತಿಗೆ ಮಿಸ್ತ್ರಿ ಮಾಹಿತಿ

ಸಾಮಾಜಿಕ ಮಾಧ್ಯಮಗಳಲ್ಲಿ ಟ್ರಂಪ್ ಮಾಡಿದ ಪ್ರತಿಪಾದನೆಗಳ ಕುರಿತು ವಿರೋಧ ಪಕ್ಷಗಳ ಸದಸ್ಯರು ಕೇಳಿದಾಗ, 'ಅಮೆರಿಕದ ಅಧ್ಯಕ್ಷರು ಹಾಗೆ ಮಾಡಲು ನನ್ನ ಅನುಮತಿ ಪಡೆಯಲಿಲ್ಲ' ಎಂದು ವ್ಯಂಗ್ಯವಾಗಿ ಹೇಳಿದರು.

ಸಂಘರ್ಷದ ವೇಳೆ ಪಾಕಿಸ್ತಾನವು ಚೀನಾ ವೇದಿಕೆಗಳನ್ನು ಬಳಸಿಕೊಂಡಿದೆಯೇ ಎಂದು ಕೆಲ ಸಂಸದರು ಪ್ರಶ್ನಿಸಿದರು. ಭಾರತವು ಪಾಕ್‌ನ ವಾಯುನೆಲೆಗಳ ಮೇಲೆ ದಾಳಿ ಮಾಡಿದ್ದರಿಂದ ಅದು ಅಪ್ರಸ್ತುತ ಎಂದು ಮಿಸ್ತ್ರಿ ಪ್ರತಿಕ್ರಿಯಿಸಿದರು ಎಂದು ಮೂಲಗಳು ಹೇಳಿವೆ.

ಟರ್ಕಿಯೇ ದೇಶವು ಭಾರತ ವಿರೋಧಿ ನಿಲುವು ವ್ಯಕ್ತಪಡಿಸಿದ್ದ ಕುರಿತ ಪ್ರಶ್ನೆಗೆ, ಆ ದೇಶವು ಸಾಂಪ್ರದಾಯಿಕವಾಗಿ ಭಾರತವನ್ನು ಬೆಂಬಲಿಸುತ್ತಿರಲಿಲ್ಲ' ಎಂದರು.

ಸೇನಾ ಕಾರ್ಯಾಚರಣೆ ನಿಲ್ಲಿಸಿದ ಕುರಿತ ಮಾಹಿತಿಯನ್ನು ಸುದ್ದಿಗೋಷ್ಠಿಯಲ್ಲಿ ಪ್ರಕಟಿಸಿದ ಮಿಸಿ ವಿರುದ್ಧ ಸಾಮಾಜಿಕ ಮಾಧ್ಯಮಗಳಲ್ಲಿ ಟ್ರೋಲ್ ಮಾಡಿದ್ದನ್ನು ಸಮಿತಿಯ ಸದಸ್ಯರು ಸರ್ವಾನುಮತದಿಂದ ಖಂಡಿಸಿದರು. ಮಿಸ್ತ್ರಿ ಅವರ ವೃತ್ತಿಪರ ನಡವಳಿಕೆಯನ್ನು ಸದಸ್ಯರು ಶ್ಲಾಘಿಸಿದರು ಎಂದು ಮೂಲಗಳು ಹೇಳಿವೆ.

ಮೂರು ಗಂಟೆಗಳ ಕಾಲ ನಡೆದ ಸಭೆಯಲ್ಲಿ ಸಮಿತಿ ಸದಸ್ಯರಾದ ಟಿಎಂಸಿಯ ಅಭಿಷೇಕ್ ಬ್ಯಾನರ್ಜಿ, ಕಾಂಗ್ರೆಸ್‌ನ ರಾಜೀವ್ ಶುಕ್ಲಾ, ದೀಪೇಂದರ್ ಹೂಡಾ, ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಮತ್ತು ಬಿಜೆಪಿಯ ಅಪರಾಜಿತ ಸಾರಂಗಿ, ಅರುಣ್ ಗೋವಿಲ್ ಸೇರಿದಂತೆ 24 ಸದಸ್ಯರು ಭಾಗವಹಿಸಿದ್ದರು.

## 1 ಕೋಟಿ ಜನರಿಗೆ ಭೂ ಮಂಜೂರಾತಿ ಪತ್ರ ವಿತರಣೆ : ಡಿಕೆಶಿ

**ಹೊಸಪೇಟೆ, ಮೇ 19:** ರಾಜ್ಯ ಸರ್ಕಾರ ಕೇವಲ ವರ್ಷದ ಸಂಭ್ರಮಾಚರಣೆ ಮಾಡುತ್ತಿಲ್ಲ. ಜನರಿಗೆ 'ಭೂ ಗ್ಯಾರಂಟಿ' ಯೋಜನೆ ಮೂಲಕ 1 ಕೋಟಿಗೂ ಹೆಚ್ಚು ಜನರಿಗೆ ಭೂ ದಾಖಲಾತಿ ಪತ್ರ ನೀಡಿ ಅವರ ಋಣ ತೀರಿಸುವ ಕೆಲಸ ಮಾಡುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ

ಹೊಸಪೇಟೆಯಲ್ಲಿ ನಾಳೆ ನಡೆಯಲಿರುವ ಸಾಧನೆ ಸಮಾವೇಶದ ಪೂರ್ವಸಿದ್ಧತೆ ಪರಿಶೀಲನೆ ಬಳಿಕ ಮಾಧ್ಯಮಗಳ ಜತೆ ಮಾತನಾಡಿದರು.ನೂರು ವರ್ಷಗಳಲ್ಲಿ ಮಾಡಲಾಗದ ಕೆಲಸವನ್ನು ನಮ್ಮ ಸರ್ಕಾರ ಕಂದಾಯ ಇಲಾಖೆ ಮೂಲಕ ಮಾಡಿ, ಹೊಸ ಇತಿಹಾಸ ಬರೆಯುತ್ತಿದೆ ಎಂದು ಬಣ್ಣಿಸಿದರು. ಕಂದಾಯ ಇಲಾಖೆಯ ಮೂಲಕ ನೀಡುತ್ತಿರುವ ಈ ಭೂ ಗ್ಯಾರಂಟಿ ಇತಿಹಾಸದ ಪುಟ ಸೇರಲಿದೆ. ಪ್ರತಿಯೊಬ್ಬ ವ್ಯಕ್ತಿಗೂ ತಾನು ವಾಸವಿರುವ ಜಾಗವನ್ನು ತನ್ನದಾಗಿಸಿಕೊಳ್ಳುವ ಆಸೆ ಇರುತ್ತದೆ. ಪರಿಶಿಷ್ಟರು, ಹಿಂದುಳಿದವರು ಹಾಗೂ ಭೂರಹಿತವಾಗಿರುವವರು ಕಳೆದ ಹಲವು ವರ್ಷಗಳಿಂದ ದಾಖಲೆ ಇಲ್ಲದೆ ಮನೆ ಕಟ್ಟಿಕೊಂಡು ಪರದಾಡುತ್ತಿದ್ದರು. ಹೀಗಾಗಿ ನಮ್ಮ ಸರ್ಕಾರ ಇದಕ್ಕೆ ಪರಿಹಾರ ನೀಡಿದೆ ಎಂದರು. ವಿಜಯನಗರ ಜಿಲ್ಲೆಯನ್ನು ಪೋಡಿ ಮುಕ್ತ ಜಿಲ್ಲೆಯನ್ನಾಗಿ ಮಾಡಿದ್ದು, 79 ಸಾವಿರ ರೈತರಿಗೆ ಪೋಡಿ ದಾಖಲೆ ನೀಡಲಾಗಿದೆ. ಇಡೀ ದೇಶಕ್ಕೆ ಇದು ಹೊಸ ಮಾದರಿ. ನಮ್ಮ ಸರ್ಕಾರ ಎರಡು ವರ್ಷ ಪೂರೈಸಿದ್ದು, ನಾವು ಕೇವಲ ಸಂಭ್ರಮಾಚರಣೆ ಮಾಡಲು ಈ ಕಾರ್ಯಕ್ರಮ ಮಾಡುತ್ತಿಲ್ಲ. ಜನರು ನಮಗೆ ಕೊಟ್ಟ ಅವಕಾಶ, ಆಶೀರ್ವಾದಕ್ಕೆ ಋಣ ತೀರಿಸಲು ಈ ಕಾರ್ಯಕ್ರಮ ಮಾಡುತ್ತಿದ್ದೇವೆ ಎಂದು ಹೇಳಿದರು

ನಾವು ಕೇವಲ ಗ್ಯಾರಂಟಿ ಯೋಜನೆಗಳ ಮೇಲೆ, ಭಾವನೆಗಳ ಮೇಲೆ ರಾಜಕಾರಣ ಮಾಡುತ್ತಿಲ್ಲ. ಜನರ ಬದುಕು ಕಟ್ಟಿಕೊಟ್ಟು ರಾಜಕಾರಣ ಮಾಡುತ್ತಿದ್ದೇವೆ" ಎಂದು ಈ ಕಾರ್ಯಕ್ರಮಕ್ಕೆ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಆಗಮಿಸಲಿದ್ದಾರೆ ಎಂದು ಹೇಳಿದರು

ಗ್ಯಾರಂಟಿಗಳಿಂದ ಅಭಿವೃದ್ಧಿಯಾಗುತ್ತಿಲ್ಲ ಎಂದು ಬಿಜೆಪಿ ಆರೋಪಿಸುತ್ತಿದೆ.ನಮ್ಮದು ಕಾಂಗ್ರೆಸ್ ಗ್ಯಾರಂಟಿ. ಅವರು ಮೋದಿ ಗ್ಯಾರಂಟಿ ಎಂದರು. ಮಹಾರಾಷ್ಟ್ರ, ಮಧ್ಯಪ್ರದೇಶ, ದೆಹಲಿ, ಹರಿಯಾಣ ರಾಜ್ಯಗಳಲ್ಲಿ ಅವರು ಏನು ಮಾಡಿದ್ದಾರೆ? ನಮ್ಮ ಯೋಜನೆ ನಕಲು ಮಾಡಿದರು. ಇಡೀ ದೇಶಕ್ಕೆ ಕಾಂಗ್ರೆಸ್ ಆಡಳಿತ ಮಾದರಿಯಾಗಿದೆ ಎಂದು ತಿಳಿಸಿದರು.

ಪ್ರತಿ ಹಂತದಲ್ಲೂ ನಮ್ಮ ಕಾರ್ಯಕ್ರಮ ಮಾದರಿಯಾಗಿದೆ. ಬಿಜೆಪಿಯವರು ನರೇಗಾ ಯೋಜನೆ ಬಗ್ಗೆ ಅನೇಕ ಟೀಕೆ ಮಾಡಿದರು. ಆದರೂ ನರೇಗಾ ಯೋಜನೆ ತೆಗೆಯಲು ಸಾಧ್ಯವಾಯಿತೇ? ನಾವು ಭೂ ಸುಧಾರಣಾ ಕಾಯ್ದೆ ಜಾರಿಗೆ ತಂದೆವು, ಅದನ್ನು ಬಿಜೆಪಿಯವರಿಂದ ತೆಗೆದು ಹಾಕಲು ಸಾಧ್ಯವಾಯಿತೇ? ಯುಪಿಎ ಸರ್ಕಾರದಲ್ಲಿ ಬುಡಕಟ್ಟು ಜನರಿಗೆ ಭೂಮಿ ಕೊಟ್ಟೆವು. ಆಹಾರ ಭದ್ರತೆ ಕಾಯ್ದೆ ಜಾರಿಗೆ ತಂದೆವು, ಶೈಕ್ಷಣಿಕ ಹಕ್ಕು ಕಾಂಗ್ರೆಸ್ ಜಾರಿಗೆ ತಂದಿತು. ಬಿಜೆಪಿ ಇಂತಹ ಯೋಜನೆ ಜಾರಿ ಮಾಡಿದೆಯೇ? ಇಲ್ಲ. ಅವರು ಕೇವಲ ಟೀಕೆ ಮಾಡುತ್ತಾರೆ. ಟೀಕೆ ಮಾಡುವವರನ್ನು ತಡೆಯಲಾಗದು. ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ" ಎಂದರು.

## ಮೇ 21 ಕ್ಕೆ ಡಿಜಿ ಅಲೋಕ್ ಮೋಹನ್ ನಿವೃತ್ತಿ

**ಬೆಂಗಳೂರು,ಮೇ.19–** ರಾಜ್ಯ ಪೊಲೀಸ್ ಆಡಳಿತ ವ್ಯವಸ್ಥೆಯಲ್ಲಿ ಸದ್ಯದಲ್ಲೇ ಮಹತ್ವದ ಬದಲಾವಣೆಗಳಾಗಲಿವೆ ಇದಕ್ಕಾಗಿ ಉನ್ನತ ಮಟ್ಟದಲ್ಲಿ ಚರ್ಚೆಗಳು ನಡೆದಿದ್ದು ದೊಡ್ಡ ಪ್ರಮಾಣದಲ್ಲಿ ವರ್ಗಾವರ್ಗಿ ಪ್ರಕ್ರಿಯೆ ನಡೆಯಲಿದೆ.

ರಾಜ್ಯ ಪೊಲೀಸ್ ಇತಿಹಾಸದಲ್ಲಿಯೇ ಇದೇ ಮೊದಲ ಬಾರಿಗೆ ನಿವೃತ್ತಿಯ ನಂತರವು ಸುಪ್ರೀಂ ಕೋರ್ಟ್ ಆದೇಶದ ಅನ್ವಯ 21 ದಿನಗಳ ಸೇವಾ ಅವಧಿ ವಿಸ್ತರಣೆ ಮಾಡಿಸಿಕೊಡಿಸಿಕೊಂಡಿದ್ದ ರಾಜ್ಯ ಪೊಲೀಸ್ ಮಹಾನಿರ್ದೇಶಕ (ಡಿಜಿ–ಐಜಿಪಿ) ಅಲೋಕ್ ಮೋಹನ್ ಅವರು ಇದೇ ಮೇ.21ಕ್ಕೆ ನಿವೃತ್ತರಾಗಲಿದ್ದಾರೆ. ಅಲೋಕ್ ಮೋಹನ್ ನಿವೃತ್ತಿಯಿಂದ ಡಿಜಿ–ಐಜಿಪಿ ಹುದ್ದೆಗೆ ಸೇವಾ ಹಿರಿತನದ ಆಧಾರದ ಮೇಲೆ ಅಗ್ನಿ ಶಾಮಕ & ತುರ್ತು ಸೇವೆಗಳ ಇಲಾಖೆ ಡಿಜಿಪಿ ಪ್ರಶಾಂತ್ ಕುಮಾರ್ ಠಾಕೂರ್, ಸಿಐಡಿ ಡಿಜಿಪಿ ಡಾ. ಎಂ. ಎ. ಸಲೀಂ, ವಸತಿ ಮತ್ತು ಮೂಲ ಸೌಕರ್ಯ ಅಭಿವೃದ್ಧಿ ನಿಗಮದ ಎಂಡಿ ರಾಮಚಂದ್ರ ರಾವ್ ಅವರ ಹೆಸರುಗಳು ಚರ್ಚೆಯಲ್ಲಿವೆ.

ಆದರೆ ರಾಮಚಂದ್ರ ರಾವ್ ಮಲಮಗಳು ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಕಡ್ಡಾಯ ರಜೆ ಮೇಲೆ ತೆರಳಿ ತನಿಖೆಯನ್ನು ಎದುರಿಸುತ್ತಿದ್ದಾರೆ.ಹೀಗಾಗಿ ಪ್ರಶಾಂತ್ ಕುಮಾರ್ ಠಾಕೂರ್, ಎಂ.ಎ.ಸಲೀಂ ಇಬ್ಬರಲ್ಲಿ ಒಬ್ಬರು ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾಗಿ ನೇಮಕವಾಗುವುದು ಖಚಿತವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಡಾ.ಎಂ.ಎ ಸಲೀಂ ನೇಮಕದ ಬಗ್ಗೆ ಹೆಚ್ಚಿನ ಒಲವು ಹೊಂದಿದ್ದಾರೆ ಎಂದು ಹೇಳಲಾಗುತ್ತಿದ್ದು ಬಹುತೇಕ ಅವರೇ ರಾಜ್ಯದ ನೂತನ ಡಿಜಿ–ಐಜಿಪಿಯಾಗಿ ನೇಮಕವಾಗಬಹುದು ಎಂದು ಹೇಳಲಾಗುತ್ತಿದೆ.

## ಮೂಗಿಗೆ ತುಪ್ಪ ಸವರದೆ ನುಡಿದಂತೆ ನಡೆಸಲಾಗುತ್ತಿದೆ: ಸಚಿವ ಎಸ್ಸೆಸ್ಸೆಂ




**ಬೆಂಗಳೂರು:** ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವು ಮೂಗಿಗೆ ತುಪ್ಪ ಸವರದೆ ಕಾಂಗ್ರೆಸ್ ಪಕ್ಷವು ರಾಜ್ಯದ ಜನತೆಗೆ ಕೊಟ್ಟ ಭರವಸೆಯಂತೆ ಕೆಲಸ ಮಾಡುತ್ತಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ತಿಳಿಸಿದರು.

ಬೆಂಗಳೂರಿನ ಹೆಣ್ಣೂರು ರಸ್ತೆಯಲ್ಲಿ ಭಾನುವಾರ ಸ್ಪರ್ಶ ಆಸ್ಪತ್ರೆಯ 8 ನೇ ಶಾಖೆ, 300 ಹಾಸಿಗೆಗಳ ಸಾಮರ್ಥ್ಯದ ನೂತನ ಆಸ್ಪತ್ರೆಯನ್ನು ಲೋಕಾರ್ಪಣೆಯ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಸಾಕಷ್ಟು ಯೋಜನೆಗಳನ್ನು ತಂದಿರುವ ನಮ್ಮ ಸರ್ಕಾರ ಜನಪರ ಕಾರ್ಯಗಳನ್ನು ಮಾಡುತ್ತಿದೆ. ಜನತೆಯಿಂದ ಉತ್ತಮ ಅಭಿಪ್ರಾಯ ವ್ಯಕ್ತವಾಗಿದೆ. 2006 ರಿಂದ ಪ್ರಾರಂಭವಾದ ಸ್ಪರ್ಶ ಆಸ್ಪತ್ರೆಯು ಹಂತ ಹಂತವಾಗಿ ವಿಶ್ವಾಸಾರ್ಹತೆಯೊಂದಿಗೆ ಮುನ್ನಡೆದಿದೆ. ಪ್ರಸ್ತುತ 8 ನೇ ವಿಭಾಗದ ಆಸ್ಪತ್ರೆಯನ್ನು ಹೆಣ್ಣೂರು ರಸ್ತೆಯಲ್ಲಿ ನಿರ್ಮಿಸಿದ್ದು ಈ ಭಾಗದ ರೋಗಿಗಳು ಅನುಕೂಲವಾಗಿದೆ ಎಂದರು.

ಡಾ. ಶರಣ ಶಿವರಾಜ್ ಪಾಟೀಲ್ ಅವರು ಪ್ರಸಿದ್ಧ ಮೂಳೆ ಶಸ್ತ್ರಚಿಕಿತ್ಸಕರಾಗಿದ್ದು, ಯುಕೆಯಲ್ಲಿ ಸುಧಾರಿತ ವೈದ್ಯಕೀಯ ತರಬೇತಿಯನ್ನು ಪಡೆದಿದ್ದಾರೆ. ಅಲ್ಲಿ ಅವರು ಮಕ್ಕಳ ಮತ್ತು ಸಂಕೀರ್ಣ ಮೂಳೆಚಿಕಿತ್ಸಾ ಆರೈಕೆಯಲ್ಲಿ ಪರಿಣತಿ ಹೊಂದಿದ್ದು ಇಂದು ಎಂಟನೇ ಆಸ್ಪತ್ರೆಯನ್ನು ಮುನ್ನಡೆಸುತ್ತಿದ್ದಾರೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಸಹ ಜನತೆಯ ಆರೋಗ್ಯ ಸುಧಾರಣೆಗಾಗಿ ಸರ್ಕಾರದಿಂದ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಅಲ್ಲದೆ ನಮ್ಮ ಎಲ್ಲಾ ಸಚಿವರು ಕೊಟ್ಟ ಭರವಸೆಗಳನ್ನು ಈಡೇರಿಸುತ್ತಿದ್ದಾರೆ ಎಂದರು.

ನಮ್ಮ ದಾವಣಗೆರೆ ಜಿಲ್ಲೆಯಿಂದ ಬಡ ರೋಗಿಗಳು ನಿಮ್ಮ ಆಸ್ಪತ್ರೆಗೆ ಬಂದಾಗ ಹೆಚ್ಚಿನ ಚಿಕಿತ್ಸೆಯನ್ನು ನೀಡಿ, ಸ್ಪರ್ಶ ಆಸ್ಪತ್ರೆಯು ಇನ್ನಷ್ಟು ಅಭಿವೃದ್ಧಿ ಹೊಂದಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದ ಸಾನಿಧ್ಯವನ್ನು ಸುತ್ತೂರು ಮಠದ ಜಗದ್ಗುರು ಶ್ರೀ. ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ವಹಿಸಿದ್ದರು. ಶಾಸಕ ಡಾ. ಶಾಮನೂರು ಶಿವಶಂಕರಪ್ಪ,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ, ಮಾಜಿ ಸಚಿವ ಬೈರತಿ ಬಸವರಾಜ್ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.

## ನೀರ್ಥಡಿ ಗ್ರಾಮ ಪ್ರವಾಸಿ ತಾಣವಾಗಲಿ: ಬಸವಂತಪ್ಪ



ದಾವಣಗೆರೆ: ನೀರ್ಥಡಿಯಲ್ಲಿ ಮದಕರಿ ನಾಯಕನ ಆಳ್ವಿಕೆಯ ಕಾಲದಲ್ಲಿ ನಿರ್ಮಾಣಗೊಂಡಿರುವ ಐತಿಹಾಸಿಕ ಶ್ರೀರಂಗನಾಥಸ್ವಾಮಿ ದೇವಸ್ಥಾನವಿದ್ದು, ಇದು ಪ್ರವಾಸಿ ತಾಣವಾಗಬೇಕಿದೆ ಎಂದು ಶಾಸಕ ಕೆ.ಎಸ್. ಬಸವಂತಪ್ಪ ಹೇಳಿದರು.

ಸೋಮವಾರ ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ನೀರ್ಥಡಿ ಗ್ರಾಮದಲ್ಲಿ ಶ್ರೀ ಆಂಜನೇಯ ದೇವಸ್ಥಾನ ನಿರ್ಮಾಣದ ಭೂಮಿಪೂಜೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶ್ರೀ ಆಂಜನೇಯ ದೇವಸ್ಥಾನ ನಿರ್ಮಾಣಕ್ಕೆ 15 ಲಕ್ಷ ರೂ. ಬಿಡುಗಡೆ ಮಾಡಿದ್ದು, ಗ್ರಾಮಸ್ಥರೆಲ್ಲರೂ ಸಹಕಾರ ನೀಡುವ ಮೂಲಕ ದೇವಸ್ಥಾನ ನಿರ್ಮಾಣಕ್ಕೆ ಕೈಜೋಡಿಸಬೇಕೆಂದರು.

ನೀರ್ಥಡಿ ಗ್ರಾಮ ಐತಿಹಾಸಿಕ ಶ್ರೀರಂಗನಾಥಸ್ವಾಮಿ ದೇವಸ್ಥಾನದಿಂದ ಪ್ರಸಿದ್ಧಿ ಪಡೆದಂತೆ. ಅದರಂತೆ ಗ್ರಾಮದಲ್ಲಿ ಅನೇಕ ದೇವಸ್ಥಾನಗಳು ಇವೆ. ಇದರಲ್ಲಿ ಪ್ರಮುಖವಾಗಿರುವುದು ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನ. ಏಕೆಂದರೆ ಊರು ಕಾಯುವ ದೇವರೆಂದರೆ ಅದು ಶ್ರೀ ಆಂಜನೇಯ ಸ್ವಾಮಿ ಆಗಿದ್ದು, ಭಕ್ತರು ಬಂದು ದೇವರ ದರ್ಶನ ಪಡೆಯಲು ಅನುಕೂಲವಾಗುವ ರೀತಿಯಲ್ಲಿ ದೇವಸ್ಥಾನ ನಿರ್ಮಾಣ ಮಾಡಬೇಕೆಂದರು.

## ಯಾವ ಪುರುಷಾರ್ಥಕ್ಕಾಗಿ ಸಾಧನಾ ಸಮಾವೇಶ

### ವಿಧಾನಸಭಾ ಮುಖ್ಯ ಸಚೇತಕ ಎನ್. ರವಿಕುಮಾರ್ ಪ್ರಶ್ನೆ

**ದಾವಣಗೆರೆ:** ಬೆಲೆ ಏರಿಕೆ ಮೂಲಕ ರಾಜ್ಯದ ಜನರಿಗೆ ದುಬಾರಿ ಜೀವನ ದಯಪಾಲಿಸಿ, ಅಭಿವೃದ್ಧಿ ಶೂನ್ಯ ಆಡಳಿತ ನೀಡುತ್ತಿರುವ 'ಗ್ಯಾರಂಟಿ' ಕಾಂಗ್ರೆಸ್ ಸರ್ಕಾರ ಯಾವ ಪುರುಷಾರ್ಥಕ್ಕಾಗಿ ಸಾಧನಾ ಸಮಾವೇಶವನ್ನು ಹಮ್ಮಿಕೊಳ್ಳುತ್ತಿದೆ ಎಂದು ತಿಳಿಸಲಿ ಎಂದು ವಿಧಾನಸಭಾ ಮುಖ್ಯ ಸಚೇತಕ ಎನ್. ರವಿಕುಮಾರ್ ವ್ಯಂಗ್ಯವಾಡಿದರು.



ಸೋಮವಾರ ನಗರದ ಬಿಜೆಪಿ ಕಚೇರಿಯಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಅವರು 'ದುಬಾರಿ ಜೀವನ–ಅಭಿವೃದ್ಧಿ ಶೂನ್ಯ' ಇದುವೇ ಕಾಂಗ್ರೆಸ್ ಸರ್ಕಾರದ ಸಾಧನೆ 'ಪೋಸ್ಟರ್ ಬಿಡುಗಡೆಗೊಳಿಸುವ ಮೂಲಕ ನಾಳಿನ ಕಾಂಗ್ರೆಸ್ ಸಾಧನಾ ಸಮಾವೇಶದ ವಿರುದ್ಧ ದನಿ ಎತ್ತಿದರು.

ಸಿದ್ದು ಸರ್ಕಾರ ಹೊಸ ನೀತಿಯನ್ನು ಜಾರಿಗೆ ತಂದಿದೆ. ಇಲ್ಲಿ ಇವರು ಭ್ರಷ್ಟಾಚಾರ ಮಾಡಿ, ವಾಪಸ್ ನೀಡಿದರೆ ನಿಷ್ಕಳಂಕರಾಗುತ್ತಾರೆ! ಸಿದ್ದರಾಮಯ್ಯ ವಾಚ್, 14 ಸೈಟುಗಳನ್ನು ಹೈಕೋರ್ಟ್ ಹೇಳಿದ ಮೇಲೆ ವಾಪಸ್ ನೀಡಿದರು. ಅವರು ನಮಗೆ ಹೇಳಬೇಕು, ಭ್ರಷ್ಟಾಚಾರ ಆಗಿದ್ದಕ್ಕೆ ವಾಪಸ್ ನೀಡಿದರೋ, ಅಥವಾ ಸುಮ್ಮನೆ ನೀಡಿದರೊ ತಿಳಿಸಲಿ. ಬರೀ 14 ನಿವೇಶನಗಳಲ್ಲ ಸಾವಿರಾರು ನಿವೇಶನಗಳು ಅವರ ಕಡೆಯವರಿಗೆ ಅಕ್ರಮವಾಗಿ ಹಂಚಲಾಗಿದೆ. ಇದನ್ನು ಹೇಳಲು ಸಾಧನಾ ಸಮಾವೇಶವೇ? ಎಂದು ಕುಟುಕಿದರು.

ವಾಲ್ಮೀಕಿ ನಿಗಮದ ಹಣವನ್ನು ತೆಲಂಗಾಣ ಚುನಾವಣೆಗೆ ಬಳಸಲಾಯಿತು.ಶನಾಗೇಂದ್ರ ರಾಜೀನಾಮೆ ನೀಡಿದರು. ಅವರದೇ ಕ್ಷೇತ್ರವಾದ ಬಳ್ಳಾರಿಯಲ್ಲಿ ಸಾಧನಾ ಸಮಾವೇಶ ಮಾಡಲು ಹೊರಟಿರುವುದು ಯಾವ ಸಾಧನೆಗೆ? ಪ್ರಿಯಾಂಕ್ ಟ್ರಸ್ಟ್ 5 ಎಕರೆ ಜಮೀನು ಕೆಐಎಡಿಬಿ ನೀಡಿದೆ. ಇನ್ನು ಗುತ್ತಿಗೆದಾರರು, ಪ್ರಾಮಾಣಿಕ ಅಧಿಕಾರಿಗಳು ಸರ್ಕಾರದ ಶೇ. 60 ಲಂಚಾವತಾರ ರಿಂದ ಬೇಸತ್ತು ಆತ್ಮಹತ್ಯೆಯತ್ತ ಮುಖ ಮಾಡುವಂತಾಗಿದೆ. ಮಾತೆತ್ತಿದರೆ ಮಾದರಿ ನಾಯಕ ಎನಿಸಿಕೊಳ್ಳುವ ಸಿದ್ದರಾಮಯ್ಯ ಎಸ್ಸಿ ಎಸ್ಟಿ, ಓಬಿಸಿ ಯವರನ್ನು ಜಾತಿ ಪಟ್ಟಿಯಲ್ಲಿ ಎಲ್ಲಿ ಇಟ್ಟಿದ್ದಾರೆ ಎಂದು ಹೇಳಬೇಕು. ಅಲ್ಲದೆ, ಎಸ್ಸಿ ಎಸ್ಟಿ ಗಳಿಗೆ ಸೇರಬೇಕಾದ ಹಣವನ್ನು ಗ್ಯಾರಂಟಿ ಭಾಗ್ಯಗಳನ್ನು ನೀಡಲು ಬಳಸಿಕೊಳ್ಳುತ್ತಿರುವುದು ಅಂಬೇಡ್ಕರ್ ಅವರಿಗೆ ಮಾಡುತ್ತಿರುವ ದ್ರೋಹವಾಗಿದೆ ಎಂದು ವಾಗ್ದಾಳಿ ನಡೆಸಿದರು.

ಕಳ್ಳೆತ್ತುಗಳ ಜೋಡಿಯಲ್ಲಿ ಇನ್ನೊಂದು ಡಿಕೆಶಿ ಅವರು ಸಂವಿಧಾನ ಬದಲಿಸುತ್ತೇವೆ ಎಂದು ಹೇಳುತ್ತಾರೆ. ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದರೂ ಸುಮ್ಮನಿದ್ದಾರೆ. ಯಾವುದು ತಂಡಕ್ಕೆ ನಾಸೀರ್ ಹುಸೇನ್ ಹೆಸರು ನೀಡಿರುವುದು ನಾಚಿಕೆಗೇಡಿನ ಸಂಗತಿ. ಇನ್ನು ಕಾನೂನು ವ್ಯವಸ್ಥೆ ಮರೀಚಿಕೆಯಾಗಿದೆ. ಪ್ರತಿದಿನ ಹತ್ಯೆ, ಅತ್ಯಾಚಾರ, ಸುಲಿಗೆ ನಡೆಯುತ್ತಿದೆ. ಮಹಿಳೆಯರಿಗೆ ಸುರಕ್ಷತೆ ಇಲ್ಲ. ಹಿಂದೂ ಕಾರ್ಯಕರ್ತರ ಮೇಲೆ ಎಷ್ಟು ಕೇಸ್ ಬೇಕಾದರೂ ಹಾಕಬಹುದಾಗಿದೆ. ರಾಜ್ಯದಲ್ಲಿ ,ಸರ್ಕಾರ ಹತ್ಯೆ, ಇತ್ಯಾದಿಗಳಿಗೆ ಪರೋಕ್ಷವಾಗಿ ಪ್ರೇರೇಪಣೆ ನೀಡುತ್ತಿದೆ ಎಂದು ಆರೋಪಿಸಿದರು.

ರಾಜ್ಯ ಸರ್ಕಾರ ಸಂಪೂರ್ಣ ದಿವಾಳಿಯಾಗಿದೆ. ಹೇಗಾದರೂ ಮಾಡಿ ಗ್ಯಾರಂಟಿ ನೀಡಬೇಕು ಎಂದು ಸುಂಕ ಹೆಚ್ಚಳ ಮಾಡುತ್ತಿದೆ. ರಾಜ್ಯದ ಮೇಲೆ 2023 ರವರೆಗೆ 5 ಲಕ್ಷ ಕೋಟಿ ಸಾಲ ಇತ್ತು. ಸಿದ್ದು ಸರ್ಕಾರ ಬಂದ ಮೇಲೆ 2 ಲಕ್ಷ ಕೋಟಿ ರೂಪಾಯಿ ಸಾಲ, ಮಾಡಿದೆ. ಸಾವಿರಾರು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರೈತರಿಗಾಗಿ ನೀಡಲಾಗುವ 28 ಸಾವಿರ ರೂಪಾಯಿ ಟ್ರಾನ್ಸ್ ಫಾರ್ಮರ್ ಬೆಲೆಯನ್ನು 2 ರಿಂದ 3 ಲಕ್ಷದವರೆಗೆ ಏರಿಸಿದ್ದಾರೆ. ಇಂತಹ ಜನವಿರೋಧಿ ಸರ್ಕಾರ ಸಾಧನಾ ಸಮಾವೇಶಕ್ಕೆ ಸಿದ್ಧತೆ ನಡೆಸಿದೆ ಎಂದು ಟೀಕಿಸಿದರು.

ಇನ್ನು ಉಪಚುನಾವಣೆ ವೇಳೆ ಗೃಹಲಕ್ಷ್ಮೀ ಜಾರಿಗೆ ತಂದರು. ಫೆಬ್ರವರಿಯಿಂದ ಗೃಹಲಕ್ಷ್ಮೀ ಹಣ ಸಂದಾಯವಾಗಿಲ್ಲ. ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಸಿದ್ದರಾಮಯ್ಯ ಅವರಿಗೆ ಗೃಹಲಕ್ಷ್ಮೀ ಹಣ ನೀಡಲು ಮತ್ತೊಂದು ಚುನಾವಣೆ ಬರಬೇಕೇನೋ ಎಂದರಲ್ಲದೆ, ಶೈಕ್ಷಣಿಕ ಶುಲ್ಕ ಹೆಚ್ಚಾಗುತ್ತಿದೆ. ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗಳು ಖಾಲಿ ಇದೆ. ನೇಮಕಾತಿ ಆಗಿಲ್ಲ. ವೈದ್ಯರ ಹುದ್ದೆ ಭರ್ತಿಯಾಗಿಲ್ಲ. ರಾಜ್ಯದ ಕಳ್ಳೆತ್ತುಗಳ ಜೋಡಿ ಕರ್ನಾಟಕವನ್ನು ನರಕಸದೃಶವಾಗಿಸಿದೆ. ಹೀಗಿರುವಾಗ ಈ ಸರ್ಕಾರ ನಾಚಿಕೆ ಮಾನ, ಮರ್ಯಾದೆ ಇಲ್ಲದೆ ಸಾಧನಾ ಸಮಾವೇಶ ಮಾಡಲು ಹೊರಟಿದ್ದು, ಇದನ್ನು ಮೊದಲು ಕೈಬಿಡಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರ್ ನಾಗಪ್ಪ ಮಾತನಾಡಿ, ಲೋಕಿಕೆರೆ ನಾಗರಾಜ್ ಅವರು ನಡೆಸಿದ. ಸುದ್ದಿಗೋಷ್ಠಿಗೆ ಸಚಿವರು ಉತ್ತರಿಸದೆ, ಪುಡಿ ರಾಜಕಾರಣಿಗಳು ಸಾಕಷ್ಟು ಮಾತನಾಡಿದ್ದಾರೆ. ಲೋಕಿ ಕೆರೆ ವೈಯಕ್ತಿಕವಾಗಿ ಮಾತನಾಡಿಲ್ಲ. ಇಲ್ಲಿ ನಡೆಯುತ್ತಿರುವ ಅಕ್ರಮ ಜೂಜು ಅಡ್ಡಾಗಳು, ಕಾನೂನು ಅವ್ಯವಸ್ಥೆ, ಡ್ರಗ್ಸ್ ಹಾವಳಿ ಕುರಿತು ಕೇಳಿದರೆ, ಪುಡಿ ರಾಜಕಾರಣಿಗಳ ಬಳಿ ಮಾತನಾಡಿಸಿದ್ದಾರೆ. ದಾವಣಗೆರೆಯಲ್ಲಿ ಹಿಟ್ಲರ್ ರಾಜಕಾರಣ ನಡೆಯುತ್ತಿದೆಯೇ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಧರ್ಮಸ್ಥಳದ ಯುವತಿ ಆತ್ಮಹತ್ಯೆ ಪ್ರಕರಣಕ್ಕೆ ಟ್ವಿಸ್ಟ್

## ಸಾವಿನ ಕಾರಣ ಕೊನೆಗೂ ಬಹಿರಂಗ!



**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಧರ್ಮಸ್ಥಳ ಮೂಲದ ಏರೋನಾಟಿಕ್ಸ್ ಇಂಜಿನಿಯರ್ ನಿಗೂಢ ಸಾವು ಪ್ರಕರಣದ ಕಾರಣ ತಿಳಿದು ಬಂದಿದೆ.

ಯುವತಿ ಆಕಾಂಕ್ಷಾ ಎಸ್ ನಾಯರ್ ಪ್ರೇಮ ವೈಫಲ್ಯದಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬುವುದು ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ. ಧರ್ಮಸ್ಥಳದ ಬೋಳಿಯೂರು ನಿವಾಸಿಯಾಗಿರುವ ಸುರೇಂದ್ರ ನಾಯರ್ ಹಾಗೂ ಸಿಂಧೂದೇವಿ ದಂಪತಿಯ ಪುತ್ರಿ ಆಕಾಂಕ್ಷಾ ಎಸ್ ನಾಯರ್ ಮೇ.17 ರಂದು ಪಂಜಾಬ್‌ನ ಪಗ್ವಾರದ ಲವ್ಲಿ ಪ್ರೊಫೆಷನಲ್ ವಿಶ್ವವಿದ್ಯಾಲಯದ ಕಟ್ಟಡದ ನಾಲ್ಕನೇ ಮಹಡಿಯಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಮೃತ ಆಕಾಂಕ್ಷಾ ಅವರು ಇದೇ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಬಿಜಿಲ್ ಮ್ಯಾಥ್ಯೂ ಎಂಬುವರನ್ನು ಪ್ರೀತಿಸುತ್ತಿದ್ದರು. ಪ್ರಾಧ್ಯಾಪಕ ಬಿಜಿಲ್ ಮ್ಯಾಥ್ಯೂ ಕೇರಳದ ಕೊಟ್ಟಾಯಂ ನಿವಾಸಿಯಾಗಿದ್ದು, ಎರಡು ಮಕ್ಕಳ ತಂದೆಯಾಗಿದ್ದಾರೆ. ಆಕಾಂಕ್ಷಾ ಪ್ರಾಧ್ಯಾಪಕ ಮ್ಯಾಥ್ಯೂ ಅವರ ಮನೆಗೆ ಹೋಗಿ ಮದುವೆಯಾಗುವಂತೆ ಒತ್ತಾಯಿಸಿ ಜಗಳ ಮಾಡಿದ್ದರು.

ಬಳಿಕ ಆಕಾಂಕ್ಷಾ ಕಾಲೇಜಿನಲ್ಲೂ ಬಿಜಿಲ್ ಮ್ಯಾಥ್ಯೂ ಅವರ ಜೊತೆ ಜಗಳವಾಡಿದ್ದಾರೆ.

## ಮದ್ಯದ ಬೆಲೆ ಹೆಚ್ಚಳದಿಂದ ಆದಾಯಕ್ಕೆ ಪೆಟ್ಟು: ಆರ್.ಅಶೋಕ್

**ಬೆಂಗಳೂರು:** ರಾಜ್ಯದ ಖಜಾನೆಗೆ ಆದಾಯ ತರುವ ಆದಾಯದ ಮೂಲಗಳಲ್ಲಿ ಒಂದಾದ ಅಬಕಾರಿ ಕ್ಷೇತ್ರದ ಮೇಲೆ ರಾಜ್ಯ ಸರ್ಕಾರ ಹೆಚ್ಚಿನ ಒತ್ತಡ ಹೇರುತ್ತಿದ ಅವೈಜ್ಞಾನಿಕ ಅಬಕಾರಿ ನೀತಿಯಿಂದ ರಾಜ್ಯದ ಬೊಕ್ಕಸಕ್ಕೆ ಆದಾಯ ಹೆಚ್ಚುವ ಬದಲು ಖೋತಾ ಆಗುವ ಸಾಧ್ಯತೆಗಳಿವೆ ಎಂದು ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್ ಎಚ್ಚರಿಸಿದ್ದಾರೆ.

ಅಪಾಯಕಾರಿ ನೀತಿಗಳ ಮೂಲಕ ಅಬಕಾರಿ ಆದಾಯದ ಮೂಲಕ್ಕೆ ಕೊಡಲಿ ಪೆಟ್ಟು ನೀಡಲು ರಾಜ್ಯ ಸರ್ಕಾರ ಮುಂದಾಗಿದೆ. ಸಂಪನ್ಮೂಲ ಸಂಗ್ರಹಕ್ಕೆ ಸರ್ಕಾರ ಅನುಸರಿಸುತ್ತಿರುವ ಮಾರ್ಗ ಉದ್ಯಮ, ವಹಿವಾಟಿಗೆ ಮಾರಕವಾಗಿದ ಎಂದು ಟೀಕಿಸಿದ್ದಾರೆ.



ದರ ಮತ್ತು ಸನ್ನದು ಶುಲ್ಕ ಏರಿಕೆಗೂ ಒಂದು ಮಾನದಂಡ ಇರುತ್ತದೆ. ಆದರೆ ಒಂದೇ ವರ್ಷದಲ್ಲಿ ಮದ್ಯ ಮಾರಾಟ ಮತ್ತು ಸನ್ನದು ಶುಲ್ಕವನ್ನು ಅಭ್ಯಾದಿ ಹಳೆ ಸುತ್ತಿರುವುದು ಉದ್ಯಮದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ. ಎಂದು ಆರ್.ಅಶೋಕ್ ಆತಂಕ ವ್ಯಕ್ತಪಡಿಸಿದ್ದಾರೆ.

**ಗ್ರಾಹಕರಿಗೂ ಹೊರೆ :** ಬಜೆಟ್‌ನಲ್ಲಿ ಯಾವುದೇ ತೆರಿಗೆ ಹಾಕಿಲ್ಲ ಎಂದು ಬೆನ್ನು ತಟ್ಟಿಕೊಂಡು ನಂತರದಲ್ಲಿ ಆಲೋಹಾಲ್ ದರಗಳನ್ನು ಯದ್ವಾತದ್ವಾ ಹೆಚ್ಚಿಸಿದ್ದಾರೆ. ಅದರಲ್ಲೂ ಬಿಯರ್ ದರ ವರ್ಷದಲ್ಲಿ 2–3 ಸಲ ಹೆಚ್ಚಿಸಿ, ಗ್ರಾಹಕರಿಗೆ ದೊಡ್ಡ ಹೊರ ಹೊರಿಸಲಾಗಿದೆ. ಮದ್ಯ ಪ್ರಿಯರು ಪ್ರತಿಭಟಿಸುವುದಿಲ್ಲ ಎಂಬ ಕಾರಣಕ್ಕೆ ಇಂತಹ ಕ್ರಮ ಅನುಸರಿಸುವುದು ಒಳ್ಳೆಯದಲ್ಲ ಎಂದು ಆಕ್ಷೇಪಿಸಿದ್ದಾರೆ.

ಸರಿಯಾದ ಆರ್ಥಿಕ ಶಿಸ್ತು ಮತ್ತು ಪೂರ್ವ ಸಿದ್ಧತೆಗಳಿಲ್ಲದೆ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಲಾಯಿತು. ಇದರಿಂದ ಅಭಿವೃದ್ಧಿ ಕಾರ್ಯಕ್ರಮಗಳು ಸ್ಥಗಿತ ಗೊಂಡಿವೆ. ಬೊಕ್ಕಸ ಬರಿದಾಗಿ ಸರ್ಕಾರ ದಿವಾಳಿಯಾಗಿದೆ ಎಂದು ವಾಗ್ದಾಳಿ ಮಾಡಿದ್ದಾರೆ.

ಆರ್ಥಿಕ ಪರಿಸ್ಥಿತಿ ಸರಿಪಡಿಸಿಕೊಳ್ಳಲು ಹೆಣಗುತ್ತಿರುವ ಸರ್ಕಾರ, ಸಿಕ್ಕ ಸಿಕ್ಕ ಎಲ್ಲ ವಸ್ತುಗಳ ದರ ಹೆಚ್ಚಿಸಿದ್ದರೂ ಪರಿಸ್ಥಿತಿ ಸುಧಾರಿಸುತ್ತಿಲ್ಲ. ಹೀಗಾಗಿ ಇಂತಹ ದರ ಮತ್ತು ಶುಲ್ಕ ಹೆಚ್ಚಳದಂತಹ ವಾಮ ಮಾರ್ಗಗಳ ಮೂಲಕ ಸರ್ಕಾರ ಉದ್ಯಮವನ್ನು ಶೋಷಣೆ ನಡೆಸುತ್ತಿದೆ ಎಂದು ಆರೋಪಿಸಿದ್ದಾರೆ.

ಮದ್ಯ ಉತ್ಪಾದನೆ, ಬಾಟ್ಲಿಂಗ್, ಮಾರಾಟ ಮಳಿಗೆಗಳು ಸೇರಿ ಎಲ್ಲ ಸ್ವರೂಪದ ಶುಲ್ಕಗಳನ್ನು ಶೇಕಡ ನೂರರಷ್ಟು ಹೆಚ್ಚಳಕ್ಕೆ ಮುಂದಾಗಿದೆ. ಇದಕ್ಕಾಗಿ ಅಬಕಾರಿ ಕಾನೂನುಗಳಿಗೆ ತಿದ್ದುಪಡಿ ಮಾಡಿ ಕರಡು ನಿಯಮಗಳ ಅಧಿಸೂಚನೆಯನ್ನು ಪ್ರಕಟಿಸಿದೆ. ಜುಲೈ 1ರಿಂದ ಪರಿಷ್ಕೃತ ದರಗಳು ಜಾರಿಗೊಳ್ಳಲಿವೆ. ಆ ಮೂಲಕ ಉದ್ಯಮದ ಅಂತ್ಯಕ್ಕೆ ಮೊಳೆ ಹೊಡೆದಂತಾಗಲಿದೆ.

## ಬಮುಲ್ ನಿರ್ದೇಶಕರಾಗಿ ಮಾಜಿ ಸಂಸದ ಡಿ.ಕೆ. ಸುರೇಶ್ ಅವಿರೋಧ ಆಯ್ಕೆ

**ಬೆಂಗಳೂರು:** ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಕಿರಿಯ ಸಹೋದರ ಹಾಗೂ ಮಾಜಿ ಸಂಸದ ಡಿ.ಕೆ. ಸುರೇಶ್ ಅವರು ಕನಕಪುರದಿಂದ ಬಮುಲ್ (ಬೆಂಗಳೂರು ಹಾಲು ಒಕ್ಕೂಟ ಲಿಮಿಟೆ–ಡ್) ನಿರ್ದೇಶಕರಾಗಿ ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ. ಬಮುಲ್ (ಬೆಂಗಳೂರು ಹಾಲು ಒಕ್ಕೂಟ ಲಿಮಿಟೆಡ್) ನಿರ್ದೇಶಕ ಸ್ಥಾನಕ್ಕೆ ಡಿ.ಕೆ.ಸುರೇಶ್ ಅವರು ಶನಿವಾರ ನಾಮಪತ್ರ ಸಲ್ಲಿಸಿದ್ದರು. ಇತರರ ಆಕಾಂಕ್ಷಿಗಳು ಸಲ್ಲಿಸಿದ ನಾಮಪತ್ರಗಳು ಅಮಾನ್ಯವಾಗಿದ್ದ ಹಿನ್ನೆಲೆಯಲ್ಲಿ ಸುರೇಶ್ ಅವರು ಅವಿರೋಧ ಆಯ್ಕೆಯಾಗಿದ್ದಾರೆ.



ಬಮುಲ್ ನಿರ್ದೇಶಕರಾಗಿ ಸುರೇಶ್ ಅವರು ಆಯ್ಕೆಯಾಗಿರುವುದು ಕರ್ನಾಟಕ ಹಾಲು ಸಹಕಾರಿ ಕ್ಷೇತ್ರದ ಮೇಲೆ ಹಿಡಿತ ಸಾಧಿಸಲು, ಕೆಎಂಎಫ್ ಅಧ್ಯಕ್ಷರಾಗಲು ಒಂದು ಮೆಟ್ಟಿಲು ಮುಂದೆ ಸಾಗಿದಂತಾಗಿದೆ.

ಇದೀಗ ಅಧ್ಯಕ್ಷ ಹುದ್ದೆ ಮೇಲೆ ಕಣ್ಣಿಟ್ಟಿರುವ ಸುರೇಶ್ ಅವರು, ಬೆಂಬಲ ಪಡೆಯುವ ಸಲುವಾಗಿ ವಿವಿಧ ತಾಲ್ಲೂಕುಗಳಿಂದ ತಮ್ಮ ಬೆಂಬಲಿಗರನ್ನು ನಿರ್ದೇಶಕರನ್ನಾಗಿ ಮಾಡುವತ್ತ ಗಮನಹರಿಸಲಿದ್ದಾರೆಂದು ಮೂಲಗಳಿಂದ ತಿಳಿದುಬಂದಿದೆ.

ಈ ನಡುವೆ ಬಮುಲ್ ನಿರ್ದೇಶಕರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಸುರೇಶ್ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಅವರ ಆಶೀರ್ವಾದ ಪಡೆದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಮನೆಯಲ್ಲಿನ ಪರಿಸ್ಥಿತಿಗಳಿಂದ ನಿಮಗೆ ಅಸಮಾಧಾನ ಉಂಟಾಗಬಹುದು. ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ ನೀವು ಒಂದು ಹೊಸ ವ್ಯಾಪಾರ ಪಾಲುದಾರಿಕೆಯನ್ನು ಪರಿಗಣಿಸುತ್ತಿದ್ದಲ್ಲಿ – ನೀವು ಯಾವುದೇ ಬದ್ಧತೆಯನ್ನು ಮಾಡುವ ಮೊದಲು ಎಲ್ಲಾ ಸತ್ಯಾಸತ್ಯತೆಗಳನ್ನು ಅರಿತುಕೊಳ್ಳುವುದು ಅಗತ್ಯ

### ವೃಷಭ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಕುಟುಂಬದ ಸದಸ್ಯರೊಂದಿಗೆ ಕೆಲವು ವಿಶ್ರಾಂತಿಯ ಕ್ಷಣಗಳನ್ನು ಕಳೆಯಿರಿ. ಮನ್ಮಥನ ಬಾಣದಿಂದ ತಪ್ಪಿಸಿಕೊಳ್ಳುವ ಅವಕಾಶ ಕಡಿಮೆಯಿದೆ

### ಮಿಥುನ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ. ನಿಮ್ಮ ಬಿಡುವಿನ ವೇಳೆಯನ್ನು ನಿಮ್ಮ ಮನೆಯ ಸೌಂದರ್ಯ ಹೆಚ್ಚಿಸಲು ಬಳಸಿ.

### ಕರ್ಕ ರಾಶಿ

ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ಸಂಜೆಯಲ್ಲಿ ಬಗ್ಗೆ ಅನಿರೀಕ್ಷಿತವಾದ ಉತ್ತಮ ಸುದ್ದಿಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತರುತ್ತದೆ.

### ಸಿಂಹ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್ ಗಳ ಬಗ್ಗೆ ಎಚ್ಚರಿಕೆಯಿಂದಿರಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು–ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ನಿಮ್ಮ ವರ್ತನೆಯಲ್ಲಿ, ವಿಶೇಷವಾಗಿ ನಿಮ್ಮ ಸಂಗಾತಿಯ ಜೊತೆ, ತಾಳ ತಪ್ಪದಿರಲಿ. ಇಲ್ಲವಾದರೆ ಅದು ಮನೆಯಲ್ಲಿನ ಶಾಂತಿಯನ್ನು ಹಾಳಾಗಿಸಬಹುದು.

### ಕನ್ಯಾ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ.

### ತುಲಾ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ ಶೀಘ್ರದಲ್ಲೇ ಸುಧಾರಿಸುತ್ತದೆ. ಹೆಂಡತಿ ನಿಮ್ಮ ಜೀವನವನ್ನು ಬದಲಾಯಿಸಲು ಸಹಾಯ ಮಾಡುತ್ತಾಳೆ. ಇತರರನ್ನು ಊರುಗೋಲಾಗಿ ಅವಲಂಬಿಸುವ ವ್ಯಕ್ತಿಗಿಂತ ತನ್ನ ಜೀವನವನ್ನು ತಾನೇ ರೂಪಿಸಿಕೊಳ್ಳಬಯಸುವ ಒಬ್ಬ ಚೈತನ್ಯಯುಕ್ತ ವ್ಯಕ್ತಿಯಾಗಿ.

### ವೃಶ್ಚಿಕ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಇಂದು ಮನೆಯಿಂದ ಹೊರಗೆ ಹಿರಿಯರ ಆಶೀರ್ವಾದವನ್ನು ತೆಗೆದುಕೊಂಡು ಹೋಗಿ, ಇದರಿಂದ ನೀವು ಹಣದ ಲಾಭವನ್ನು ಪಡೆಯಬಹುದು. ಇತರರಲ್ಲಿ ಅನಗತ್ಯವಾಗಿ ದೋಷಗಳನ್ನು ಹುಡುಕುವ ನಿಮ್ಮ ಬುದ್ಧಿಗೆ ಸಂಬಂಧಿಕರಿಂದ ಟೀಕೆ ಎದುರಾಗಬಹುದು.

### ಧನು ರಾಶಿ

ಧ್ಯಾನ ಮತ್ತು ಯೋಗವನ್ನು ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗಾಗಿ ಆಚರಿಸಬೇಕು. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ಮಕ್ಕಳು ನಿಮ್ಮ ಗೃಹಕೃತ್ಯಗಳನ್ನು ಮುಗಿಸುವಲ್ಲಿ ನಿಮಗೆ ಸಹಾಯ ಮಾಡುತ್ತಾರೆ. ತಮ್ಮ ಬಿಡುವಿನ ವೇಳೆಯಲ್ಲಿ ಈ ರೀತಿಯ ಚಟುವಟಿಕೆಗಳನ್ನು ಮಾಡಲು ಅವರಿಗೆ ಪ್ರೋತ್ಸಾಹಿಸಿ.

### ಮಕರ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕುಟುಂಬದಲ್ಲಿ ಕೆಲವು ಸ್ತ್ರೀ ಸದಸ್ಯರ ಆರೋಗ್ಯ ಚಿಂತೆಗೆ ಕಾರಣವಾಗಬಹುದು. ನಿಮ್ಮ ಪ್ರೇಮ ಜೀವನವಾಗಿ ಮದುವೆಯ ಪ್ರಸ್ತಾಪ ಜೀವನಪೂರ್ಣದ ಬಂಧದಲ್ಲಿ ಬದಲಾಗಬಹುದು.

### ಕುಂಭ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಕೋಪ ಅಲ್ಪಾವಧಿ ಹಾಗೂ ಅದು ನಿಮ್ಮನ್ನು ತೊಂದರೆಯಲ್ಲಿ ಸಿಲುಕಿಸಬಹುದೆಂದು ಅರ್ಥ ಮಾಡಿಕೊಳ್ಳುವ ಸಮಯ.

### ಮೀನ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ಒಬ್ಬ ಹಳೆಯ ಸ್ನೇಹಿತರು ಸಂಜೆ ನಿಮಗೆ ಕರೆ ಮಾಡುತ್ತಾರೆ ಮತ್ತು ಹಳೆಯ ನೆನಪುಗಳನ್ನು ತೆರೆದಿಡುತ್ತಾರೆ. ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ. ಸಹೋದ್ಯೋಗಿಗಳು ನಿಮಗೆ ಕೆಲಸದಲ್ಲಿ ಕ್ರಿಯಾತ್ಮಕ ಮತ್ತು ಪ್ರಗತಿಪರ ಬದಲಾವಣೆಯನ್ನು ಮಾಡಲು ಬೆಂಬಲಿಸುತ್ತಾರೆ.

# ಅಂಗಾಂಗ ದಾನದಲ್ಲಿ ಭಾರತ ಕೊನೆಯ ಸ್ಥಾನದಲ್ಲಿದೆ: ಕಳವಳ ವ್ಯಕ್ತಪಡಿಸಿದ ಡಾ. ಎ.ಎಂ. ಶಿಲ್ಪಶ್ರೀ




**ದಾವಣಗೆರೆ:** ವಿಶ್ವದಲ್ಲಿ ಸ್ಪೇನ್ ನಂತಹ ಪುಟ್ಟ ದೇಶ ಅಂಗಾಂಗ ದಾನದಲ್ಲಿ ಮೊದಲ ಸ್ಥಾನದಲ್ಲಿದ್ದು, ನಮ್ಮ ಭಾರತ ದೇಶ ಕೊನೆಯ ಸ್ಥಾನದಲ್ಲಿದೆ ಎಂಬ ಕಟುಸತ್ಯವನ್ನು ಜಜಮು ವೈದ್ಯಕೀಯ ಮಹಾವಿದ್ಯಾಲಯ, ಅರಿವಳಿಕೆ ವಿಭಾಗದ ಪ್ರಾಧ್ಯಾಪಕಿ ಡಾ. ಎ.ಎಂ. ಶಿಲ್ಪಶ್ರೀ ತಿಳಿಸಿದರು.

ನಗರದ ರಾ.ಲ. ಕಾನೂನು ಕಾಲೇಜು, ಯೂತ್ ರೆಡ್ ಕ್ರಾಸ್ ವಿಭಾಗ ಮತ್ತು ರಾಷ್ಟ್ರೀಯ ಸೇವಾ ಯೋಜನೆ ಮತ್ತು ಎಸ್.ಎಸ್. ಕೇರ್ ಟ್ರಸ್ಟ್ ಸಹಯೋಗದಲ್ಲಿ ಕಾಲೇಜಿನ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ 'ಅಂಗಾಂಗ ದಾನ ಅರಿವು' ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ಅವರು ಮಾತನಾಡಿದರು.

ದೇಶದಲ್ಲಿ ವಾರ್ಷಿಕ 1.6 ಲಕ್ಷ ಜನರು ರಸ್ತೆ ಅಫಘಾತದಲ್ಲಿ ಸಾಯುತ್ತಿದ್ದಾರೆ. ಅವರಲ್ಲಿ ಮಧ್ಯಮ ವಯಸ್ಸಿನವರೇ ಹೆಚ್ಚಾಗಿದ್ದು, ಇವರಲ್ಲಿ ಮೆದುಳಿನ ಕಾಂಡದ ಸಾವನ್ನಪ್ಪುವವರು ಇದ್ದಾರೆ. (ಬ್ರೈನ್ ಡೆಡ್) ಆದರೆ ಅಂಗಾಂಗ ದಾನ ಮಾಡುವವರ ಸಂಖ್ಯೆ 1 ಲಕ್ಷ ಜನರಲ್ಲಿ 0.05 ವ್ಯಕ್ತಿಗಳು ಮಾತ್ರ. ಆದರೆ ಸ್ಪೇನ್ ದೇಶದಲ್ಲಿ ಲಕ್ಷಕ್ಕೆ 35 ಜನರು ಅಂಗಾಂಗ ದಾನ ಮಾಡುತ್ತಾರೆ ಎಂದರು.

ಫೆಬ್ರವರಿ 14 ರಾಷ್ಟ್ರೀಯ ಅಂಗ ದಾನಿಗಳ ದಿನಾಚರಣೆ ಹಾಗೂ ಆಗಸ್ಟ್ 13 ರಂದು ವಿಶ್ವ ಅಂಗದಾನ ದಿನವನ್ನಾಗಿ ಆಚರಿಸಲಾಗುತ್ತದೆ. ಈ ದಿನದಂದು ಅಂಗದಾನದ ಮಹತ್ವ ತಿಳಿಸುವ ಮೂಲಕ ಅರಿವು ಮೂಡಿಸಲಾಗುತ್ತದೆ. ಅಂಗದಾನವನ್ನು

ಒಬ್ಬ ವ್ಯಕ್ತಿಯ ಮೆದುಳಿನ ಕಾಂಡದ ಸಾವಿನ ನಂತರ ಅಥವ ಸತ್ತ ನಂತರ ಆತನ ದೇಹದ ಅಂಗಾಂಗವನ್ನು ದಾನ ಮಾಡುವುದಕ್ಕೆ 'ಅಂಗಾಂಗ ದಾನ' ಎನ್ನುತ್ತೇವೆ ಎಂದು ಅರಿವು ಮೂಡಿಸಿದರು.

ಶ್ವಾಸಕೋಶ, ಹೃದಯ, ಮೂತ್ರಪಿಂಡ, ಯಕೃತ್, ಕರಳು, ಮೇದೋಜೀರಕ ಗ್ರಂಥಿ, ಅಂಗಾಂಶಗಳು, ಕಣ್ಣಿನ ಪೊರೆ, ಚರ್ಮ, ಹೃದಯದ ಕಲಾಪಗಳು, ಅಸ್ಥಿ ಮಜ್ಜೆ ಕಸಿ ಮಾಡಲಾಗುವುದು. ಇದಕ್ಕಾಗಿ ಅಂಗಾಂಗ ದಾನದ ಅವಶ್ಯಕತೆ ಇದೆ. ಭಾರತದಲ್ಲಿ ನಿತ್ಯ 6000 ಜನರು ಅಂಗಾಂಗ ವೈಫಲ್ಯದಿಂದ ದಾನಿಗಳು ದೊರಕದೆ ಸಾಯುತ್ತಿದ್ದಾರೆ. ಪ್ರತಿ 17 ನಿಮಿಷಕ್ಕೆ ಒಬ್ಬರು ಅಂಗಾಂಗ ದಾನ ದೊರಕದೆ ಸಾವನ್ನಪ್ಪುತ್ತಿದ್ದಾರೆ ಎನ್ನುವ ಮೂಲಕ ಅಂಗಾಂಗ ದಾನದ ಮಹತ್ವ ಎಷ್ಟಿದೆ ಎಂಬುದನ್ನು ತೆರೆದಿಟ್ಟರು.

ಸಕ್ಕರೆ ರೋಗಿಗಳ ತವರೂರಾದ ಭಾರತದಲ್ಲಿ ವರ್ಷಕ್ಕೆ 1.5 ಲಕ್ಷ ಜನರು ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದಾರೆ. 5000 ರೋಗಿಗಳಲ್ಲಿ ಹೃದಯ ಸಂಬಂಧಿ ಕಾಯಿಲೆಗಳಿಂದ ನರಳುತ್ತಿದ್ದಾರೆ. ಹುಟ್ಟಿದ ಮೇಲೆ ಎಲ್ಲರ ಸಾವು ನಿಶ್ಚಿತ. ನಮ್ಮೊಂದಿಗೆ ನಮ್ಮ ಅಂಗಗಳು ಮಣ್ಣಾಗುವ ಬದಲು ಮತ್ತೊಬ್ಬರಿಗೆ ಉಪಯೋಗವಾದರೆ ಜೀವನ ಸಾರ್ಥಕ. ಎಲ್ಲಾ ದಾನಗಳಿಗಿಂತಲೂ ಅಂಗದಾನ ಪುಣ್ಯದದಾನ. ನಟ ಪುನೀತ್ ರಾಜ್ ಕುಮಾರ್ ರಂತೆ ಬದುಕಿದ್ದವರ ಜೀವನವನ್ನು ಬೆಳಗುವ ಸಾಧ್ಯತೆ ಇದೆ ಎಂದು ಹೇಳುವ ಮೂಲಕ ಅರಿವು ಮೂಡಿಸಿದರು.

ನಮ್ಮಲ್ಲಿ ಅಂಗಾಂಗ ದಾನಕ್ಕೆ ಮುಂದೆ ಬರದಿರಲು ಕಾರಣ, ನಕಾರಾತ್ಮಕ ಭಾವನೆ, ತಪ್ಪು ಕಲ್ಪನೆ, ಅರಿವಿನ ಕೊರತೆ, ಧರ್ಮದ ಕಾರಣ ನೀಡುವುದು ಇತ್ಯಾದಿ. ಈ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದರಲ್ಲದೆ, ಅಂಗಾಂಗ ದಾನ ನೀಡಲು ಇಚ್ಚಿಸುವವರು 'ಜೀವನ ಸಾರ್ಥಕತೆ' ವೆಬ್ ಸೈಟ್ ಗೆ ಭೇಟಿ ನೀಡಿದರೆ ಮಾಹಿತಿ ದೊರಕಲಿದೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜೆಜೆಎಂ ವೈದ್ಯಕೀಯ ಮಹಾವಿದ್ಯಾಲಯ ಮಕ್ಕಳ ವಿಭಾಗದ ಮುಖ್ಯಸ್ಥ ಡಾ. ಮೂಗನಗೌಡ ಪಾಟೀಲ್ ಮಾತನಾಡಿ,

ಎಸ್.ಎಸ್. ಕೇರ್ ಟ್ರಸ್ಟ್ ವತಿಯಿಂದ ರಕ್ತದಾನ ಶಿಬಿರ, ಕ್ಯಾನ್ಸರ್ ತಪಾಸಣೆ ಶಿಬಿರ, ಪ್ರಥಮ ಚಿಕಿತ್ಸೆ ತರಬೇತಿ, ದಂತ ಚಿಕಿತ್ಸಾ ಶಿಬಿರಗಳನ್ನು ನಡೆಸಿಕೊಂಡು ಬರುತ್ತಿದ್ದು, ಬೇತೂರು ರಸ್ತೆಯಲ್ಲಿರುವ ಎಸ್.ಎಸ್. ಆಸ್ಪತ್ರೆಯಲ್ಲಿ 16 ಡಯಾಲಿಸಿಸ್ ಯಂತ್ರಗಳು ಮೂಲಕ ಉಚಿತ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅದರ ಕಾರ್ಯಚಟುವಟಿಕೆಗಳನ್ನು ತಿಳಿಸಿದರಲ್ಲದೆ, ಜೀವ ಉಳಿಸಲು ಅಂಗಾಂಗ ದಾನ ಅತ್ಯವಶ್ಯ. ವಿದ್ಯಾರ್ಥಿಗಳು ಈ ಕುರಿತು ನಿಮ್ಮ ಕುಟುಂಬ ಹಾಗೂ ನೆರೆಹೊರೆಯಲ್ಲಿ ಜಾಗೃತಿ ಮೂಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜು ಪ್ರಾಂಶುಪಾಲ ಡಾ.ಜಿ.ಎಸ್. ಯತೀಶ್ ವಹಿಸಿ ಅಧ್ಯಕ್ಷೀಯ ನುಡಿಗಳನ್ನಾಡಿದರು.

ಕಾರ್ಯಕ್ರಮ ಸಂಯೋಜಕರಾದ ಜಿ.ಹೆಚ್. ತೃಪ್ತಿ, ಡಾ. ಬಿ.ಎಂ. ದಿಲೀಪ್ ಕುಮಾರ್, ಹೆಚ್.ಆರ್. ಪವನ್ ಹಾಗೂ ಬೋಧಕವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ತಾಳ್ಮೆ ಬುದ್ಧಿಶಕ್ತಿ ಬೆಳವಣಿಗೆಗೆ ಸಹಕಾರಿ ಚದುರಂಗ: ಗಡಿಗುಡಾಳ್ ಮಂಜುನಾಥ್




**ದಾವಣಗೆರೆ :** ನಗರದ ಗುರುಭವನದಲ್ಲಿ ಇಂದು ದಾವಣಗೆರೆ ಜಿಲ್ಲಾ ಚೆಸ್ ಅಸೋಸಿಯೇಷನ್ ವತಿಯಿಂದ 16 ವರ್ಷದೊಳಗಿನ ಮತ್ತು ಓಪನ್ ರಾಪಿಡ್ ಚೆಸ್ ಪಂದ್ಯಾವಳಿಯನ್ನು ಏರ್ಪಡಿಸಲಾಗಿತ್ತು ಈ ಪಂದ್ಯಾವಳಿಯ ಉದ್ಘಾಟನೆಯನ್ನು ಮಹಾನಗರ ಪಾಲಿಕೆಯ ವಿರೋಧ ಪಕ್ಷದ ನಾಯಕರಾದ ಗಡಿಗುಂಡಾಳ ಮಂಜುನಾಥ ಉದ್ಘಾಟಿಸಿ ಈ ಪಂದ್ಯಾವಳಿಯಲ್ಲಿ ರಾಜ್ಯದ 150ಕ್ಕೂ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸಿದ್ದಾರೆ ಚದುರಂಗ ಆಟ ಮಕ್ಕಳಿಗೆ ಬುದ್ಧಿಶಕ್ತಿ ತಾಳೆ ತಾಳ್ಮೆ ಆತ್ಮಸ್ಥೈರ್ಯ ಬೆಳವಣಿಗೆ ಆಗುತ್ತದೆ ಮಕ್ಕಳು ಇನ್ನು ಹೆಚ್ಚಿನ ರೀತಿಯಲ್ಲಿ ಕಲಿತು ದಾವಣಗೆರೆಗೆ ಕೀರ್ತಿ ತರಲಿ ಎಂದು ಹಾರೈಸಿದರು.

ಈ ಉದ್ಘಾಟನೆಯ ಸಮಾರಂಭದಲ್ಲಿ ಮಹಾನಗರ ಪಾಲಿಕೆ ಸದಸ್ಯರಾದ ಈ ನಾಗರಾಜ್ ಮಾಜಿ ಸದಸ್ಯರಾದ ಡಿ ಎನ್ ಜಗದೀಶ್ ದಾವಣಗೆರೆ ಜಿಲ್ಲಾ ಕೆರಂ ಅಸೋಸಿಯೇಷನ್ ಕಾರ್ಯದರ್ಶಿಗಳಾದ ಕೆರಂ ಗಣೇಶ್ ಅಂತರರಾಷ್ಟ್ರೀಯ ತೀರ್ಪುಗಾರರಾದ ಪ್ರಾಣೇಶ್ ಯಾದವ್ ಸಂಘದ ಕಾರ್ಯದರ್ಶಿಗಳಾದ ಯುವರಾಜ್ ಮಂಜುಳಾ ತರುಣ್ ಇನ್ನು ಮುಂತಾದವರು ಇದ್ದರು

ಈ ಪಂದ್ಯಾವಳಿ ವಿಜೇತರಿಗೆ 16 ವರ್ಷದ ಒಳಗಿನ ವಿಭಾಗದಲ್ಲಿ ಶಿವಮೊಗ್ಗದ ವರ್ಚಸ್ ಪ್ರಥಮ ಸ್ಥಾನ 2000 ನಗದು ಹಾಗೂ ಭದ್ರಾವತಿಯ ಇಬ್ಬನಿ ಃ ಉ ದ್ವಿತೀಯ ಸ್ಥಾನ 1500 ಹಾಗೂ ದಾವಣಗೆರೆಯ ಸಾತ್ವಿಕ್ ನಾಯಕ್ ತೃತೀಯ ಸ್ಥಾನ 1000 ನಾಲ್ಕು ಮತ್ತು ಐದನೇ ಸ್ಥಾನ ವನ್ನು ಪ್ರವೀಣ್ ಪ್ರಭಾಕರ್ ಅಮೃತ್ ಬಿ ರಾಮ್ ಶೆಟ್ಟರ್ ತಲಾ 500 ನಗದು ಬಹುಮಾನ ಹಾಗೂ ಓಪನ್ ಮುಕ್ತ ಪಂದ್ಯಾವಳಿಯಲ್ಲಿ ಶಿವಮೊಗ್ಗದ ಅಜಯ್ ಎಂ ಪ್ರಥಮ ಸ್ಥಾನ 3000 ನಗದು ಹಾಗೂ ಶಿರಸಿಯ ರಾಮಚಂದ್ರ ಭಟ್ ದ್ವಿತೀಯ ಸ್ಥಾನ 2500 ಶಿವಮೊಗ್ಗದ ವಿಲ್ಸನ್ ಆಂಡ್ರಾಯ್ಡ್ ತೃತೀಯ ಸ್ಥಾನ 2000 ವಿಲಾಸ್ ಅಂಡ್ ನಾಲ್ಕನೇ ಸ್ಥಾನ 1500 , ದಾವಣಗೆರೆಯ ಸಮೀರ್ ಅಹ್ಮದ್ ಐದನೇ ಸ್ಥಾನ 1000 ಹಾಗೂ ನಗದು ಬಹುಮಾನವನ್ನು ಪಡೆದವರು.

ಈ ಪಂದ್ಯಾವಳಲ್ಲಿ ಹದಿನಾರು ವರ್ಷದ ಒಳಗಿನ ವಿಭಾಗಗಳಲ್ಲಿ ಗ06– ಗ08– ಗ10 – ಗ12– ಗ14– ಗ16 ಓಪನ್ ಎಲ್ಲಾ ವಿಭಾಗಗಳಲ್ಲಿ ತಲ 10 ಸ್ಥಾನಗಳಿಗೆ ಟ್ರೋಫಿ ನೀಡಲಾಯಿತು ಹಾಗೂ ಅತಿ ಹಿರಿಯ ಆಟಗಾರ ಮತ್ತು ಅತಿ ಹಿರಿಯ ಮಹಿಳೆ ಆಟಗಾರ್ತಿ, ತಲಾ ಮೂರು ಪ್ರಶಸ್ತಿಯನ್ನು ಹಾಗೂ ನಗದು ಬಹುಮಾನವನ್ನು ನೀಡಿ ಗೌರವಿಸಲಾಯಿತು.

# ನಟನ ರಂಗ ಭೂಮಿ ಡಿಪ್ಲೋಮಾಗೆ ಆಹ್ವಾನ

**ಚಿಕ್ಕಮಗಳೂರು:** ಮಂಡ್ಯರಮೇಶ್ ನೇತೃತ್ವದನಟನರ 'ಂಗಶಾಲೆಯರಂಗಭೂಮಿಡಿಪ್ಲೊಮಾ 2025–26 (ಒಂದು ವರ್ಷದಅಭಿನಯ ಮತ್ತುರಂಗತರಬೇತಿ) ನೇ ಸಾಲಿನ ಪ್ರವೇಶಪ್ರಕ್ರಿಯೆ ಮತ್ತುಅಭ್ಯರ್ಥಿಗಳ ಸಂದರ್ಶನ (ಆಡಿಷನ್) ಮೇ 25ರಂದು ಬೆಳಿಗ್ಗೆ 10 ಗಂಟೆಗೆ ಮೈಸೂರಿನರಾಮಕೃಷ್ಣನಗರದಲ್ಲಿರು ವ ನಟನರಂಗಶಾಲೆಯಲ್ಲಿ ನಡೆಯಲಿದೆ.

ನಟನರಂಗಶಾಲೆಯು ಕಳೆದ ಅನೇಕ ವರ್ಷಗಳಿಂದ ರಂಗಭೂಮಿಯಲ್ಲಿ ನಿರಂತರ ಕ್ರಿಯಾಶೀಲವಾಗಿದ್ದುರಂಗಭೂಮಿ ಯಅಧ್ಯಯನ, ಪ್ರಾತ್ಯಕ್ಷಿಕೆ, ಪ್ರಯೋಗ, ಪ್ರದರ್ಶನಗಳ ಮೂಲಕ ಶ್ರೇಷ್ಠತೆಯನ್ನು ಸಾಧಿಸುವುದರತ್ತ ಸತತವಾಗಿ ಪ್ರಯತ್ನಶೀಲವಾಗಿದೆ. ತನ್ನಚಟುವಟಿಕೆಯ ಭಾಗವಾಗಿ 16 ರಿಂದ 32 ವರ್ಷದ ಒಳಗಿನ ಆಸಕ್ತ ಯುವಕಯುವತಿಯರಿಗೆಒಂದು ವರ್ಷದ ವಸತಿ ರಹಿತರಂಗಭೂಮಿಡಿಪ್ಲೊಮಾಕೋರ್ಸ್ಅನ್ನು ನಡೆಸುತ್ತಿದ್ದು, ಕಳೆದ ಅನೇಕ ವರ್ಷಗಳಿಂದ ಕರ್ನಾಟಕದ ಬೇರೆ ಬೇರೆ ಭಾಗಗಳಿಂದ ವಿದ್ಯಾರ್ಥಿಗಳು ಆಗಮಿಸಿ ನಟನರಂಗಶಾಲೆಯಲ್ಲಿತರಬೇತಿ ಪಡೆಯುತ್ತಿದ್ದಾರೆ. ನಟನರಂಗಶಾಲೆಯಲ್ಲಿತರಬೇತಿ ಪಡೆದ ಸುಮಾರು 500ಕ್ಕೂ ಹೆಚ್ಚು ಕಲಾವಿದರುದೇಶದಾದ್ಯಂತ ವಿವಿಧ ಮಾಧ್ಯಮಗಳಲ್ಲಿ ಕೆಲಸ ಮಾಡುತ್ತಿದ್ದಾರೆ.

ಪ್ರತಿದಿನ ಸಂಜೆ 5.30ರಿಂದ ರಾತ್ರಿ9ರವರೆಗೆ ತರಗತಿಗಳು ನಡೆಯಲಿದ್ದು, ಅಭಿನಯ, ರಂಗ ಸಿದ್ಧಾಂತ, ರಂಗ ಸಂಗೀತ, ಆಂಗಿಕ ಚಲನೆ, ಧ್ವನಿ ಬಳಕೆ, ಪ್ರಸಾಧನ, ಬೆಳಕು, ರಂಗ ವಿನ್ಯಾಸ, ಪರಿಕರ ನಿರ್ಮಾಣ, ರಂಗಇತಿಹಾಸ, ನಾಟಕತಯಾರಿ, ಪ್ರದರ್ಶನ.. ಹೀಗೆ ರಂಗಭೂಮಿಯ ಬೇರೆ ಬೇರೆ ಆಯಾಮಗಳ ಪರಿಚಯಾತ್ಮಕ ಪ್ರಾಯೋಗಿಕ ತರಗತಿಗಳು ನಡೆಯಲಿವೆ. ನೇರ ಸಂದರ್ಶನದ ಮೂಲಕ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು, ಆಸಕ್ತ ಅಭ್ಯರ್ಥಿಗಳು ಮೇಲ್ಕಂಡ ದಿನಾಂಕದಂದೇ ಸಂದರ್ಶನದಲ್ಲಿ ಭಾಗವಹಿಸಬಹುದು. ರಂಗಭೂಮಿಯನ್ನುಗಂಭೀರವಾಗಿ ಅಭ್ಯಸಿಸಲು ಆಸಕ್ತಿ ಇರುವ ಅಭ್ಯರ್ಥಿಗಳು ಸಂಸ್ಥೆಯ ವೆಬ್‌ಸೈಟ್ (ತಿತಿತಿ. ಟಚಿಣಚಿಟಚಿಟಥಿಣಡಿಇ.ಂಡಿರ) ಅಥವಾಕಚೇರಿಯಲ್ಲಿ ನಿಗದಿತ ಶುಲ್ಕ ಪಾವತಿಸಿ ಅರ್ಜಿ ಪಡೆದು ಅಂಚೆ ಮುಖಾಂತರಅಥವಾ ನೇರವಾಗಿತಲುಪಿಸಬೇಕು.ಆಡಿಷನ್ ಮತ್ತು ಪ್ರವೇಶಾತಿಕುರಿತ ಸೂಚನೆಗಳು ಮತ್ತು ಹೆಚ್ಚಿನ ಮಾಹಿತಿಗಳು ವೆಬ್‌ಸೈಟ್‌ನಲ್ಲಿ ಲಭ್ಯವಿದೆ. ಹೆಚ್ಚಿನ ಮಾಹಿತಿಗೆ7259537777, 9480468327, 9845595505 ಮೊಬೈಲ್ ಸಂಖ್ಯೆಗಳನ್ನು ಸಂಪರ್ಕಿಸಬಹುದುಎಂ ದುನಟನರಂಗಶಾಲೆಯ ಪ್ರಕಟಣೆ ತಿಳಿಸಿದೆ.

ರಮಾಕಾಂತ ಜೋಷಿ ನಿಧನಕ್ಕೆ

# ಸಚಿವ ಎಚ್.ಕೆ.ಪಾಟೀಲ ಸಂತಾಪ

**ಗದಗ:** ಕನ್ನಡ ಸಾರಸ್ವತ ಲೋಕದ ಅಟ್ಟ ಎಂದೇ ಕರೆಯಲ್ಪಡುತ್ತಿದ್ದ ಮನೋಹರ ಗ್ರಂಥ ಮಾಲಾದ ವ್ಯವಸ್ಥಾಪಕರು, ನಿವೃತ್ತ ಪ್ರಾಧ್ಯಾಪಕರು ಆಗಿದ್ದ ಶ್ರೀ.ರಮಾಕಾಂತ ಜೋಷಿ (89) ಅವರ ಅಕಾಲಿಕ ನಿಧನಕ್ಕೆ ರಾಜ್ಯ ಕಾನೂನು, ಶಾಸನ ರಚನೆ, ಮಾನವ ಹಕ್ಕುಗಳು, ಸಂಸಧೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರ ಎಚ್.ಕೆ.ಪಾಟೀಲರು ಶೋಕ ವ್ಯಕ್ತಪಡಿಸಿದ್ದಾರೆ.

ಖ್ಯಾತ ಸಾಹಿತಿ ಮತ್ತು ಮನೋಹರ ಗ್ರಂಥ ಮಾಲಾದ ರೂವಾರಿ ಜಿ.ಬಿ.ಜೋಷಿ (ಜಡಭರತ) ಅವರ ಪುತ್ರರಾಗಿದ್ದ ರಮಾಕಾಂತ ಜೋಷಿ ಅವರು ಧಾರವಾಡದ ಸಾಹಿತ್ಯ, ಸಂಸ್ಕೃತಿ, ಕಲೆ, ಸಂಗೀತ ನಾಡಿಗೆ ಪರಿಚಯಿಸುವುದರಲ್ಲಿ ತೊಡಗಿಸಿಕೊಂಡಿದ್ದರು ಎಂದು ಸ್ಮರಿಸಿದ್ದಾರೆ.

ಮನೋಹರ ಗ್ರಂಥ ಮಾಲಾ ಎಂದರೆ ಖ್ಯಾತ ಸಾಹಿತಿಗಳು, ದಿಗ್ಗಜರು, ಕವಿಗಳು, ವಿಮರ್ಶಕರು, ಸಂಗೀತಗಾರರು ಸೇರುವ ಹಾಗೂ ಚರ್ಚಿಸುವ ಅವರಿಗೆಲ್ಲಾ ಸ್ಫೂರ್ತಿ ನೀಡುವ ಸ್ಥಳವಾಗಿತ್ತು ಎಂದರೆ ತಪ್ಪಾಗಲಿಕ್ಕಿಲ್ಲ.

ಕನ್ನಡದ ಕೀರ್ತಿ ಕೀರ್ತಿನಾಥ ಕುರ್ತಕೋಟಿ, ಗಿರೀಶ ಕಾರ್ನಾಡ, ಚಂಬೆಳಕಿನ ಕವಿ ಚನ್ನವೀರ ಕಣವಿ, ಗಿರಡ್ಡಿ ಗೋವಿಂದರಾಜ ಖ್ಯಾತ ಸಂಶೋಧಕ ಎಂ.ಎಂ.ಕಲಬುರ್ಗಿ ಇನ್ನೂ ಅನೇಕ ಖ್ಯಾತ ಸಾಹಿತಿಗಳ ಸಂಗಮ ಇಲ್ಲಿರುತ್ತಿತ್ತು. ಹೀಗಾಗಿ ಮನೋಹರ ಗ್ರಂಥಮಾಲಾ ಅಟ್ಟ ಎಂದರೆ ಕನ್ನಡ ಸಾಹಿತ್ಯ, ಸಂಗೀತ ಕ್ಷೇತ್ರವನ್ನು ಜತೆಗೆ ಧಾರವಾಡದ ಹಿರಿಮೆಯನ್ನು ಅಟ್ಟಕ್ಕೇರಿಸಿದ ಸಂಸ್ಥೆ ಎಂದು ಎಚ್.ಕೆ.ಪಾಟೀಲ ಹೇಳಿದ್ದಾರೆ.

ರಮಾಕಾಂತ ಜೋಷಿ ಅವರ ನಿಧನದಿಂದ ಧಾರವಾಡದ ಸಾಹಿತ್ಯ, ಸಾಂಸ್ಕೃತಿಕ ಲೋಕಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಹಾಗೂ ಕೊಂಡಿಯೊಂದು ಕಳಚಿದಂತಾಗಿದೆ. ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದಾರೆ.

# ಗುರು ತೋರಿದ ದಾರಿಯಲ್ಲಿ ಜೀವನದ ತೇರು ಎಳೆಯಿರಿ: ರಾಮಚಂದ್ರ ಶಾಸ್ತ್ರಿ

## ಶ್ರೀ ಆದಿಚುಂಚನಗಿರಿ ಮಠದಲ್ಲಿ ನಡೆದ 128ನೇ ಹುಣ್ಣಿಮೆ



ಹಾಸನದ ಶ್ರೀ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ನಡೆದ ಗುರು ತೋರಿದ ದಾರಿ ತಿಂಗಳ ಮಾಮನ ತೇರು 128ನೇ ಹುಣ್ಣಿಮೆ ಕಾರ್ಯಕ್ರಮವನ್ನು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನದ ಮಠ ಹಾಸನದ ಶ್ರೀ ಶಂಭುನಾಥ ಸ್ವಾಮೀಜಿ ಉದ್ಘಾಟಿಸಿದರು.

**ಹಾಸನ:** ನಗರದ ಶ್ರೀ ಆದಿ ಚುಂಚನಗಿರಿ ಮಹಾ ಸಂಸ್ಥಾನ ಮಠವು ಯುಗಯೋಗಿ, ಪರಮಪೂಜ್ಯ ಜಗದ್ಗುರು ಪದ್ಮಭೂಷಣ ಶ್ರೀ ಶ್ರೀ ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿ ಅವರ ಸಂಸ್ಮರಣಾರ್ಥ ನಡೆಸಿಕೊಂಡು ಬರುತ್ತಿರುವ ಗುರು ತೋರಿದ ದಾರಿ ತಿಂಗಳ ಮಾಮನ ತೇರಿನ 128ನೇ ಹುಣ್ಣಿಮೆಯ ಕಾರ್ಯಕ್ರಮದ ಅಂಗವಾಗಿ 7 ದಿನಗಳ ಕಾಲ ನಡೆದ ಆಧ್ಯಾತ್ಮಿಕ ಚಿಂತನ ಶಿಬಿರದ ಸಮಾರೋಪ ಸಮಾರಂಭವು ಎಂ.ಜಿ ರಸ್ತೆಯ ಶ್ರೀ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಇತ್ತೀಚೆಗೆ ಜರುಗಿತು.

ಮಹಾರಾಷ್ಟ್ರದ ಸಂಸ್ಕೃತ ವಿದ್ಯಾ ಸಾಹಿತ್ಯ ಪ್ರವೀಣರಾದ ವಿದ್ವಾನ್ ಶ್ರೀ ರಾಮಚಂದ್ರ ಶಾಸ್ತ್ರಿಗಳು ಸಮಾರೋಪ ಸಮಾರಂಭದಲ್ಲಿ ಆಶೀರ್ವಚನ ನೀಡಿ,ಗುರು ತೋರಿದ ದಾರಿಯಲ್ಲಿ ನಮ್ಮ ಜೀವನವೆಂಬ ತೇರನ್ನು ನಡೆಸಿದರೆ ಯಾವುದೇ ವಿಘ್ನಗಳು ಎದುರಾಗಲಾರವು ಎಂಬುದನ್ನು ಯಾರು ಮರೆಯಬಾರದು, ಗುರುವಿನ ಸತ್ಸಂಗ ನಮ್ಮನ್ನು ಪರಮಾತ್ಮನೆಡೆಗೆ ಕರೆದೊಯ್ಯುತ್ತದೆ ಎಂದರು.

ಗುರುವಿಗೆ, ಗುರುತ್ವಕ್ಕೆ ಇರುವ ಶಕ್ತಿಯನ್ನು ಯಾರು ಅಲಕ್ಷ್ಯ ಮಾಡಬಾರದು. ಮನಸ್ಸಿನಲ್ಲಿ ಗುರುವಿನ ಬಗೆಗೆ ಪೂಜ್ಯ ಭಾವನೆ ಮೂಡಿಸಿಕೊಂಡು, ಗುರು ತೋರುವ ಸನ್ಮಾರ್ಗದಲ್ಲಿ ನಡೆದು, ನಮ್ಮಲ್ಲಿ ಮೂಡುವ ಜ್ಞಾನವನ್ನು ಪಸರಿಸುವ ಕೆಲಸ ಮಾಡಿಕೊಂಡು ಹೋದಾಗ ಮಾತ್ರ ಈ ಬದುಕಿಗೆ ಅರ್ಥ ಸಿಗಲಿದೆ ಎಂದರು.

ಮನುಷ್ಯ ಯಾವುದರಿಂದ ತನ್ನ ಧಾರಣೆಯಾಗುತ್ತದೆ ಎಂಬುದನ್ನು ಅರಿಯಬೇಕು. ಸತ್ಯ,ದಾನ,ದಯಾ,ತಪಸ್ಸು ನಮ್ಮೊಳಗೆ ರೂಢಿಸಿಕೊಂಡು ಬಂದರೆ ಆತನಿಗೆ ಮೋಕ್ಷ ದೊರೆಯಲಿದೆ. ಆತ ಸಮಾಜ ಹಾಗೂ ಭಗವಂತನಿಗೆ ಹತ್ತಿರವಾಗಿ ಬದುಕಿ ಸಮಾಜದಲ್ಲಿ ಶಾಶ್ವತನಾಗಿ ಉಳಿಯುತ್ತಾನೆ ಎಂದರು.

ಬಾಗಲಕೋಟೆಯ ಮಹಲಿಂಗಪುರದ ಶ್ರೀ ಸಿದ್ಧಾರೂಢ ಬ್ರಹ್ಮ ವಿದ್ಯಾಶ್ರಮದ ಪೂಜ್ಯ ಸದ್ಗುರು ಶ್ರೀ ಶ್ರೀ ಸಹಜಾನಂದ ಸ್ವಾಮಿಗಳು ಶ್ರೀಮನ್ನಿಜಗುಣ ಶಿವಯೋಗಿಗಳಿಂದ ವಿರಚಿಸಲ್ಪಟ್ಟ ಕೈವಲ್ಯ ಪದ್ಧತಿ ನೀತಿ ಕ್ರಿಯಾಚರ್ಯ ಸ್ಥಲ ವಿಷಯವಾಗಿ ಉಪನ್ಯಾಸ ನೀಡಿ, ಧರ್ಮ ಮತ್ತು ಅಧ್ಯಾತ್ಮ ಸಂಸ್ಕಾರದ ಬಲದಿಂದ ಮಾನವ ಜನ್ಮದ ಸಫಲತೆ ಪಡೆದುಕೊಳ್ಳಬೇಕು. ಮನುಷ್ಯ ತನ್ನ ಜೊತೆಗೆ ಬರದೇ ಇರುವ ಕ್ಷಣಿಕ ಸುಖಗಳ ಹಿಂದೆ ಬೆನ್ನುಹತ್ತಿದ್ದಾನೆ. ಶಾಶ್ವತ ಸುಖ ನೀಡುವುದು ಸತ್ಸಂಗ ಮಾತ್ರ. ಉಳಿದಿದೆಲ್ಲವೂ ತೋರಿಕೆಗೆ ಮಾತ್ರ ಸುಖ ನೀಡುತ್ತವೆ. ಬಹುಜನ್ಮದ ಪ್ರತಿಫಲವಾಗಿ ಸತ್ಸಂಗ ಮತ್ತು ವಿವೇಕ ಸಿಗುತ್ತದೆ ಎಂದರು.

ಗುರುವಿಗೆ, ಗುರುತ್ವಕ್ಕೆ ಇರುವ ಶಕ್ತಿಯನ್ನು ಯಾರು ಅಲಕ್ಷ್ಯ ಮಾಡಬಾರದು. ಮನಸ್ಸಿನಲ್ಲಿ ಗುರುವಿನ ಬಗೆಗೆ ಪೂಜ್ಯ ಭಾವನೆ ಮೂಡಿಸಿಕೊಂಡು, ಗುರು ತೋರುವ ಸನ್ಮಾರ್ಗದಲ್ಲಿ ನಡೆದು, ನಮ್ಮಲ್ಲಿ ಮೂಡುವ ಜ್ಞಾನವನ್ನು ಪಸರಿಸುವ ಕೆಲಸ ಮಾಡಿಕೊಂಡು ಹೋದಾಗ ಮಾತ್ರ ಈ ಬದುಕಿಗೆ ಅರ್ಥ ಸಿಗಲಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಡಾ.ಎಚ್.ಎಲ್ ಮಲ್ಲೇಶಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಏಳು ದಿನಗಳ ಕಾಲ ನಡೆದ ಉಪನ್ಯಾಸದ ಕಿರು ಹೊತ್ತಿಗೆ ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ದಸರೀಘಟ್ಟದ ಶ್ರೀ ಚಂದ್ರಶೇಖರನಾಥ ಸ್ವಾಮೀಜಿ,ಕಬ್ಬಳಿಯ ಶಿವಪುತ್ರನಾಥ ಸ್ವಾಮೀಜಿ,ಜವೇನಹಳ್ಳಿ ಮಠದ ಶ್ರೀ ಸಂಗಮೇಶ್ವರ ಸ್ವಾಮೀಜಿ,ತುಳಸಿಗೆರೆ ಮಠದ ಶ್ರೀ ರಮಾನಂದ ಸ್ವಾಮೀಜಿ, ಯೋಗಗುರು ರನ್ನ ಬೆಳಗಲಿಯ ಶ್ರೀ ಸದಾಶಿವ ಸ್ವಾಮೀಜಿ,ಪಂಚಭೂತೇಶ್ವರ ಮಠದ ಶ್ರೀ ರುದ್ರಮುನಿ ಸ್ವಾಮೀಜಿ ಹುಣ್ಣಿಮೆ ಕಾರ್ಯಕ್ರಮದ ಸಂಚಾಲಕ ಎಚ್.ಬಿ ಮದನಗೌಡ,ಶ್ರೀ ಮಠದ ವ್ಯವಸ್ಥಾಪಕ ಚಂದ್ರಶೇಖರ್, ಕಸಾಪ ಗೌರವ ಕಾರ್ಯದರ್ಶಿ ಬಿ.ಆರ್ ಬೊಮ್ಮೇಗೌಡ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಉಪನ್ಯಾಸಕ ಮಂಜುನಾಥ್ ಕಾರ್ಯಕ್ರಮದ ನಿರೂಪಣೆ ನಡೆಸಿಕೊಟ್ಟರು. ಭಾಗ್ಯಲಕ್ಷ್ಮೀ ಪ್ರಾರ್ಥಿಸಿದರು.ಶ್ರೀ ಮಠದ ವ್ಯವಸ್ಥಾಪಕ ಚಂದ್ರಶೇಖರ್ ಸ್ವಾಗತಿಸಿದರು, ಬಿಜಿಎಸ್ ಆಂಗ್ಲ ಮಾಧ್ಯಮ ಶಾಲೆಯ ಮುಖ್ಯೋಪಾಧ್ಯಾಯ ದರ್ಶನ್ ವಂದಿಸಿದರು.

# ಕಡೂರು ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯು 2025ನೇ ಸಾಲಿನ ರಾಜ್ಯದಲ್ಲಿನ ಎಲ್ಲಾ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ (ಐಟಿಐ) ಸರ್ಕಾರದ ಆದೇಶದಂತೆ ಮೆರಿಟ್ ಕಂ ರಿಸರ್ವೇಶನ್ ಆಧಾರಿತ ಪ್ರವೇಶಗಳನ್ನು ಆನ್‌ಲೈನ್ ಮೂಲಕ ಮಾಡಲು ಅಧಿಸೂಚನೆ ಹೊರಡಿಸಲಾಗಿದೆ.

2025ರ ಆಗಸ್ಟ್ 1ಕ್ಕೆ 14 ವರ್ಷ ಮೇಲ್ಪಟ್ಟ ವಯೋಮಿತಿಯ ಅಭ್ಯರ್ಥಿಗಳು ಸಿ.ಟಿ.ಎಸ್. ಯೋಜನೆಯಡಿಯಲ್ಲಿರುವ ತಾಂತ್ರಿಕ ಹಾಗೂ ತಾಂತ್ರಿಕೇತರ ವೃತ್ತಿಗಳಿಗೆ ರಾಜ್ಯದ ಯಾವುದೇ ಭಾಗದಿಂದ ತಿwww.cite.karnataka.gov.in <http://www.cite.karnataka.gov.in> ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ಅಭ್ಯರ್ಥಿಗಳು ಕಡೂರಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ದೊಡ್ಡಪಟ್ಟಣಗೆರೆ ರಸ್ತೆ, ಕೆಎಸ್‌ಆರ್‌ಟಿಸಿ ಡಿಪೋ ಎದುರು)ಗೆ ಮೇ 28ರೊಳಗೆ ಅರ್ಜಿ ಸಲ್ಲಿಸಬಹುದು ಮತ್ತು ಈ ವೆಬ್‌ಸೈಟ್‌ನಿಂದ ಹೆಚ್ಚಿನ ವಿವರಗಳನ್ನು ಪಡೆಯಬಹುದು. ಕಡೂರಿನ ಸಂಸ್ಥೆಯಲ್ಲಿ ಲಭ್ಯವಿರುವ ವೃತ್ತಿಗಳು: ಎಲೆಕ್ಟ್ರೀಷಿಯನ್, ಫಿಟ್ಟರ್, ಕೋಪಾ, ವೆಲ್ಡರ್

(8ನೇ ತರಗತಿ ಉತ್ತೀರ್ಣ ಹಾಗೂ ಎಸ್‌ಎಸ್‌ಎಲ್‌ಸಿ ಅನುತ್ತೀರ್ಣ), ಮೆಕ್ಯಾನಿಕ್ ಎಲೆಕ್ಟ್ರಿಕ್ ವೆಹಿಕಲ್, ಅಡ್ವಾನ್ಸ್‌ಡ್ ಸಿಎನ್‌ಸಿ ಮೆಶಿನಿಂಗ್, ಇಂಡಸ್ಟ್ರಿಯಲ್ ರೋಬೋಟಿಕ್ ಅಂಡ್ ಡಿಜಿಟಲ್ ಮ್ಯಾನ್ಯುಫ್ಯಾಕ್ಚರಿಂಗ್ ಟೆಕ್ನಿಷಿಯನ್, ಮ್ಯಾನ್ಯುಫ್ಯಾಕ್ಚರಿಂಗ್ ಪ್ರೋಸೆಸ್ ಕಂಟ್ರೋಲ್ ಅಂಡ್ ಆಟೋಮೇಶನ್, ವರ್ಚುವಲ್ ಅನಲಿಸಿಸ್ ಅಂಡ್ ಡಿಸೈನರ್ ಫೆಮ್ ಹಾಗೂ ಇಂಜಿನಿಯರಿಂಗ್ ಡಿಸೈನ್ ಟೆಕ್ನಿಷಿಯನ್. ಅರ್ಹ ಅಭ್ಯರ್ಥಿಗಳು ಇಂಟರ್‌ನೆಟ್ ಕೆಫೆ ಅಥವಾ ಸೈಬಲ್ ಸೆಂಟರ್‌ಗಳ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಪ್ರಕಟಣೆಯೊಂದರಲ್ಲಿ ತಿಳಿಸಲಾಗಿದೆ.

# ನೇರ ಸಂದರ್ಶನ

**ಚಿಕ್ಕಮಗಳೂರು:** ನಗರದ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇಂಡಿಯಾ ಲಿಟ್ರೆಸಿ ಪ್ರಾಜೆಕ್ಟ್ (ಐಎಲ್‌ಪಿ) ಈ ಖಾಸಗಿ ಕಂಪನಿಯ ಚಿಕ್ಕಮಗಳೂರು, ಕಡೂರು ಮತ್ತು ಕೊಪ್ಪ ಕೇಂದ್ರದಲ್ಲಿ ಖಾಲಿ ಇರುವ ಟೆಕ್ನಿಕಲ್ ಫೆಸಿಲಿಟೇಟರ್ ಹುದ್ದೆಗೆ ಮೇ 22 ರಂದು ಬೆಳಿಗ್ಗೆ 10.30 ಗಂಟೆಗೆ ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ.ಯಾವುದೇ ಪದವಿ, ಎಂಎಸ್ಸಿ, ಎಂಸಿಎ, ಬಿಸಿಎ, ಬಿಎಸ್ಸಿ ಮತ್ತು ಬಿಎಡ್ ಜೊತೆಗೆ ಕಂಪ್ಯೂಟರ್ ವಿದ್ಯಾರ್ಹತೆ ಹೊಂದಿರುವ 18 ರಿಂದ 40 ವರ್ಷ ವಯೋಮಿತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಈ ಸಂದರ್ಶನದಲ್ಲಿ ಭಾಗವಹಿಸಬಹುದು.

# 12 ಸ್ಥಾನಗಳಿಗೆ ಅವಿರೊಧ ಆಯ್ಕೆ

**ದಾವಣಗೆರೆ:** ಶ್ರೀ ಮುರುಘರಾಜೇಂದ್ರ ಕೋ ಆಫ್ ಬ್ಯಾಂಕಿನ ಆಡಳಿತ ಮಂಡಳಿಗೆ ನಡೆದ ಚುನಾವಣೆಯ ಪ್ರಕ್ರಿಯೆಯಲ್ಲಿ 12 ಸ್ಥಾನಗಳಿಗೆ ಮುಂದಿನ ಐದು ವರ್ಷಗಳವರೆಗೆ ಅವಿರೋಧ ಆಯ್ಕೆ ನಡೆದಿದೆ.

ಸಾಮಾನ್ಯ ಸ್ಥಾನಕ್ಕೆ ಎಂ. ಜಯಕುಮಾರ್, ಎಂ.ಎಸ್ ಶಿವಯೋಗಿ, ಎಸ್ ಓಂಕಾರಪ್ಪ, ಟಿ. ಎಂ ಉಮಾಪತಯ್ಯ, ಮಹೇಶ್ ಜಿ. ಶೇಂಡಗೆ, ಹೆಚ್.ವಿ. ಮಂಜುನಾಥ ಸ್ವಾಮಿ, ಎಸ್. ಎಸ್ ಶಮಂತ್. ಪರಿಶಿಷ್ಟ ಪಂಗಡ ಮೀಸಲು ಸ್ಥಾನಕ್ಕೆ ಎಸ್.ವಿ ರಾಮಚಂದ್ರಪ್ಪ, ಎನ್. ನೀಲಗಿರಿ, ಹಿಂದುಳಿದ ವರ್ಗ ಪ್ರವರ್ಗ ಎ ಮೀಸಲು ಸ್ಥಾನಕ್ಕೆ ಕೆ. ಎಸ್ ಸತೀಶ್, ಪ್ರವರ್ಗ ಬಿ ಮೀಸಲು ಸ್ಥಾನಕ್ಕೆ ಕೆ. ಜಿ ಚನ್ನಬಸಪ್ಪ. ಮಹಿಳಾ ಮೀಸಲು ಸ್ಥಾನಕ್ಕೆ ಜ್ಯೋತಿ ಆರ್ ಜಂಬಗಿ, ಬಿ.ವಿ. ಮಂಗಳ ಇವರುಗಳು ಬ್ಯಾಂಕಿನ ಎಮ್ ಜಯಕುಮಾರ್ ಅವರ ನೇತೃತ್ವದಲ್ಲಿ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಎಚ್. ರಮೇಶ್ ಮತ್ತು ಬ್ಯಾಂಕಿನ ವ್ಯವಸ್ಥಾಪಕ ಎಂ.ಎಸ್ ಅರುಣ್ ತಿಳಿಸಿದ್ದಾರೆ.

# ಪರಿಶಿಷ್ಟಜಾತಿ ಕುಟುಂಬಗಳ ಒಳ ಮೀಸಲಾತಿ ಸಮೀಕ್ಷೆಯ ದಿನಾಂಕ ವಿಸ್ತರಣೆ :ಜಿಲ್ಲಾಧಿಕಾರಿ

**ಚಿಕ್ಕಮಗಳೂರು.ಮೇ.19:** ಹೆಚ್ಚು ಮಳೆಯಿಂದ ಹಾಗೂ ಬೇರೆ ಬೇರೆ ಕಾರಣಗಳಿಂದ ಜಿಲ್ಲೆಯಲ್ಲಿ ನಡೆಯುತ್ತಿದ್ದ ಪರಿಶಿಷ್ಟಜಾತಿ ಕುಟುಂಬಗಳ ಒಳ ಮೀಸಲಾತಿ ಸಮೀಕ್ಷೆಯ ದಿನಾಂಕವನ್ನು ವಿಸ್ತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗೌರವಾನ್ವಿತ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನದಾಸ್ ಸಮಿತಿ ಶಿಫಾರಸ್ಸಿನಂತೆ ಈಗಾಗಲೇ ನಿಗದಿಯಾಗಿದ್ದ ಪರಿಶಿಷ್ಟಜಾತಿ ಒಳ ಮೀಸಲಾತಿ ಸಮೀಕ್ಷೆಯ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ ಮಾಹಿತಿ ನೀಡಿದರು. ಆಯೋಗದ ಶಿಫಾರಸ್ಸಿನಂತೆ ಗಣತಿದಾರರು ಮನೆ-ಮನೆ ಸಮೀಕ್ಷೆಗೆ ಬರುವ ಸಂದರ್ಭದಲ್ಲಿ ಪರಿಶಿಷ್ಟಜಾತಿ ಸಮುದಾಯದವರು ಈ ಕೆಳಗೆ ಸೂಚಿಸಿದಂತೆ ಮಾಹಿತಿಯನ್ನು ನೀಡಬೇಕು.

ಮೊದಲ ಹಂತದ ಸಮೀಕ್ಷೆಯ ದಿನಾಂಕವನ್ನು ಮೇ 5 ರಿಂದ 25 ರವರೆಗೆ ವಿಸ್ತರಿಸಲಾಗಿದ್ದು, ಸಿಬ್ಬಂದಿಗಳು ಮನೆ-ಮನೆಗೆ ಭೇಟಿ ನೀಡಿ ಸಮೀಕ್ಷಾ ಕಾರ್ಯ ನಡೆಸಲು ಜಿಲ್ಲೆಯ ಶಿಕ್ಷಕರನ್ನು ಗಣತಿದಾರರನ್ನಾಗಿ ನೇಮಿಸಲಾಗಿದೆ. ಗಣತಿದಾರರು ಮನೆ-ಮನೆಗೆ ಭೇಟಿ ನೀಡಿದಾಗ, ಕರ್ನಾಟಕದ ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿರುವ ಜಾತಿಗಳ ಮತ್ತು ಉಪಜಾತಿಗಳ ಮಾಹಿತಿಯನ್ನು ಸಮುದಾಯದವರು ಕಡ್ಡಾಯವಾಗಿ ನೀಡಬೇಕು ಎಂದು ಸೂಚಿಸಿದರು.

ಆದಿಕರ್ನಾಟಕ, ಆದಿದ್ರಾವಿಡ, ಆದಿಆಂಧ್ರ ಎಂದು ನಮೂದಿಸಿದ್ದರೆ ಅಂಥವರು ಅದರ ಜೊತೆಗೆ ತಮ್ಮ ಉಪಜಾತಿಯನ್ನು ಕಡ್ಡಾಯವಾಗಿ ನಮೂದಿಸಬೇಕು ಹಾಗೂ ಸಮೀಕ್ಷೆಯಲ್ಲಿ ಪರಿಶಿಷ್ಟಜಾತಿ ಜನಾಂಗದವರು ಪಡೆದಿರುವ ಶಿಕ್ಷಣ, ವೃತ್ತಿ, ವಾಸಿಸುವ ಪ್ರದೇಶ, ಹೊಂದಿರುವ ಸೌಲಭ್ಯಗಳು ಮುಂತಾದ ಸಾಮಾನ್ಯ ಮಾಹಿತಿಗಳು, ಆರ್ಥಿಕತೆಗೆ ಸಂಬಂಧಿಸಿದ



ಮಾಹಿತಿಗಳು, ಸರ್ಕಾರಿ ಉದ್ಯೋಗ, ಖಾಸಗಿ ಉದ್ಯೋಗ, ವೃತ್ತಿ, ಭೂಮಿಯ ಒಡೆತನ, ಮನೆ, ಆದಾಯ, ಮಾನವ ಅಭಿವೃದ್ಧಿ, ಸರ್ಕಾರದಿಂದ ಪಡೆದಿರುವ ಸೌಲಭ್ಯಗಳು, ರಾಜಕೀಯ ಪ್ರಾತಿನಿಧ್ಯತೆ ಇತ್ಯಾದಿ ವಿಷಯಗಳ ಕುರಿತು ನೀಡಬೇಕಾಗಿರುತ್ತದೆ ಎಂದು ಹೇಳಿದರು.

ಎರಡನೇ ಹಂತದ ಸಮೀಕ್ಷೆಯನ್ನು ಮೇ 26 ರಿಂದ 28 ರವರೆಗೆ ಮರು ನಿಗದಿಪಡಿಸಲಾಗಿದ್ದು, ಈ ಸಮೀಕ್ಷೆಯಲ್ಲಿ ಗುರುತಿಸಿರುವ ಮತಗಟ್ಟೆ ಪ್ರದೇಶದಲ್ಲಿ ಏರ್ಪಡಿಸಲಾಗುವ ವಿಶೇಷ ಶಿಬಿರಗಳಿಗೆ ಈಗಾಗಲೇ ಮೊದಲ ಹಂತದಲ್ಲಿ ಮಾಹಿತಿ ಸಲ್ಲಿಸದೇ ಅಥವಾ ಸಮೀಕ್ಷೆಗೆ ಒಳಪಡದೇ ಇರುವ ಪರಿಶಿಷ್ಟಜಾತಿಯವರು ತೆರಳಿ, ಗಣತಿದಾರರಿಗೆ ಜಾತಿ ಕುರಿತು ಸ್ಪಷ್ಟ ಮಾಹಿತಿಯನ್ನು ನೀಡಬೇಕು ಎಂದು ತಿಳಿಸಿದರು.

ಮೂರನೇ ಹಂತದ ಸಮೀಕ್ಷೆಯಲ್ಲಿ ಆನ್‌ಲೈನ್ ಮೂಲಕ ವೆಬ್‌ಸೈಟ್‌ನಲ್ಲಿ ಸ್ವಯಂ ಘೋಷಣೆ ಮಾಡುವ ಸಮೀಕ್ಷೆಯನ್ನು ಮೇ 19 ರಿಂದ 28 ರವರೆಗೆ ವಿಸ್ತರಿಸಲಾಗಿದ್ದು, ಸ್ವಯಂ ಘೋಷಣೆಗೆ ಆಧಾರ್ ನಂಬರ್ ಹಾಗೂ ಜಾತಿ ಪ್ರಮಾಣ ಪತ್ರದ ಆರ್.ಡಿ. ನಂಬರ್ ಅನ್ನು ಕಡ್ಡಾಯವಾಗಿ ನಮೂದಿಸಬೇಕು ಎಂದು ಹೇಳಿದರು.

ಸಮೀಕ್ಷೆಯನ್ನು ಕೈಗೊಳ್ಳುವುದಕ್ಕಾಗಿ ಒಟ್ಟು 1534 ಶಿಕ್ಷಕರುಗಳನ್ನು ಗಣತಿದಾರರನ್ನಾಗಿ ಹಾಗೂ 153 ಮುಖ್ಯ ಶಿಕ್ಷಕರನ್ನು ಮೇಲ್ವಿಚಾರಕರನ್ನಾಗಿ ನೇಮಿಸಲಾಗಿದ್ದು, ಹೆಚ್ಚುವರಿಯಾಗಿ 185 ಗಣತಿದಾರರು ಹಾಗೂ ಮೇಲ್ವಿಚಾರಕರನ್ನು ನೇಮಿಸಲಾಗಿದೆ ಎಂದರು.

2011ರ ಜನಗಣತಿಯ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 59,296 ಪರಿಶಿಷ್ಟಜಾತಿಯ ಕುಟುಂಬಗಳು ಇವೆ. ಇಲ್ಲಿಯವರೆಗೆ ಒಟ್ಟು 52,934 ಪರಿಶಿಷ್ಟ ಜಾತಿ ಹಾಗೂ 2,43,986 ಇತರೆ ಜಾತಿಯ ಕುಟುಂಬಗಳು ಒಟ್ಟು 2,96,920 ಕುಟುಂಬಗಳ ಸಮೀಕ್ಷೆಯನ್ನು ಜಿಲ್ಲೆಯಲ್ಲಿ ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಹೆಚ್ಚಿನ ಮಾಹಿತಿಗೆ ಸಾರ್ವಜನಿಕರು ಕಂಟ್ರೋಲ್ ರೂಂ ಸಹಾಯವಾಣಿ ಸಂಖ್ಯೆ (9902198300, 9481359000, 948300400 ಹಾಗೂ 9480843028)ಗಳನ್ನು ಸಂಪರ್ಕಿಸಬಹುದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ, ಉಪವಿಭಾಗಾಧಿಕಾರಿ ದೇವರಾಜ್, ಸಮಾಜ ಕಲ್ಯಾಣಾಧಿಕಾರಿ ಮಾಲತಿ ಉಪಸ್ಥಿತರಿದ್ದರು.

# ಕಾಡಾನೆ ಹಾವಳಿ ತಡೆಗೆ ಶಾಶ್ವತ ಪರಿಹಾರ




**ಚಿಕ್ಕಮಗಳೂರು:** ಮಲೆನಾಡಿನ ಜನರ ನಿದ್ದೆಗೆಡಿಸಿರುವ ಕಾಡಾನೆ ಹಾವಳಿ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಅರಣ್ಯ ಇಲಾಖೆ ಸಚಿವರನ್ನೂ ಒಳಗೊಂಡಂತೆ ಉನ್ನತ ಮಟ್ಟದ ಸಭೆಯೊಂದನ್ನು ಬೆಂಗಳೂರಿನಲ್ಲಿ ಆಯೋಜಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು.

ಶನಿವಾರ ನಡೆದ ಜಿ.ಪಂ.ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಕಾಡಾನೆಗಳ ಹಾವಳಿಯಿಂದಾಗುತ್ತಿರುವ ಸಾವು, ನೋವು, ಬೆಳೆ ಹಾನಿ ಬಗ್ಗೆ ಶಾಸಕರು, ವಿಧಾನ ಪರಿಷತ್ ಸದಸ್ಯರುಗಳಿಂದ ಕಳವಳ ವ್ಯಕ್ತವಾದ ಹಿನ್ನೆಲೆಯಲ್ಲಿ ಸಚಿವರ ಮಟ್ಟದಲ್ಲಿ ಸಭೆ ನಡೆಸಿ ಪರಿಹಾರ ಕಲ್ಪಿಸುವ ಭರವಸೆ ನೀಡಿದರು.

ಸಭೆ ಆರಂಭವಾಗುತ್ತಿದ್ದಂತೆ ವಿಧಾನ ಪರಿಷತ್ ಉಪಸಭಾಪತಿ ಎಂ.ಕೆ.ಪ್ರಾಣೇಶ್, ವಿಚಾರ ಪ್ರಸ್ತಾಪಿಸಿ ಕಾಡಾನೆ ಹಾವಳಿ ವಿಚಾರ ಗಂಭೀರ ಸಮಸ್ಯೆ ಆಗಿರುವುದರಿಂದ ಪರಿಹಾರ ಸಂಬಂಧ ಕೈಗೊಂಡಿರುವ ಕ್ರಮಗಳ ಆದ್ಯತೆ ಮೇರೆಗೆ ಮೊದಲು ಚರ್ಚೆ ಆಗಲಿ ಎಂದು ಮನವಿ ಮಾಡಿದರು.

ಮೂಡಿಗೆರೆ ಭಾಗದಲ್ಲಿ ಈಗಲೂ 55 ಕಾಡಾನೆಗಳ ತಂಡ ಉಪಟಳ ನೀಡುತ್ತಿವೆ. ದೊಡ್ಡ ಪ್ರಮಾಣದಲ್ಲಿ ಬೆಳೆ ಹಾನಿ ಆಗುತ್ತಿದೆ. ಒಂದಷ್ಟು ಪರಿಹಾರ ಕೊಟ್ಟ ಕೂಡಲೇ ಆಗುವುದಿಲ್ಲ. ಆನೆ ಹಾವಳಿ ನಿಯಂತ್ರಣಕ್ಕೆ ಏನು ಮಾಡಬಹುದು ಎನ್ನುವ ಬಗ್ಗೆ ನಿರ್ಣಯ ಮಾಡಿ ಸರ್ಕಾರಕ್ಕೆ ಪ್ರಸ್ತಾವನೆ ಕಳಿಸಿಕೊಡುವ ಕೆಲಸ ಆಗಲಿ ಎಂದರು.

ಈ ಬಗ್ಗೆ ಡಿಎಫ್‌ಓ ರಮೇಶ್ ಬಾಬು ಉತ್ತರಿಸಿ, ಹಾಸನ ಭಾಗದಿಂದ ವಲಸೆ ಬಂದಿರುವ ಸುಮಾರು 75 ರಿಂದ 80 ಆನೆಗಳು ನಮ್ಮ ಜಿಲ್ಲೆಯ ಮಲೆನಾಡು ಭಾಗದಲ್ಲಿ ತೊಂದರೆ ನೀಡುತ್ತಿವೆ. ಇವು ಮೂರರಿಂದ ಆರು ಗುಂಪುಗಳಾಗಿವೆ. ಬೀಟಮ್ಮ, ಬೀಟಮ್ಮ-2, ಭುನೇಶ್ವರಿ, ಕ್ಯಾಪ್ಟನ್ ಹೀಗೆ ಬೇರೆ ಬೇರೆ ಹೆಸರುಗಳನ್ನು ಕೊಟ್ಟು ಚಲನವಲನಗಳ ಬಗ್ಗೆ ಇಲಾಖೆ ನಿಗಾವಹಿಸಿದೆ. ಜಿಪಿಎಸ್ ಸಹಾಯದಿಂದ ಕಣ್ಗಾವಲಿಡಲಾಗಿದೆ. ಈಗ 55 ಆನೆಗಳು ನಮ್ಮ ಕಡೆ ಬರುತ್ತಿವೆ. ಎಲಿಫ್ಯಾಂಟ್ ಟಾಸ್ಕ್ ಫೋರ್ಸ್(ಇಟಿಎಫ್) ಸಿಬ್ಬಂದಿಗಳ ಸಹಕಾರ ಪಡೆದು ಅವುಗಳನ್ನು ಹಿಮ್ಮೆಟ್ಟಿಸುವ ಕೆಲಸ ಆಗುತ್ತಿದೆ ಎಂದರು.

ಇದರ ಜೊತೆಗೆ ಕುಮ್ಕಿ ಆನೆಗಳನ್ನು ಕರೆಸಿ ಪುಂಡಾನೆಗಳನ್ನು ಸೆರೆ ಹಿಡಿಯಲಾಗುತ್ತಿದೆ. ಟೆಂಟಕಲ್ ಬೇಲಿ ಅಳವಡಿಸಿ ಆನೆಗಳು ಇಡುವಳಿ ಜಾಗಕ್ಕೆ ಬಾರದಿರುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಈಗಾಗಲೆ ಮೂಡಿಗೆರೆ ತಾಲ್ಲೂಕಿನಲ್ಲಿ 46 ಕಿಮೀ ಉದ್ದದ ಬೇಲಿ ಅಳವಡಿಸಲಾಗಿದ್ದು, ಇನ್ನೂ 28 ಕಿ.ಮೀಗೆ ಅನುಮೋದನೆ ಸಿಕ್ಕಿದೆ ಎಂದು ವಿವರಿಸಿದರು.

ಮೂಡಿಗೆರೆ ಶಾಸಕಿ ನಯನಾ ಮೋಟಮ್ಮ ಮಾತನಾಡಿ, ಪಕ್ಕದ ಹಾಸನ ಜಿಲ್ಲೆಯಿಂದ ಲಗ್ಗೆ ಇಡುತ್ತಿರುವ ಆನೆಗಳಿಂದ ತೊಂದರೆ ಆಗುತ್ತಿದೆ. ಟೆಂಟಕಲ್ ಬೇಲಿ ಅಳವಡಿಸುವುದು ಶಾಶ್ವತ ಪರಿಹಾರವಲ್ಲ. ಅರಣ್ಯ ಸಚಿವರೇ ಬಂದು ಪರಿಶೀಲಿಸಿದ್ದರೂ ಪರಿಹಾರ ಸಿಕ್ಕಿಲ್ಲ. ಆನೆಗಳ ವಿಚಾರದಲ್ಲಿ ಎರಡೂ ಜಿಲ್ಲೆಗಳ ಮಧ್ಯೆ ಸಂಘರ್ಷ ಏರ್ಪಟ್ಟಿದೆ. ಇದಕ್ಕೊಂದು ಶಾಶ್ವತ ಪರಿಹಾರ ಕಂಡುಹಿಡಿಯಬೇಕು ಎಂದರು.

# ಬಗರ್ ಹುಕುಂ ಸಮಿತಿ ಸಭೆ ನಡೆಸಲು ಆಗ್ರಹಿಸಿ ಸಚಿವ ಕೆ.ಜೆ. ಜಾರ್ಜ್‌ಗೆ ಮನವಿ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ರೈತ ಸಮುದಾಯ ಎದುರಿಸುತ್ತಿರುವ ಜ್ವಲಂತ ಸಮಸ್ಯೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಬಗರ್ ಹುಕುಂ ಸಮಿತಿ ಸಭೆಯನ್ನು ನಡೆಸುವಂತೆ ಕರ್ನಾಟಕ ಮಾಹಿತಿ ಹಕ್ಕು ಕಾರ್ಯಕರ್ತರ ಸಂಘಟನೆ ಜಿಲ್ಲಾ ಉಸ್ತುವಾರಿ ಸಚಿವರನ್ನು ಒತ್ತಾಯಿಸಿದೆ.

ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಅವರನ್ನು ಸಂಘಟನೆಯ ರಾಜ್ಯಾಧ್ಯಕ್ಷ ಸೋಮುನಾಯಕ್ ಅವರ ನೇತೃತ್ವದಲ್ಲಿ ನಗರದಲ್ಲಿ ಭೇಟಿ ಮಾಡಿದ ಕಾರ್ಯಕರ್ತರು ಈ ಸಂಬಂಧ ಮನವಿ ಸಲ್ಲಿಸಿದರು.

ರೈತರ ಸಮಸ್ಯೆಗಳ ಕುರಿತು ಚರ್ಚಿಸುವ ನಿಟ್ಟಿನಲ್ಲಿ ಸ್ಥಾಪಿಸಿರುವ ಬಗರ್ ಹುಕುಂ ಸಮಿತಿ ಹಲವು ವರ್ಷಗಳಿಂದ ಜಿಲ್ಲೆಯಲ್ಲಿ ಸಭೆಯನ್ನೇ ನಡೆಸಿಲ್ಲ, ಇದರಿಂದಾಗಿ ಜಿಲ್ಲೆಯ ರೈತರ ಅನೇಕ ಸಮಸ್ಯೆಗಳು ಇನ್ನೂ ಬಗೆಹರಿಯದೆ ಹಾಗೇ ಉಳಿದಿವೆ ಎಂದು ಆರೋಪಿಸಿದರು.

ಜಿಲ್ಲೆಯ ಉಳುಮೆದಾರರಿಗೆ ಭೂಮಿಯ ದಾಖಲೆಗಳನ್ನು ಪಡೆದುಕೊಳ್ಳಲು ಅರ್ಜಿ ನಮೂನೆ 57 ರಡಿ ಅವಕಾಶ ಕಲ್ಪಿಸಬೇಕು, ಜಿಲ್ಲೆಯಲ್ಲಿ ಕಂದಾಯ ಮತ್ತು ಅರಣ್ಯ ಭೂಮಿ ವಿಷಯದಲ್ಲಿ ರೈತರಲ್ಲಿರುವ ಗೊಂದಲವನ್ನು ನಿವಾರಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ಮಾಹಿತಿ ಹಕ್ಕು ಕಾರ್ಯಕರ್ತರ ಸಂಘಟನೆಯ ಜಿಲ್ಲಾ ಸಂಚಾಲಕ ರೂಪೇಶ್, ಕಾರ್ಯಕರ್ತರಾದ ಮಂಜುನಾಥ್ ಕೊಪ್ಪ, ಪಂಡರವಳ್ಳಿ ಶಶಿಧರ್, ಶ್ರೀಧರ್ ಹಾಜರಿದ್ದರು.



# ಸಿ.ಕೆ.ಪುರದಲ್ಲಿ ಯುಜುಡಿ ಪೈಪು ಹೊಡೆದು 15 ದಿವಸವಾದರೂ ರಿಪೇರಿ ಕಾಣದಾಗಿದೆ : ಡಾ ಎಚ್.ಕೆ.ಎಸ್. ಸ್ವಾಮಿ

**ಚಿತ್ರದುರ್ಗ :** ಸಿ.ಕೆ.ಪುರದ ಮುಖ್ಯರಸ್ತೆಯಲ್ಲಿ ಯುಜಿಡಿ ಪೈಪ್ ಗಳು 15 ದಿನದಿಂದ ಕಟ್ಟಿಕೊಂಡು, ಗಲೀಜು ನೀರು ರಸ್ತೆಯ ಮೇಲೆ ಜಲಪಾತದಂತೆ ಹರಿಯುತ್ತಿದ್ದರೂ ಸಹ ನಗರಸಭೆಯವರ ಗಮನಕ್ಕೆ ಬಾರದಿರುವುದು ಶೋಚನೀಯ, ಯುಸಿಡಿ ಪೈಪ್ ಗಳು ಕಟ್ಟಿಕೊಂಡು ಗಲೀಜ್ ನೀರು ರಸ್ತೆಗೆ ಚೆಲ್ಲುತ್ತಿದ್ದು ರಸ್ತೆಯಲ್ಲಿ ನಡೆದಾಡುವ ಜನರು ಗಲೀಜನ್ನ ದಾಟಿಕೊಂಡು, ತುಳಿದುಕೊಂಡು, ಮೂಗು ಮುಚ್ಚಿಕೊಂಡು, ನಡೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಶಾಲೆಗೆ ಹೋಗುವ ವಿದ್ಯಾರ್ಥಿಗಳು, ಸಾರ್ವಜನಿಕರು ವೃದ್ಧರು, ಈ ಗಲೀಜು ನೀರನ್ನು ತುಳಿದುಕೊಂಡು ರಸ್ತೆ ದಾಟಬೇಕಾಗಿದೆ. ವೇಗವಾಗಿ ಚಲಿಸುವ ವಾಹನಗಳು ಗಲೀಜು ನೀರನ್ನು ಅಕ್ಕಪಕ್ಕ ಸಾರ್ವಜನಿಕರಿಗೆ ಸಿಡಿಸಿ, ಅವರ ಬಟ್ಟೆಗಳನ್ನ ಗಲೀಜು ಗೊಳಿಸುತ್ತಿವೆ. ಶಾಲಾ ಮಕ್ಕಳು ಈ ಗಲೀಜು ನೀರನ್ನು

ಸಿಡಿಸಿಕೊಂಡು, ಸಮವಸ್ತ್ರ ಗಳನ್ನ ಗಲೀಜು ಮಾಡಿಕೊಂಡು, ಶಾಲೆ ಕಾಲೇಜುಗಳಿಗೆ ಹೋಗುತ್ತಿದ್ದಾರೆ. ಸುತ್ತಮುತ್ತಲು ವಾಸವಿರುವ ನಿವಾಸಿಗಳು 15 ದಿನದಿಂದ ಗಲೀಜು ಮತ್ತು ದುರ್ವಾಸನೆಯನ್ನು ಸಹಿಸಿಕೊಂಡು ಬದುಕುವಂತಾಗಿದೆ, ಅಲ್ಲಿಯ ನಿವಾಸಿಗಳಿಗೆ ನರಕದಲ್ಲಿ ಬದುಕುತ್ತಿದ್ದೇವೆ ಎಂಬ ಭಾವನೆ ಮೂಡುತ್ತಿದೆ, ರಸ್ತೆಯಲ್ಲಿ ಸಂಚರಿಸುವ ಸಾರ್ವಜನಿಕರಿಗೂ ಸಹ ಈ ಕೆಟ್ಟ ವಾಸನೆ ಬಡಿದು, ಮೂಗು ಮುಚ್ಚಿಕೊಂಡು, ಗಾಡಿ ಚಲಾಯಿಸಿಕೊಂಡು ರಸ್ತೆದಾಟುತ್ತಿದ್ದಾರೆ, ಇದರ



ಬಗ್ಗೆ ನಗರಸಭೆಯವರು ಗಮನಹರಿಸಿ ಶೀಘ್ರವಾಗಿ ರಿಪೇರಿ ಮಾಡಿ, ಜನರ ಆರೋಗ್ಯ ರಕ್ಷಿಸಬೇಕೆಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ವಿನಂತಿಸಿಕೊಂಡಿದ್ದಾರೆ.

ಜನರ ಆರೋಗ್ಯದ ಜೊತೆ ನಗರಸಭೆ ಚೆಲ್ಲಾಟ ಮಾಡುವುದನ್ನು ನಿಲ್ಲಿಸಿ, ನಗರ ವೀಕ್ಷಣೆ ಮಾಡುವಂತಹ ಸಂದರ್ಭದಲ್ಲಿ, ಎಲ್ಲೆಲ್ಲಿ ಯುಜಿಡಿ ಪೈಪ್ಗಳು ಹೊಡೆದಿದೆ, ಮುಚ್ಚಿ ಹೋಗಿವೆ ಹಾಗೂ ಗಲೀಜು ನೀರನ್ನು ಹೊರ ಸೂಸುತ್ತಿವೆ ಎಂಬುದನ್ನು ಕಂಡು ಹಿಡಿದು, ಒಂದೆರಡು ದಿನದಲ್ಲಿ ರಿಪೇರಿ ಮಾಡಿದರೆ ಜನರು ಸಹ ಸಹಿಸಿಕೊಳ್ಳುತ್ತಾರೆ, ಆದರೆ 15 ದಿವಸವಾದರೂ ಸಹ ಮುಖ್ಯರಸ್ತೆಯಲ್ಲಿ ಯುಜಿಡಿ ಪೈಪ್ ನಿಂದ , ಗಲೀಜು ನೀರು, ಜಲಪಾತದಂತೆ ಹೊರ ಚಿಮ್ಮುತ್ತಿದ್ದರು ಸಹ ನಗರಸಭೆಯವರ ಅಧಿಕಾರಿಗಳ ಗಮನಕ್ಕೆ ಬಾರದಿರುವುದು ಆಶ್ಚರ್ಯವಾಗಿದೆ. ಜನರ ಆರೋಗ್ಯವಾದ ಬಗ್ಗೆ ಕಾಳಜಿ ವಹಿಸುವಂತಹ ಆರೋಗ್ಯ ಇಲಾಖೆ, ನಗರಸಭೆ, ಜಿಲ್ಲಾಡಳಿತ ಇಂತಹ ಕೆಲಸಗಳನ್ನು ತುರ್ತು ನಿರ್ವಹಣೆ ಎಂದು ಪರಿಗಣಿಸಿ, ಶೀಘ್ರವಾಗಿ ಅವುಗಳನ್ನು ಸರಿಪಡಿಸಿ,ಜನರನ್ನ ಆರೋಗ್ಯಪೂರ್ಣವಾಗಿ ಬದುಕಲು ಅವಕಾಶ ಮಾಡಿಕೊಡಬೇಕು ಎಂದರು.

ನಗರದ ಬಹಳಷ್ಟು ಕಡೆ ಯುಜಿಡಿ ಪೈಪ್ಗಳು ಸರಿಯಾಗಿ ನಿರ್ವಹಣೆ ಮಾಡದೆ, ಅವುಗಳನ್ನ ಸರಿಪಡಿಸಲು ಯಂತ್ರಗಳಿಲ್ಲದೆ ಅಥವಾ ಯಂತ್ರಗಳಿದ್ದರೂ ಸಹ ಅವು ಕೆಟ್ಟು ನಿಂತಿರುವ ಪರಿಸ್ಥಿತಿಯಲ್ಲಿದ್ದರೆ, ಅವುಗಳನ್ನು ರಿಪೇರಿ ಮಾಡಿಸಿ, ಕೆಟ್ಟು ನಿಂತಿರುವ ಯಂತ್ರಗಳನ್ನ ಸರಿಪಡಿಸಿಕೊಂಡು, ನಗರಸಭೆ ಶೀಘ್ರವಾಗಿ ಇಂತಹ ಯುಜಿಡಿ ಪೈಪ್ಗಳನ್ನ ಸರಿಯಾಗಿ ನಿರ್ವಹಣೆ ಮಾಡಿ, ಸರಾಗವಾಗಿ ಗಲೀಜು ನೀರು ಹರಿದು ಹೋಗುವಂತೆ ಮಾಡಬೇಕಾಗಿದ್ದು ಅವರ ಕರ್ತವ್ಯವಾಗಿದೆ ಎಂದರು.

ಮುಖ್ಯ ರಸ್ತೆಯಲ್ಲಿ ಯುಜುಡಿ ಪೈಪ್ ಹೊಡೆದು 15 ದಿವಸವಾದರೂ ರಿಪೇರಿ ಕಾಣದೆ, ಜನರು ಅರ್ಜಿ ಹಿಡಿದು ನಗರಸಭೆಗೆ, ಕಮಿಷನ್ ರವರನ್ನು, ಆಯುಕ್ತರನ್ನ ಭೇಟಿಯಾಗಲು ಗಂಟೆಗಟ್ಟಲೆ ಕಾದು, ಅರ್ಜಿ ಸಲ್ಲಿಸಿ, ಮನೆಗೆ ವಾಪಸ್ ಆಗಿ ಬಂದು, ಬೇಜಾರಾಗಿ ಕುಳಿತಿರುವ ನಾಗರಿಕರಿಗೆ, ಸಹಾಯ ಮಾಡುವಂತಹ ಯಾವುದಾದರೂ ಒಂದು ವ್ಯವಸ್ಥೆ ನಿರ್ಮಾಣವಾಗಬೇಕು ಎಂದರು.

ನಾಗರೀಕರ ಸಮಸ್ಯೆಗಳನ್ನ ದೂರವಾಣಿಯ ಮುಖಾಂತರವೇ ಪರಿಶೀಲಿಸಿ, ಸುಲಭವಾಗಿ ಇಂತಹ ಪರಿಹಾರಗಳನ್ನ ಕಂಡುಕೊಳ್ಳಬಹುದಾದಂತ ವ್ಯವಸ್ಥೆ ನಿರ್ಮಾಣವಾಗಬೇಕು. ತೆರಿಗೆ ಕಟ್ಟಿದ ಜನರನ್ನ ಮತ್ತೆ ಮತ್ತೆ ಕಚೇರಿಗೆ ಅರ್ಜಿ ಹಿಡಿದುಕೊಂಡು ಅಲೆದಾಡಿಸುವಂತಹ ಪರಿಸ್ಥಿತಿ ನಿರ್ಮಾಣ ಮಾಡಿರುವುದು ನಮ್ಮ ದೇಶದಲ್ಲಿ ಆಡಳಿತ ವ್ಯವಸ್ಥೆ ಎಷ್ಟರ ಮಟ್ಟಿಗೆ ಜನ ವಿರೋಧಿಯಾಗಿದೆ ಎಂಬುದನ್ನ ಅರ್ಥ ಮಾಡಿಕೊಳ್ಳಬಹುದು. ಬ್ರಿಟಿಷರ ಆಡಳಿತದಿಂದಲು ಸಹ ನಾವು ಜನ ವಿರೋಧಿ ನೀತಿಗಳನ್ನೇ ಅಳವಡಿಸಿಕೊಂಡು, ಅವುಗಳನ್ನೇ ಮುಂದುವರಿಸಿಕೊಂಡು ಬರುತ್ತಿರುವುದ ಲಕ್ಷಣಗಳು ಎದ್ದು ಕಾಣುತ್ತಿವೆ. ಭಾರತ ಸ್ವಾತಂತ್ರ ಗಳಿಸಿದರು ಸಹ ಇನ್ನೂ ಸ್ವತಂತ್ರವಾಗಿ ಚಿಂತನೆ ಮಾಡದೆ, ಸ್ವತಂತ್ರವಾಗಿ ಕೆಲಸ ನಿರ್ವಹಿಸದೆ, ಗುಲಾಮಗಿರಿಯ ಲಕ್ಷಣವನ್ನೇ ಇನ್ನೂ ತೋರಿಸುತ್ತಿರುವುದು ಆಶ್ಚರ್ಯಕರವಾಗಿದೆ ಎಂದರು.ನಗರಗಳ ಅಭಿವೃದ್ಧಿಯಲ್ಲಿ ಯುಜಿಡಿ ಪೈಪ್ಗಳು ನಿರ್ವಹಣೆಗಾಗಿ ಸರಿಯಾದ ಯಂತ್ರೋಪಕರಣಗಳನ್ನು ಇಟ್ಟುಕೊಳ್ಳದಿದ್ದರೆ ಇಂತಹ ಅನಾಹುತಗಳು ಹೆಚ್ಚಾಗುತ್ತಾ ಬರುತ್ತದೆ, ಬೆಂಕಿ ಬಿದ್ದಾಗ ಬಾವಿ ತೋಡುವ ಪ್ರವೃತ್ತಿ ನಮ್ಮದಾಗಿದೆ, ಎಲ್ಲಾ ಕಡೆ ಯುಜಿಡಿ ಪೈಪಿಗಳು ಒಂದಲ್ಲ ಒಂದು ದಿನ ತೆರೆದುಕೊಂಡು, ಮುಚ್ಚಿಕೊಂಡು, ಕಟ್ಟಿಕೊಂಡು ನೀರು ಹೊರ ಚೆಲುವುದಂತು ಸಾಮಾನ್ಯವಾದ ಲಕ್ಷಣವಾಗಿದೆ. ಎಂಥಾ ಇಂಜಿನಿಯರಿಂಗ್ ಕೆಲಸ ಮಾಡಿದರು ಸಹ, ಇವು ಮಧ್ಯೆ ಮಧ್ಯೆ ಕೈ ಕೊಡುವ ಸಂದರ್ಭದಲ್ಲಿ, ನಿರ್ವಹಣೆ ಮಾಡುವಂತಹ ಚಾಣಾಕ್ಷತನವನಾದರೂ ನಾವು ಅಳವಡಿಸಿಕೊಂಡಿರಬೇಕಾಗುತ್ತದೆ. ಜನರ ಆರೋಗ್ಯದ ಜೊತೆ ಚೆಲ್ಲಾಟ ಮಾಡಿಕೊಂಡು, ಅವರ ಬದುಕನ್ನ ನರಕಮಯ ಮಾಡುವುದು ಎಷ್ಟರಮಟ್ಟಿಗೆ ನ್ಯಾಯ ಎಂದು ಪ್ರಕಟ ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ನಗರಸಭೆಗೆ 10 ಕೋಟಿ ರೂ. ಮಂಜೂರು

**ಚಿಕ್ಕಮಗಳೂರು, ಮೇ19:** ನಗರಸಭೆಗೆ ಎಸ್.ಎಫ್.ಸಿ. ವಿಶೇಷ ಅನುದಾನದಡಿ 10 ಕೋಟಿ ರೂ.ಗಳ ಕ್ರಿಯಾ ಯೋಜನೆಯು ಮಂಜೂರಾಗಿದ್ದು, ಅದರಂತೆ ಈ ಯೋಜನೆಯಡಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಪೌರಾಯುಕ್ತರು ತಿಳಿಸಿದ್ದಾರೆ.

ಈ ಬಗ್ಗೆ ಪ್ರಕಟಣೆಯೊಂದನ್ನು ನೀಡಿರುವ ಅವರು, ನಗರದ ಆರು ವಾರ್ಡ್‌ಗಳಲ್ಲಿ ಮೇ 23 ರಂದು ಗುದ್ದಲಿ ಪೂಜೆ ನಡೆಸಲಾಗುವುದು. ಅಂದು ಬೆಳಿಗ್ಗೆ 7.30ಕ್ಕೆ ವಾರ್ಡ್ ನಂ.6ರ ಅಗ್ರಹಾರ ಸರ್ಕಲ್ ಹತ್ತಿರ, 8 ಗಂಟೆಗೆ ವಾರ್ಡ್ ನಂ. 9ರ ಶ್ರೀನಿವಾಸನಗರದ ಅರಣ್ಯ ವಸತಿಗೃಹದ ಬಳಿ ಗುದ್ದಲಿಪೂಜೆ ನೆರವೇರಿಸಲಾಗುವುದು ಎಂದು ತಿಳಿಸಿದ್ದಾರೆ.

# ಸಾರ್ವಜನಿಕರ ಆರೋಗ್ಯ ಕಾಪಾಡಲು ತಪಾಸಣಾ ಶಿಬಿರ ಸಹಕಾರಿ

**ಚಿಕ್ಕಮಗಳೂರು:** ಸಾರ್ವಜನಿಕರ ಆರೋಗ್ಯ ಕಾಪಾಡಲು ಉಚಿತ ಆರೋಗ್ಯ ತಪಾಸಣಾ ಶಿಬಿರ ಸಹಕಾರಿ ಎಂದು ಮಾಜಿ ಸಚಿವ ಸಿ.ಆರ್. ಸಗೀರ್ ಅಹಮದ್ ತಿಳಿಸಿದರು.

ಅವರು ಐಜಿ ರಸ್ತೆಯ ಉರ್ದು ಶಾಲೆಯಲ್ಲಿ ನ್ಯಾಷನಲ್ ವೆಲ್‌ಫೇರ್ ಮತ್ತು ಚಾಲಿಟೇಬಲ್ ಟ್ರಸ್ಟ್ ಹಾಗೂ ಕಣಚೂರು ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಮಂಗಳೂರು ಇವರುಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದರು.

ರಾಜಕೀಯದಲ್ಲಿ ಯಾವ ಮುಸಲ್ಮಾನ ನೂರಾರು ಕೋಟಿ ರೂವರೆಗೆ ಲೂಟಿ ಹೊಡೆದಿಲ್ಲ, ಈ ಕುರಿತು ಬಿಜೆಪಿ ಆರೋಪಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ದೇಶದ್ರೋಹದ ಕೆಲಸ ಮಾಡುವ ವ್ಯಕ್ತಿ ಇಲ್ಲಿ ಬದುಕಲು ಅವಕಾಶವಿಲ್ಲ, ನಾವೆಲ್ಲಾ ಭಾರತ ಮಾತೆಯ ಮಕ್ಕಳು, ದೇಶ ಮತ್ತು ಪ್ರಜೆಗಳನ್ನು ರಕ್ಷಿಸಲು ದೇವರಲ್ಲಿ ಪ್ರಾರ್ಥಿಸುತ್ತೇವೆ ಎಂದರು.

ಜಾತಿ ಸಮೀಕ್ಷೆ ನಡೆಯುತ್ತಿದ್ದು, ಕಾಂಗ್ರೆಸ್ ಸರ್ಕಾರದ ಈ ನಿರ್ಧಾರದಿಂದ ಎಲ್ಲಾ ಸಮುದಾಯದ ವರ್ಗದ ಜನರಿಗೆ ಅನುಕೂಲವಾಗಬೇಕು, ಯಾವುದೇ ಸರ್ಕಾರ ಅಸ್ಥಿತ್ವಕ್ಕೆ ಬರಬೇಕಾದರೆ ಪ.ಜಾ, ಪ.ಪಂ ಹಾಗೂ ಮುಸ್ಲಿಂರ ಬೆಂಬಲ ಬೇಕು. ಆದರೆ, ಕಾಂಗ್ರೆಸ್ ಸರ್ಕಾರ ಬಂದು ಎರಡು ವರ್ಷವಾದರೂ ಒಂದು ನಿವೇಶನ ವಿತರಿಸಿಲ್ಲ ಎಂದು ಆರೋಪಿಸಿದರು.



ಸಾರ್ವಜನಿಕರ ಆರೋಗ್ಯ ಕಾಪಾಡುವಲ್ಲಿ ಮಂಗಳೂರಿನ ಆಸ್ಪತ್ರೆ ಉಚಿತ ಆರೋಗ್ಯ ತಪಾಸಣೆಯನ್ನು ನಡೆಸುವ ಮೂಲಕ ಕಾರ್ಯಪ್ರವೃತ್ತರಾಗಿ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿರುವುದು ಶ್ಲಾಘನೀಯ ಎಂದ ಅವರು, ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು.

ಖ್ಯಾತ ಮಕ್ಕಳ ತಜ್ಞಡಾ. ಜೆ.ಪಿ ಕೃಷ್ಣೇಗೌಡ ಮಾತನಾಡಿ, ಬಡವರು ಶ್ರೀಮಂತರು ಎಂಬ ಬೇಧ ಭಾವವಿಲ್ಲದೆ ಒಳ್ಳೆಯ ಮನಸ್ಸಿನಿಂದ ಜನರ ಆರೋಗ್ಯಕ್ಕೆ ಪೂರಕವಾದ ಉಚಿತ ಚಿಕಿತ್ಸಾ ಶಿಬಿರಗಳನ್ನು ಆಯೋಜಿಸಿರುವುದು ಸಂತೋಷಕರ ಸಂಗತಿ, ಬ್ರೆಸ್ಟ್ ಕ್ಯಾನ್ಸರ್‌ಗೆ ತುತ್ತಾಗಿ ವಾರ್ಷಿಕ 16 ಲಕ್ಷ ಮಹಿಳೆಯರು ನಿಧನರಾಗುತ್ತಿದ್ದಾರೆಂದು ವಿವರಿಸಿದರು.

ಇದರ ಜೊತೆಗೆ ಗರ್ಭಕಂಠ ಕ್ಯಾನ್ಸರ್ ಹೆಚ್ಚಾಗುತ್ತಿದ್ದು, ಇದನ್ನು ಮನಗಂಡು ಎಲ್ಲರೂ ಆಸ್ಪತ್ರೆಗೆ ಹೋಗು ಚಿಕಿತ್ಸೆ ಪಡೆಯಲು ಶಕ್ತರಾಗಿರುವುದಿಲ್ಲ, ಇಂತಹ ಶಿಬಿರಗಳಲ್ಲಿ ತಜ್ಞವೈದ್ಯರುಗಳನ್ನು ಕರೆತಂದು ಆ ಮೂಲಕ ಉಚಿತ ಚಿಕಿತ್ಸೆ ನೀಡುತ್ತಿರುವುದ ನಮ್ಮೆಲ್ಲರ ಭಾಗ್ಯ ಎಂದರು.

ಮಾಜಿ ಸಚಿವ ಸಗೀರ್ ಅಹಮದ್ ಅವರ ಶ್ರಮದ ಫಲವಾಗಿ ಚಿಕ್ಕಮಗಳೂರು ನಗರದ ಜನತೆ ಯಗಚಿ ನೀರು ಕುಡಿಯಲು ಸಹಕಾರಿಯಾಗಿದ್ದು, ಇದಕ್ಕಾಗಿ ಅವರನ್ನು ಅಭಿನಂದಿಸುತ್ತ ಸಮಾಜದಲ್ಲಿ ಸಿಕ್ಕಿದ ಅಧಿಕಾರವಧಿಯಲ್ಲಿ ಶಾಶ್ವತವಾದ ಜನೋಪಯೋಗಿ ಕಾರ್ಯಗಳನ್ನು ಕೈಗೊಳ್ಳಬೇಕೆಂದು ಕಿವಿಮಾತು ಹೇಳಿದರು.

# ನಗರೋತ್ಥಾನ ಯೋಜನೆ ಅನುಷ್ಠಾನ : ಪ್ರಗತಿಯಲ್ಲಿ ಹಿಂದುಳಿದ ಅಧಿಕಾರಿಗಳ ಅಮಾನತ್ತು - ಸಚಿವರ ಎಚ್ಚರಿಕೆ

**ತುಮಕೂರು :** ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯ ಅನುಷ್ಠಾನ ಮಾಡುವಲ್ಲಿ ಪ್ರಗತಿಯಲ್ಲಿ ಹಿಂದುಳಿದ ಅಧಿಕಾರಿಗಳ ಅಮಾನತ್ತಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಪೌರಾಡಳಿತ ಹಾಗೂ ಹಜ್ ಸಚಿವ ರಹೀಮ್ ಖಾನ್ ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ನ್ಯಾಯಿಕ ಸಭಾಂಗಣದಲ್ಲಿ ಬುಧವಾರ ಜರುಗಿದ ಜಿಲ್ಲೆಯ 10 ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ನಗರೋತ್ಥಾನ ಯೋಜನೆಯು ಪ್ರಾರಂಭವಾಗಿ 3 ವರ್ಷಗಳು ಕಳೆದರೂ ಕುಣಿಗಲ್ ಪುರಸಭೆಯಲ್ಲಿ ಕೇವಲ ಶೇ.14ರಷ್ಟು ಮಾತ್ರ ಭೌತಿಕ ಸಾಧನೆಯಾಗಿದೆ. ಕಾರಣವೇನೆಂದು ಪುರಸಭೆ ಮುಖ್ಯಾಧಿಕಾರಿ ಮಂಜುಳಾ ಅವರನ್ನು ಸಚಿವರು ತರಾಟೆಗೆ ತೆಗೆದುಕೊಂಡರು.

ಅನುಮೋದನೆ ನೀಡಿದ 27 ಕಾಮಗಾರಿಗಳ ಪೈಕಿ ಕೇವಲ 4 ಕಾಮಗಾರಿಗಳನ್ನು ಮಾತ್ರ ಪೂರ್ಣಗೊಳಿಸಲಾಗಿದ್ದು, 6 ಕಾಮಗಾರಿಗಳು ಇನ್ನೂ ಟೆಂಡರು ಪ್ರಕ್ರಿಯೆ ಹಂತದಲ್ಲಿವೆ. ಇದೇ ರೀತಿ ಕಾಮಗಾರಿ ಪ್ರಗತಿಯಲ್ಲಿ ಹಿನ್ನಡೆ ಕಂಡು ಬಂದರೆ ಸಂಬಂಧಿಸಿದ ಅಧಿಕಾರಿಗಳನ್ನು ಮನೆಗೆ ಕಳುಹಿಸಲು ಕ್ರಮವಿಡಲಾಗುವುದು ಎಂದು ಖಡಕ್ ಸೂಚನೆ ನೀಡಿದರು.

ನಗರ ಸ್ಥಳೀಯ ಸಂಸ್ಥೆಗಳಲ್ಲಿ ರಸ್ತೆ ಹಾಗೂ ಚರಂಡಿ ನಿರ್ಮಾಣ, ಕುಡಿಯುವ ನೀರು, ಸ್ವಚ್ಛತಾ ಕಾಮಗಾರಿಗಳಿಗಾಗಿ ಜಿಲ್ಲೆಗೆ ಈವರೆಗೂ ಒಟ್ಟು 44.71 ಕೋಟಿ ರೂ. ಬಿಡುಗಡೆಯಾಗಿದೆ. ಈಗಾಗಲೇ ಈ ಯೋಜನೆ ಪೂರ್ಣಗೊಳ್ಳುವ ಹಂತಕ್ಕೆ ತಲುಪಬೇಕಾಗಿತ್ತು. ಅಧಿಕಾರಿಗಳ ಇಚ್ಚಾಶಕ್ತಿ ಕೊರತೆಯಿಂದ ನಿರೀಕ್ಷಿತ ಮಟ್ಟಕ್ಕೆ ಯೋಜನೆ ಪ್ರಗತಿಯಾಗಿಲ್ಲವೆಂದು ಸಚಿವರು ಅಸಮಾಧಾನ ವ್ಯಕ್ತಪಡಿಸಿದರು.

ಕಾಮಗಾರಿ ವಿಳಂಬಕ್ಕೆ ಸಚಿವರು ಕಾರಣ ಕೇಳಿದಾಗ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಯೋಗಾನಂದ ಅವರು ಗುತ್ತಿಗೆದಾರರಿಂದ ಟೆಂಡರು ಅರ್ಜಿಗಳು ಸಲ್ಲಿಕೆಯಾಗದಿರುವುದರಿಂದ ಕಾಮಗಾರಿ ಕೈಗೊಳ್ಳಲು ತಡವಾಗಿದೆ ಎಂದು ಉತ್ತರಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು ಸಿವಿಲ್ ಕಾಮಗಾರಿಗಳಿಗೆ ನಾಮುಂದು-ತಾಮುಂದು ಎಂದು ಟೆಂಡರ್ ಸಲ್ಲಿಸಲು ಗುತ್ತಿಗೆದಾರರು ತುದಿಗಾಲಿನಲ್ಲಿ ನಿಂತಿರುತ್ತಾರೆ. ಸಭೆಗೆ ತಪ್ಪು ಮಾಹಿತಿ ನೀಡಿದರೆ ನಾನು ಸಹಿಸುವುದಿಲ್ಲ. ವಿಳಂಬಕ್ಕೆ ಯಾವುದೇ ನೆಪ ಹೇಳದೆ ಆಗಸ್ಟ್ ಮಾಹೆಯೊಳಗೆ ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕಾರ್ಯ ಪ್ರವೃತ್ತರಾಗಬೇಕೆಂದು ಸೂಚನೆ ನೀಡಿದರು.



ಮುಂದಿನ ಮಾರ್ಚ್-2026ಕ್ಕೆ ಯೋಜನೆಯನ್ನು ಪೂರ್ಣಗೊಳಿಸಬೇಕಾಗಿರುವುದರಿಂದ ಜನವರಿ-2026ರೊಳಗೆ ಎಲ್ಲಾ ಸಿವಿಲ್ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ನಿಗಧಿತ ಅವಧಿಯೊಳಗೆ ಟೆಂಡರು ಪ್ರಕ್ರಿಯೆಯನ್ನೂ ಮುಗಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿರುವುದರಿಂದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೀರಿನ ಸಮಸ್ಯೆ ಕಂಡು ಬಂದಿಲ್ಲ. ಎಲ್ಲಾ ವಾರ್ಡುಗಳಿಗೆ ಪ್ರತೀ ದಿನ ನೀರು ಸರಬರಾಜು ಮಾಡಲು ಎಲ್ಲಾ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಪಾವಗಡ ಪುರಸಭೆಯ 2 ವಾರ್ಡುಗಳಲ್ಲಿ ಮಾತ್ರ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಲು ಪ್ರತೀ ದಿನ ಬೆಳಿಗ್ಗೆ ಹಾಗೂ ಸಂಜೆ ಕ್ಷೇತ್ರಗಳಿಗೆ ಭೇಟಿ ನಿಡಿ ಬಗೆಹರಿಸಲು ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಸಚಿವರ ಗಮನಕ್ಕೆ ತಂದರು.

ಸಚಿವರು ಮುಂದುವರೆದು ಮಾತನಾಡಿ, ನಗರ ಪ್ರದೇಶ ವ್ಯಾಪ್ತಿಯಲ್ಲಿ ಕಲುಷಿತ ನೀರಿನಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ, ಜೀವಹಾನಿ ಉಂಟಾದ ಯಾವುದೇ ಪ್ರಕರಣ ವರದಿಯಾದರೆ ಕೂಡಲೇ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕೆಂದು ಮುಖ್ಯಮಂತ್ರಿಗಳು ನಮಗೆ ಸೂಚನೆ ನೀಡಿದ್ದಾರೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು ಎಂದರಲ್ಲದೆ, ನಾಗರಿಕರಿಗೆ ಶುದ್ಧ ನೀರು ಪೂರೈಕೆ ಮಾಡುವುದು ಅಧಿಕಾರಿಗಳ ಹೊಣೆ. ನಿರಂತರವಾಗಿ ಕುಡಿಯುವ ನೀರಿನ ಕ್ಲೋರಿನೇಷನ್ ಆಗಬೇಕು. ಓವರ್ ಹೆಡ್ ಟ್ಯಾಂಕುಗಳನ್ನು ಸ್ವಚ್ಛಗೊಳಿಸಬೇಕು. ಸಿವಿಲ್ ಕಾಮಗಾರಿ ಕೈಗೊಳ್ಳುವಾಗ ಒಳಚರಂಡಿ ನೀರು ಕುಡಿಯುವ ನೀರಿನ ಕೊಳವೆ ಮಾರ್ಗಕ್ಕೆ ಮಿಶ್ರಣವಾಗದಂತೆ ಜಾಗರೂಕತೆವಹಿಸಬೇಕು. ಕುಡಿಯುವ ನೀರಿನ ಪೈಪು ಹಾಗೂ ಒಳ ಚರಂಡಿ ಮಾರ್ಗಕ್ಕೂ ಅಂತರವಿರುವಂತೆ ಕಾಮಗಾರಿ ನಿರ್ವಹಿಸಬೇಕೆಂದು ನಿರ್ದೇಶನ ನೀಡಿದರು.

ಪೌರಾಡಳಿತ ಇಲಾಖೆಯು ಜನರ ಸೇವೆಗಾಗಿ ಬದ್ಧವಾಗಿರಬೇಕು. ಸ್ವಚ್ಛತೆ, ತ್ಯಾಜ್ಯ ವಿಲೇವಾರಿ ಕುರಿತು ಜನರಲ್ಲಿ ಅರಿವು ಮೂಡಿಸಬೇಕು ಎಂದು ಸೂಚನೆ ನೀಡಿದರು.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹೊಸದಾಗಿ ನಿರ್ಮಿಸಲಾದ ಇಂದಿರಾ ಕ್ಯಾಂಟೀನ್‌ಗಳನ್ನು ಶೀಘ್ರದಲ್ಲೇ ಉದ್ಘಾಟಿಸಲಾಗುವುದು ಎಂದು ಜಿಲ್ಲಾಧಿಕಾರಿ ಸಭೆಗೆ ಮಾಹಿತಿ ನೀಡಿದಾಗ ಸಚಿವರು ಮಾತನಾಡಿ ಇಂದಿರಾ ಕ್ಯಾಂಟೀನ್‌ಗಳಲ್ಲಿ ಗುತ್ತಿಗೆದಾರರು ಊಟ ಮಾಡುವವರ ಲೆಕ್ಕವನ್ನು ತಪ್ಪಾಗಿ ನೀಡಿ ಸುಳ್ಳು ಬಿಲ್ ಮಾಡಿಕೊಳ್ಳುವುದನ್ನು ತಡೆಯಲು ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಇನ್ನು ಮುಂದೆ ಸುಳ್ಳು ಬಿಲ್ಲುಗಳಿಗೆ ಅವಕಾಶವಿಲ್ಲ ಎಂದು ತಿಳಿಸಿದರಲ್ಲದೆ, ಪೌರ ಕಾರ್ಮಿಕರ ನೇಮಕಾತಿ ಹಾಗೂ ವೇತನ ಪಾವತಿ ಬಗ್ಗೆ ಮಾಹಿತಿ ಪಡೆದರು.

ಸಭೆಯಲ್ಲಿ ಎಸ್‌ಎಫ್‌ಸಿ, 15ನೇ ಹಣಕಾಸು, ಸ್ವಚ್ಛ ಭಾರತ್ ಮಿಷನ್ ಯೋಜನೆ, ತೆರಿಗೆ ವಸೂಲಾತಿ, ಎ-ಖಾತಾ/ಬಿ-ಖಾತಾ, ಕುಡಿಯುವ ನೀರಿನ ಕಾಮಗಾರಿ, ತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನೆ ನಡೆಸಲಾಯಿತು. ಪೌರಾಡಳಿತ ಇಲಾಖೆಯ ಮುಖ್ಯ ಇಂಜಿನಿಯರ್ ರಾಧಾಕೃಷ್ಣ, ನಗರ ಸ್ಥಳೀಯ ಸಂಸ್ಥೆಗಳ ಮುಖ್ಯ ಅಧಿಕಾರಿಗಳು ಹಾಗೂ ಇಂಜಿನಿಯರ್‌ಗಳು ಮತ್ತಿತರರು ಹಾಜರಿದ್ದರು.

# ಪಶು ಚಿಕಿತ್ಸಾಲಯ ಕಟ್ಟಡ ನಿರ್ಮಾಣಕ್ಕೆ ಶಾಸಕರಿಂದ ಭೂಮಿ ಪೂಜೆ



**ಮೊಳಕಾಲ್ಮೂರು. :** ತಾಲೂಕಿನ ದೇವಸಮುದ್ರ ಭಾಗದ ಗೋವುಗಳ ಚಿಕಿತ್ಸೆಗಾಗಿ ನಿರ್ಮಾಣವಾಗಲಿರುವ 50.00 ಲಕ್ಷ ರೂ.ವೆಚ್ಚದ ಪಶು ಚಿಕಿತ್ಸಾಲಯವು ತುಂಬಾ ಪ್ರಯೋಜಕಾರಿಯಾಗಲಿದೆ ಎಂದು ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು.

ತಾಲೂಕಿನ ದೇವಸಮುದ್ರ ಗ್ರಾಮದಲ್ಲಿ 2024–25 ನೇ ಸಾಲಿನ ಆರ್.ಐ.ಡಿ.ಎಫ್. 30 ರ ಯೋಜನೆಯಡಿ ಮಂಜೂರಾದ 50.00 ಲಕ್ಷ ರೂ.ವೆಚ್ಚದ ಪಶು ಚಿಕಿತ್ಸಾಲಯದ ನೂತನ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ತಾಲೂಕಿನ ದೇವಸಮುದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಲವಾರು ಗ್ರಾಮಗಳಲ್ಲಿನ ಬಹುತೇಕ ರೈತರು ಹೈನುಗಾರಿಕೆಯನ್ನು ಕೈಗೊಂಡು ಆರ್ಥಿಕವಾಗಿ ಸಬಲರಾಗಲು ಸಹಕಾರಿಯಾಗಿದೆ. ಹೈನುಗಾರಿಕೆಯ ಪಶುಗಳು ಸೇರಿದಂತೆ ಕೃಷಿಗೆ ಬಳಸುವ ಪಶುಗಳು ಕಾಲುಬಾಯಿ ಹಾಗೂ ಇನ್ನಿತರ ಕಾಯಿಲೆಗಳಿಗೆ ಬಲಿಯಾಗುವುದನ್ನು ತಡೆಯಲು ಸೂಕ್ತ ಚಿಕಿತ್ಸೆ ನೀಡಲು ಪಶು ಚಿಕಿತ್ಸಾಲಯವು ಅತ್ಯಾವಶ್ಯಕವಾಗಿದೆ. ಈ ಭಾಗದಲ್ಲಿ ಪಶುಗಳು ಹಾಗೂ ಕುರಿ, ಮೇಕೆಗಳನ್ನು ಸಾಕಾಣಿಕೆ ಮಾಡಲಾಗುತ್ತಿದ್ದು ಈ ಜಾನುವಾರುಗಳ ಅನಾರೋಗ್ಯಕ್ಕೆ ಅಗತ್ಯವಾಗಿದೆ. ಅನಾರೋಗ್ಯಕ್ಕೀಡಾದ ಜಾನುವಾರುಗಳನ್ನು ದೂರದ ರಾಂಪುರ ಗ್ರಾಮದ ಪಶು ಚಿಕಿತ್ಸಾಲಯಕ್ಕೆ ಕರೆದೊಯ್ಯಲು ಕಷ್ಟಸಾಧ್ಯವಾಗುತ್ತಿದ್ದು, ಜಾನುವಾರುಗಳ ಜೀವ ರಕ್ಷಣೆಗಾಗಿ ಸುಸಜ್ಜಿತ ಪಶುಚಿಕಿತ್ಸಾಲಯಕ್ಕೆ ಈ ಭಾಗದ ಜನತೆಯ ಪ್ರಮುಖ ಬೇಡಿಕೆಯಾಗಿದ್ದು, ಈ ಭಾಗದ ಜನತೆಯ ಬೇಡಿಕೆಗನುಗುಣವಾಗಿ ಆರ್.ಐ.ಡಿ.ಎಫ್. 30 ರ ಯೋಜನೆಯಡಿ 50.00 ಲಕ್ಷ ರೂ.ಗಳ ಅನುದಾನವನ್ನು ಮಂಜೂರು ಮಾಡಿಸಲಾಗಿದೆ. ಮಂಜೂರಾದ ಅನುದಾನದಲ್ಲಿ ಸುಸಜ್ಜಿತ ಪಶುಚಿಕಿತ್ಸಾಲಯದ ನೂತನ ಕಟ್ಟಡವನ್ನು ನಿರ್ಮಿಸಿ ಈ ಭಾಗದ ಜಾನುವಾರುಗಳಿಗೆ ಸೂಕ್ತ ಚಿಕಿತ್ಸೆಯ ಸೌಲಭ್ಯ ಕಲ್ಪಿಸಿ ಜಾನುವಾರುಗಳನ್ನು ಸಂರಕ್ಷಿಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕೆಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಗ್ರಾ.ಪಂ.ನ ಅಧ್ಯಕ್ಷೆ ಲಕ್ಷ್ಮಿ ಚಂದ್ರಣ್ಣ, ಉಪಾಧ್ಯಕ್ಷ ಕುಮಾರಸ್ವಾಮಿ, ಗ್ರಾ.ಪಂ.ನ ಸದಸ್ಯರಾದ ಗಂಗಣ್ಣ, ರಮೇಶ್, ಮುಖಂಡರಾದ ಗೋವಿಂದಪ್ಪ, ಹರಿಹರರೆಡ್ಡಿ, ಪಶು ಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಹೆಚ್. ರಂಗಪ್ಪ, ಗ್ರಾ.ಪಂ.ನ ಅಭಿವೃದ್ಧಿ ಅಧಿಕಾರಿ ಬೀರಲಿಂಗಪ್ಪ, ಇನ್ನಿತರ ಮುಖಂಡರು , ಅಧಿಕಾರಿ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

## ಮೀನುಗಾರಿಕೆ ಇಲಾಖೆ: ಮನೆ ನಿರ್ಮಾಣಕ್ಕೆ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

**ಬಳ್ಳಾರಿ :** ಮೀನುಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿನ ವಸತಿರಹಿತ ಮೀನುಗಾರರಿಗೆ ಸರ್ಕಾರದ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳನ್ನು ನಿರ್ಮಿಸಲು ಸಹಾಯಧನ ನೀಡಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಳ್ಳಾರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಸಿರುಗುಪ್ಪ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಬಳ್ಳಾರಿ ಗ್ರಾಮಾಂತರ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ, ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರಕ್ಕೆ 25 ಮನೆ ಮತ್ತು ಸಂಡೂರು ವಿಧಾನಸಭಾ ಕ್ಷೇತ್ರಕ್ಕೆ 25 ಮನೆಗಳು ಸೇರಿ ಒಟ್ಟು ಜಿಲ್ಲೆಗೆ 125 ಮನೆಗಳನ್ನು ಹಂಚಿಕೆ ಮಾಡಲಾಗಿದೆ.

ಅರ್ಜಿಗಳನ್ನು ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ (ಬಳ್ಳಾರಿ, ಸಿರುಗುಪ್ಪ, ಕಂಪ್ಲಿ ವಿಧಾನಸಭಾ ಕ್ಷೇತ್ರ) ಮತ್ತು ಸಂಡೂರು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗಳಲ್ಲಿ ಪಡೆದುಕೊಳ್ಳಬಹುದು.

ಭರ್ತಿ ಮಾಡಿ ಅರ್ಜಿಗಳಲ್ಲಿ ಇದೇ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ ಎಂದು ಮೀನುಗಾರಿಕೆ ಉಪ ನಿರ್ದೇಶಕ ಶಿವಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎ-ಖಾತೆ/ಬಿ-ಖಾತೆ : 3 ತಿಂಗಳ ಕಾಲಾವಧಿ ವಿಸ್ತರಣೆ–ಸಚಿವ ರಹೀಮ್ ಖಾನ್

**ತುಮಕೂರು :** ನಗರ ಪ್ರದೇಶ ವ್ಯಾಪ್ತಿಯಲ್ಲಿ ಮನೆ, ನಿವೇಶನಗಳಿಗೆ ಎ–ಖಾತೆ ಮತ್ತು ಬಿ–ಖಾತೆ ಮಾಡಿಕೊಡುವ ಅವಧಿಯನ್ನು ಮತ್ತೆ 3 ತಿಂಗಳ ಕಾಲ ವಿಸ್ತರಣೆ ಮಾಡಲಾಗಿದೆ ಎಂದು ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಮ್ ಖಾನ್ ತಿಳಿಸಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಪುರಸಭೆ ಹಾಗೂ ಪಟ್ಟಣ ಪಂಚಾಯ್ತಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಡವರ ಮನೆ, ನಿವೇಶನಗಳಿಗೆ ದಾಖಲಾತಿ ಮಾಡಿಕೊಡುವ ಸಲುವಾಗಿ ಬಿ ಖಾತೆಯನ್ನು ಜಾರಿಗೆ ತರಲಾಗಿದ್ದು, ಈಗಾಗಲೇ 3 ತಿಂಗಳ ಅವಧಿ ಮುಕ್ತಾಯಗೊಂಡಿದೆ. ರಾಜ್ಯದಲ್ಲಿ ಶೇ.50ರಷ್ಟು ಮಾತ್ರ ಬಿ ಖಾತೆಗಳಾಗಿರುವ ಹಿನ್ನೆಲೆಯಲ್ಲಿ ಉಳಿದವರಿಗೂ ಅನುಕೂಲ ಕಲ್ಪಿಸುವ ಸಲುವಾಗಿ ಬಿ ಖಾತೆ ಮಾಡಿಕೊಡುವ ಅವಧಿಯನ್ನು ಮತ್ತೆ 3 ತಿಂಗಳ ಕಾಲ ರಾಜ್ಯ ಸರ್ಕಾರ ವಿಸ್ತರಿಸಿದೆ ಎಂದರು.

ಕಳೆದ 30–40 ವರ್ಷಗಳಿಂದ ಯಾವುದೇ ದಾಖಲಾತಿಗಳಿಲ್ಲದೆ ಸಮಸ್ಯೆ ಎದುರಿಸುತ್ತಿದ್ದ ಬಡ ಜನರಿಗೆ ಅನುಕೂಲ ಕಲ್ಪಿಸಬೇಕೆಂಬ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಒತ್ತಾಸೆ ಮೇರೆಗೆ ಸಚಿವ ಸಂಪುಟ ಹಾಗೂ ವಿಧಾನಸಭೆಯಲ್ಲಿ ಈ ಸಂಬಂಧ ಮಸೂದೆ ಮಂಡಿಸಿ ಬಿ ಖಾತೆಯನ್ನು ಜಾರಿಗೊಳಿಸಲಾಗಿದೆ ಎಂದು ಅವರು ತಿಳಿಸಿದರು.

ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ 10,000 ಎ ಖಾತೆ ಮತ್ತು 5800 ಬಿ ಖಾತೆ ಸೇರಿದಂತೆ 15800 ಎ ಮತ್ತು ಬಿ–ಖಾತೆಗಳಿವೆ ಎಂದು ಮಾಹಿತಿ ನೀಡುತ್ತಾ, ಪ್ರಸ್ತುತ 3 ತಿಂಗಳ ಅವಧಿಯಲ್ಲಿ ಶೇ.50ರಷ್ಟು ಮಾತ್ರ ಬಿ ಖಾತೆಯಾಗಿದೆ. ಉಳಿದ ಶೇ.50ರಷ್ಟು ಬಿ ಖಾತೆ ಆಗಬೇಕಾಗಿದೆ. ಹಾಗಾಗಿ ಉಳಿದವರಿಗೂ ಅನುಕೂಲವಾಗಲಿ ಎಂಬ ಉದ್ದೇಶದಿಂದ ಈ ಅವಧಿಯನ್ನು ಮತ್ತೆ ವಿಸ್ತರಣೆ ಮಾಡಲಾಗಿದೆ ಎಂದರು.

ನಗರೋತ್ಥಾನ ಯೋಜನೆಯಡಿ 102 ಕೋಟಿ ರೂ. ಹಣ ಬಿಡುಗಡೆಯಾಗಿದ್ದು, ಈ ಪೈಕಿ 40 ಕೋಟಿ ರೂ. ಮಾತ್ರ ಖರ್ಚಾಗಿದೆ. ಉಳಿದ ಹಣವನ್ನು ಆದಷ್ಟು ಶೀಘ್ರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ವಿನಿಯೋಗಿಸುವಂತೆ ಪಟ್ಟಣ ಪಂಚಾಯತಿ ಹಾಗೂ ಪುರಸಭೆ ಮುಖ್ಯಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಜಿಲ್ಲೆಯ ಪುರಸಭೆ ಹಾಗೂ ಪಟ್ಟಣ ಪಂಚಾಯ್ತಿ ವ್ಯಾಪ್ತಿಗಳಲ್ಲಿ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಸಂಬಂಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆಯೂ ಅಧಿಕಾರಿಗಳಿಗೆ ತಾಕೀತು ಮಾಡಲಾಗಿದೆ ಎಂದರು.

ಇಂದಿರಾ ಕ್ಯಾಂಟೀನ್‌ಗಳಲ್ಲಿ ಸ್ವಚ್ಛತೆ ಕಾಪಾಡುವಂತೆಯೂ ಹಾಗೂ ಸಾರ್ವಜನಿಕರಿಗೆ ಶುಚಿ, ರುಚಿಯಾದ ಆಹಾರ ನೀಡುವಂತೆಯೂ ಸೂಚನೆ ನೀಡಲಾಗಿದೆ. ಇಂದಿರಾ ಕ್ಯಾಂಟೀನ್‌ಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಆಗಾಗ್ಗೆ ಭೇಟಿ ನೀಡಿ ಪರಿಶೀಲಿಸುವಂತೆಯೂ ಸೂಚಿಸಿರುವುದಾಗಿ ಅವರು ಹೇಳಿದರು.

ಇಂದಿರಾ ಕ್ಯಾಂಟೀನ್‌ಗಳನ್ನು ಬಡವರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ರಾಜ್ಯ ಸರ್ಕಾರ ಜಾರಿಗೆ ತಂದಿದೆ. ಯಾವುದೇ ಕಾರಣಕ್ಕೂ ಈ ಕ್ಯಾಂಟೀನ್‌ಗಳಲ್ಲಿ ಜನರಿಗೆ ತೊಂದರೆಯಾಗದಂತೆ ತಿಂಡಿ, ಊಟದ ವ್ಯವಸ್ಥೆ ಮಾಡಬೇಕು. ಈ ಬಗ್ಗೆ ಅಧಿಕಾರಿಗಳು ನಿಗಾ ವಹಿಸಬೇಕು ಎಂದರು.

ಇಂದಿರಾ ಕ್ಯಾಂಟೀನ್‌ಗಳಲ್ಲಿ ಸಿಸಿ ಟಿವಿಗಳು ಕಾರ್ಯನಿರ್ವಹಿಸುವಂತೆ ನೋಡಿಕೊಳ್ಳಬೇಕು. ಒಂದು ವೇಳೆ ಇಂದಿರಾ ಕ್ಯಾಂಟೀನ್ ನಿರ್ವಹಣೆ ಬಗ್ಗೆ ನಿರ್ಲಕ್ಷ್ಯ ತೋರಿದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

# ಮಣಿಪುರ: ಚಂದೇಲ್ ನಲ್ಲಿ ನಡೆದ ಕಾರ್ಯಾಚರಣೆಯಲ್ಲಿ 10 ಉಗ್ರರ ಹತ್ಯೆ; ಮುಂದುವರಿದ ಕೂಂಬಿಂಗ್



**ಇಂಫಾಲ:** ಮಣಿಪುರದ ಚಂದೇಲ್ ಜಿಲ್ಲೆಯಲ್ಲಿ ಉಗ್ರರು ಮತ್ತು ಅಸ್ಸಾಂ ರೈಫಲ್ಸ್ ಘಟಕದೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಕನಿಷ್ಠ 10 ಮಂದಿ ಉಗ್ರರು ಹತ್ಯೆಯಾಗಿದ್ದಾರೆ. ಕಾರ್ಯಾಚರಣೆ ಇನ್ನೂ ಮುಂದುವರಿದಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಈ ಕುರಿತು ಸೇನೆಯ ಪೂರ್ವ ಕಮಾಂಡ್ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ., 'ಭಾರತ–ಮ್ಯಾನ್ಮಾರ್ ಗಡಿಗೆ ಸಮೀಪವಿರುವ ಚಂದೇಲ್ ಜಿಲ್ಲೆಯ ಖೆಂಗ್‌ಜಾಯ್ ತಹಸಿಲ್‌ನ ನ್ಯೂ ಸಮ್ತಾಲ್ ಗ್ರಾಮದ ಬಳಿ ಉಗ್ರರ ಚಲನವಲನಗಳ ಬಗ್ಗೆ ಗುಪ್ತಚರ ಅಧಿಕಾರಿಗಳು ನೀಡಿದ ಖಚಿತ ಮಾಹಿತಿ ಆಧರಿಸಿ ಅಸ್ಸಾಂ ರೈಫಲ್ಸ್ ಘಟಕವು ಮೇ 14 ರಂದು (ಬುಧವಾರ) ಕಾರ್ಯಾಚರಣೆಯನ್ನು ಪ್ರಾರಂಭಿಸಿತ್ತು.

ಈ ವೇಳೆ ಶಂಕಿತರೊಂದಿಗೆ ಗುಂಡಿನ ಚಕಮಕಿ ನಡೆದಿದ್ದು, ಸೇನಾ ಪಡೆ ತಕ್ಕ ಪ್ರತ್ಯುತ್ತರ ನೀಡಿದೆ. ಒಟ್ಟು 10 ಮಂದಿ ಉಗ್ರರನ್ನು ಹತ್ಯೆ ಮಾಡಲಾಗಿದ್ದು, ಅಪಾರ ಪ್ರಮಾಣದ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

# ಗುಡುಗು–ಸಿಡಿಲಿನಿಂದಾಗುವ ಅನಾಹುತ ತಪ್ಪಿಸಲು ಮುನ್ನೆಚ್ಚರಿಕೆ ಸೂಚನೆ ಪಾಲಿಸಿ

**ಬಳ್ಳಾರಿ:** ಸಾಮಾನ್ಯವಾಗಿ ಆರಂಭದ ಮುಂಗಾರು



ಪೂರ್ವದಲ್ಲಿ ಹಾಗೂ ಮುಂಗಾರಿನ ಮಳೆಗಾಲದಲ್ಲಿ ಕಂಡುಬರುವ ಗುಡುಗು–ಸಿಡಿಲಿನಿಂದಾಗುವ ಅಪಾಯಗಳನ್ನು ತಪ್ಪಿಸಲು ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಮೇ ತಿಂಗಳಿನಲ್ಲಿ ಕಂಡುಬರುವ ಮಳೆಗಾಲದ ಆರಂಭದ ಹಂತದಲ್ಲಿ ತೀವ್ರತರದ ಗುಡುಗು–ಸಿಡಿಲು ಕಂಡುಬರುವುದು ಸಾಮಾನ್ಯವಾಗಿದ್ದು, ಜೊತೆಗೆ ಬಿರುಸಾಗಿ ಗಾಳಿ ಸಹಿತ ಮಳೆ ಕಂಡುಬರುವುದು ವಾಡಿಕೆಯಾಗಿದೆ. ಈ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಗುಡುಗು ಸಿಡಿಲು ಸಹಿತ ಮಳೆ ಕಂಡುಬರುತ್ತಿದ್ದು, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮ ವಹಿಸಬೇಕು ಎಂದು ಅವರು ತಿಳಿಸಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಹೊರಡಿಸುವ ಮಾರ್ಗಸೂಚನೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯದ ದೃಷ್ಟಿಯಿಂದ ನೀಡುವ ಸಲಹೆಗಳನ್ನು ಅನುಸರಿಸಬೇಕು ಎಂದು ಹೇಳಿದ್ದಾರೆ.

**ಅನುಸರಿಸಬೇಕಾದ ಕ್ರಮ:** ಬಯಲು ಪ್ರದೇಶಗಳಲ್ಲಿ, ಗಿಡಗಳ ಕೆಳಗೆ ಅಥವಾ ಕಬ್ಬಿಣದಿಂದ ಕೂಡಿರುವ ಕಟ್ಟಡ ಅಥವಾ ಶೆಡ್‌ಗಳಲ್ಲಿ ಆಶ್ರಯ ಪಡೆಯದೇ ಸೂಕ್ತ ಸ್ಥಳದಲ್ಲಿ ಆಶ್ರಯ ಪಡೆಯಬೇಕು. ಇದರಿಂದ ಜೀವ ಹಾನಿ ತಪ್ಪಿಸಲು ಸಾಧ್ಯವಾಗುತ್ತದೆ. ಗುಡುಗ–ಿ–ಮಿಂಚು ಬರಲಿದೆ ಎಂದು ಗೊತ್ತಾದಾಗ ಬಯಲಿನಲ್ಲಿದ್ದರೆ. ತಕ್ಷಣ ಇರುವುದರಲ್ಲಿ ತಗ್ಗು ಪ್ರದೇಶಕ್ಕೆ ಹೋಗಿ ಕುಳಿತುಕೊಳ್ಳಬೇಕು.

ತಗ್ಗು ಪ್ರದೇಶ ಇಲ್ಲದೇ ಬಯಲಿನಲ್ಲಿಯೇ ಇರಬೇಕಾದರೆ ನಿಮ್ಮ ತಲೆಯನ್ನು ಮೊಣಕಾಲುಗಳ ನಡುವೆ ಹುದುಗಿಸಿಕೊಳ್ಳಬೇಕು. ಇದು ಮಿಂಚಿನಿಂದ ಮೆದುಳಿಗೂ, ಹೃದಯಕ್ಕೂ ಆಗುವ ಹಾನಿಯನ್ನು ತಪ್ಪಿಸುತ್ತದೆ. ಮರಗಳಿದ್ದ ಪ್ರದೇಶದಲ್ಲಿದ್ದರೆ ಅಲ್ಲಿಂದ ಬೇಗನೆ ಹೊರಬರುವುದು ಒಳ್ಳೆಯದು. ಏಕೆಂದರೆ ಸಿಡಿಲು ಮೋಡದಿಂದ ಭೂಮಿಗೆ ಹರಿಯಲು ಮರದಂತಹ ಹಸಿ, ಒದ್ದೆ ವಸ್ತುವನ್ನೇ ಆರಿಸಿಕೊಳ್ಳುತ್ತದೆ.

ಎತ್ತರದ ಗುಡ್ಡದ ಮೇಲಿದ್ದರೆ ತಗ್ಗು ಪ್ರದೇಶಲ್ಲೆ ಹೋಗಬೇಕು. ಕುರಿಮಂದೆ ಅಥವಾ ಜಾನುವಾರುಗಳ ಮಧ್ಯ ನಿಂತಿದ್ದರೆ ಅವುಗಳ ಮಧ್ಯದಲ್ಲಿ ಬಗ್ಗಿ ಕುಳಿತುಕೊಳ್ಳಿ, ಏಕೆಂದರೆ ಮಿಂಚು ಪ್ರಾಣಿಗಳಿಗಿಂತ ಎತ್ತರವಿರುವ ಮನುಷ್ಯನನ್ನೇ ಆರಿಸಿಕೊಳ್ಳುತ್ತದೆ.

ಕೆರೆಯಲ್ಲಿ ಈಜುವುದು, ಸ್ನಾನ ಮಾಡುವುದು ಬೇಡ, ನೀರಿನಲ್ಲಿದ್ದರೆ ತಕ್ಷಣ ಹೊರಬೇಕು. ವಿದ್ಯುತ್ ಕಂಬ, ಎಲೆಕ್ಟ್ರಿಕಲ್ ಟವರ್, ಮೊಬೈಲ್ ಟವರ್ ಟ್ರಾನ್ಸ್‌ಫಾರ್ಮರ್ ಮುಂತಾದವುಗಳ ಹತ್ತಿರವೂ ಇರಬಾರದು. ಮಳೆ ಬರುವ ಸಮಯದಲ್ಲಿ ಮನೆಯ ಮೇಲ್ಛಾವಣಿ ಸ್ವಚ್ಛ ಮಾಡುವ ಸಾಹಸ ಬೇಡ, ಮನೆಯ ಕಿಟಕಿಯ ಬಳಿ ನಿಲ್ಲುವುದಕ್ಕಿಂತಲೂ ಮನೆಯ ಮಧ್ಯದಲ್ಲಿರುವುದು ಸುರಕ್ಷಿತ.

ಗುಡುಗು–ಸಿಡಿಲಿನ ಸಂದರ್ಭದಲ್ಲಿ ಮೊಬೈಲ್ ನಲ್ಲಿ ಮಾತನಾಡಬಾರದು. ಚಾರ್ಜ್ ಮಾಡುವ ಸಾಹಸವೂ ಬೇಡ. ಕಾರಿನಲ್ಲಿ ಪ್ರಯಾಣಿಸುತ್ತಿದ್ದರೆ ಗಾಜನ್ನು ಮುಚ್ಚಿಕೊಳ್ಳಿ, ಕಾರಿನ ಬಾಡಿಯನ್ನು ಸಾಧ್ಯವಾದಷ್ಟು ಸ್ಪರ್ಶಿಸದೇ ಮಧ್ಯದಲ್ಲಿ ಕುಳಿತುಕೊಳ್ಳುವುದು ಒಳ್ಳೆಯದು.

# ಬಸ್ ನಿಲ್ದಾಣಗಳಲ್ಲಿ ಕ್ಯೂ ಆರ್ ಕೋಡ್ ಮೂಲಕ ಸ್ವಚ್ಛತಾ ಅಭಿಯಾನ



**ಹಾವೇರಿ :** ವಾಕರಸಾ ಸಂಸ್ಥೆಯ ಸಾರಿಗೆ ಬಸ್ ನಿಲ್ದಾಣಗಳಲ್ಲಿ ಸಾರಿಗೆ ಸಂಸ್ಥೆ ಸ್ವಚ್ಛತೆ ಕಾಪಾಡುವ ಉದ್ದೇಶದಿಂದ "ನಮ್ಮ ಬಸ್ ನಿಲ್ದಾಣ, ಸ್ವಚ್ಛ ಬಸ್ ನಿಲ್ದಾಣ" ಎಂಬ ಹೆಸರಿನಲ್ಲಿ "ಕ್ಯೂ ಆರ್ ಕೋಡ್ ಮೂಲಕ ಸ್ವಚ್ಛತಾ ಅಭಿಯಾನ ಆರಂಭಿಸಲಾಗಿದ್ದು, ಸಾರ್ವಜನಿಕರು ಈ "ಕ್ಯೂ ಆರ್" ಕೋಡ ಬಳಸಿ ಬಸ್ ನಿಲ್ದಾಣದ ಸ್ವಚ್ಛತೆ ಬಗ್ಗೆ ತಮ್ಮ ಅಭಿಪ್ರಾಯ ಹಾಗೂ ಸಲಹೆಗಳನ್ನು ಸಂಸ್ಥೆಗೆ ನೀಡಬಹುದಾಗಿದೆ ಎಂದು ಹಾವೇರಿ ವಿಭಾಗದ ಸಾರಿಗೆ ಅಧಿಕಾರಿ ಅಶೋಕ. ಆರ್.ಪಾಟೀಲ್ ಅವರು ಹೇಳಿದರು.

ಅವರು ಹಾವೇರಿ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ, ನಿಲ್ದಾಣದಲ್ಲಿನ ಸಂಸ್ಥೆಯ ಸಿಬ್ಬಂದಿಗಳಿಗೆ ನಿಲ್ದಾಣದ ನಿರ್ವಹಣೆಯನ್ನು ಉತ್ತಮವಾಗಿ ನಿರ್ವಹಿಸಲು ತಿಳಿಸಿದರು ಹಾಗೂ ಸಾರ್ವಜನಿಕರಿಗೆ ಬಸ್ ನಿಲ್ದಾಣದ ನಿರ್ವಹಣೆಯ ಕುರಿತು "ಕಿಖ"ಕೋಡ ಖಅಂಓ ಮೂಲಕ ಅಭಿಪ್ರಾಯ ಸಲ್ಲಿಸಬಹುದಾಗಿದ್ದು, ಈ ಕುರಿತಂತೆ ಆನ್ ಲೈನ್ ಮೂಲಕ ಬಸ್ ನಿಲ್ದಾಣದ ಅಭಿಪ್ರಾಯ ಸಲ್ಲಿಸಬಹುದು ಎಂದು ತಿಳಿಸಿದರು.

ಇಡೀ ಸಾರಿಗೆ ಸಂಸ್ಥೆಯಲ್ಲಿ ವಾಯುವ್ಯ ಸಾರಿಗೆ ಸಂಸ್ಥೆ ಪ್ರಥಮ ಬಾರಿಗೆ ಇಂತಹ ಪ್ರಯೋಗಕ್ಕೆ ಮುಂದಾಗಿದ್ದು, ಈ ಅಭಿಯಾನದಲ್ಲಿ ಬಸ್ ನಿಲ್ದಾಣಗಳ ಸ್ವಚ್ಛತೆ, ಶೌಚಾಲಯ ನಿರ್ವಹಣೆ, ತ್ಯಾಜ್ಯ ವಿಲೇವಾರಿ, ಶೌಚಾಲಯದ ದರ ಪಟ್ಟಿ ಅಳವಡಿಕೆ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಸಂಚಾರ ನಿಯಂತ್ರಕರು ಪ್ರಯಾಣಿಕರೊಂದಿಗೆ ಸೌಜನ್ಯದ ನಡವಳಿಕೆ ಇತ್ಯಾದಿ ಅಂಶಗಳ ಕುರಿತು ಮೌಲ್ಯಮಾಪನ ಮಾಡಲು ಸಾರ್ವಜನಕರಿಗೆ ಅವಕಾಶ ನೀಡಲಾಗಿದೆ ಎಂದರು.

ಅಭಿಪ್ರಾಯ ಹಾಗೂ ಸಲಹೆ ಜತೆಗೆ ಆ ಬಸ್ ನಿಲ್ದಾಣಕ್ಕೆ ರ್‍ಯಾಂಕ್ ಕೂಡಾ ಕೊಡಬಹುದುದು, ನೀವು ಕೊಡುವ ರ್‍ಯಾಂಕ್ ಆಧಾರದ ಮೇಲೆಯೇ ಉತ್ತಮ ರೀತಿಯ ಸ್ವಚ್ಛತೆ ಕಾಪಾಡುವ ಬಸ್ ನಿಲ್ದಾಣಗಳನ್ನು ಹಾಗೂ ಅಲ್ಲಿನ ಸಿಬ್ಬಂದಿಗೆ "ನಮ್ಮ ಬಸ್ ನಿಲ್ದಾಣ ಸ್ವಚ್ಛ ನಿಲ್ದಾಣ" ಎಂಬ ಶೀರ್ಷಿಕೆಯಡಿ ಬಹುಮಾನ, ಪ್ರಶಸ್ತಿಗಳನ್ನು ನೀಡಿ ಪ್ರೋತ್ಸಾಹಿಸಲು ಸಾರಿಗೆ ಸಂಸ್ಥೆ ನಿರ್ಧರಿಸಿದೆ ಎಂದು ತಿಳಿಸಿದರು.

## ಬಳ್ಳಾರಿ: ಸರ್ಕಾರಿ ಐಟಿಐ ಕಾಲೇಜು ಪ್ರವೇಶಾತಿಗೆ ಅರ್ಜಿ ಆಹ್ವಾನ

**ಬಳ್ಳಾರಿ :** ನಗರದ ರೇಡಿಯೋ ಪಾರ್ಕ್ ಹತ್ತಿರದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಪ್ರಸಕ್ತ ಸಾಲಿಗೆ ವಿವಿಧ ವೃತ್ತಿಗಳಿಗೆ ಪ್ರವೇಶಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಸ್ಥೆಯ ಪ್ರಾಚಾರ್ಯರಾದ ಪಂಡಿತಾರಾಧ್ಯ ಅವರು ತಿಳಿಸಿದ್ದಾರೆ.

10 ನೇ ತರಗತಿ ಪಾಸ್/ಫೇಲ್ ಆದ ಅಭ್ಯರ್ಥಿಗಳು ವೆಬ್ ಸೈಟ್ ವಿಳಾಸ www.cite.karnataka.gov.in ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದ್ದು, ಇಲ್ಲವೇ ನೇರವಾಗಿ ಸಂಸ್ಥೆಗೆ ಭೇಟಿ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಮೇ 29 ಕೊನೆಯ ದಿನವಾಗಿದೆ. ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿದ ಸಂಸ್ಥೆಯಲ್ಲಿ ಮಾತ್ರ ದಾಖಲೆ ಪರಿಶೀಲನೆಗೆ ಕಡ್ಡಾಯವಾಗಿ ಹಾಜರಾಗಬೇಕು.

**ವಿಶೇಷ ಸೂಚನೆ :** ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ನೀಡುವ ಮೊಬೈಲ್ ಸಂಖ್ಯೆ ಹಾಗೂ ಇ–ಮೇಲ್ ವಿಳಾಸವನ್ನು ಪ್ರವೇಶಾತಿ ಮತ್ತು ಪರೀಕ್ಷೆ ಮುಗಿಯುವವರೆಗೂ ಬದಲಾವಣೆ ಮಾಡುವಂತಿಲ್ಲ.

ಹೆಚ್ಚಿನ ಮಾಹಿತಿಗಾಗಿ ಮೊ.9916300462 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಸಚಿವರಿಂದ ಕೃತಕ ಬುದ್ಧಿಮತ್ತೆ ಕೇಂದ್ರದ ಕಟ್ಟಡ ಉದ್ಘಾಟನೆ

**ಧಾರವಾಡ :** ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು, ಇಂದು ಬೆಳಿಗ್ಗೆ ಧಾರವಾಡ ಜಂಟಿ ಕೃಷಿ ನಿರ್ದೇಶಕರ ಕಚಢರಿ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ ಕೇಂದ್ರದ ನೂತನ ಕಟ್ಟಡ ಹಾಗೂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ನೂತನ ಕಟ್ಟಡ ಮತ್ತು ಜೈವಿಕ ಗೊಬ್ಬರ ಗುಣ ನಿಯಂತ್ರಣ ಪ್ರಯೋಗಶಲಯ ಕಟ್ಟಡವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶಾಸಕ ಎನ್.ಎಚ್. ಕೋನರಡ್ಡಿ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್.ಪಾಟೀಲ, ಕೃಷಿ ಇಲಾಖೆ ಆಯುಕ್ತ ವೈ.ಎಸ್.ಪಾಟೀಲ, ಕೃಷಿ ಇಲಾಖೆ ನಿರ್ದೇಶಕ ಡಾ.ಜಿ.ಟಿ.ಪುತ್ರ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಮಲ್ಲನಗೌಡ ಪಾಟೀಲ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಕೃಷಿ ಇಲಾಖೆ ಅಧಿಕಾರಿಗಳು, ರೈತ ಪ್ರಮುಖರು ಉಪಸ್ಥಿತರಿದ್ದರು.



**ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ ಕೇಂದ್ರ:** ಕೃತಕ ಬುದ್ಧಿಮತ್ತೆಯನ್ನು ಕೃಷಿ ಕ್ಷೇತ್ರದ ಅಭಿವೃದ್ಧಿಯಲ್ಲಿ ಬಳಸುವುದು ಯೋಜನೆ ಉದ್ದೇಶವಾಗಿದೆ. ಇದರಿಂದ ವಿವಿಧ ಕ್ಷೇತ್ರಗಳ ಜ್ಞಾನವನ್ನು ಬಳಸಿಕೊಳ್ಳಬಹುದು. ಇತ್ತೀಚಿನ ದಿನಮಾನಗಳಲ್ಲಿ ಈ ತಂತ್ರಜ್ಞಾನ ಬಳಸಿ ಉತ್ಪಾದನಾ ಪದ್ಧತಿ ಸುಧಾರಿಸಲಾಗಿದೆ, ಇಳುವರಿ ಹೆಚ್ಚಾಗಿದೆ, ಕೃಷಿ ಕ್ಷೇತ್ರವು ವೈವಿಧ್ಯಮಯವಾಗಿದೆ. ಯಥೇಚ್ಚ ಅಂಕಿ ಅಂಶ ಮತ್ತು ದೊಡ್ಡ ಪ್ರಮಾಣದ ಮಾಹಿತಿಯನ್ನು ಸಂಗ್ರಹಿಸುವುದು, ಬಳಸುವುದು, ಅವಶ್ಯವಾಗಿದೆ.

ಎಲ್ಲಾ ಕೆಲಸವನ್ನು ಸುಲಭವಾಗಿ ಹಾಗೂ ನಿಖರವಾಗಿ ಮಾಡಲು ಸಹಾಯಕವಾಗಿದೆ. ಕಾಲಕಾಲಕ್ಕೆ ಬದಲಾಗುತ್ತಿರುವ ಕೃಷಿ ವಲಯದ ವಿದ್ಯಮಾನಗಳ ಹಿನ್ನೆಲೆಯಲ್ಲಿ ನೀತಿ ನಿರ್ಧಾರ ರೂಪಿಸುವಲ್ಲಿ ಪ್ರಸ್ತುತ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕಾಗಿದೆ.

ವಿವಿಧ ಬೇಸಾಯ ಕ್ರಮಗಳು, ಬಿತ್ತನೆ, ನೀರಾವರಿ, ಗೊಬ್ಬರ ಬಳಕೆ, ಕ್ರಿಮಿಕೀಟಗಳ ನಿರ್ವಹಣೆ ಮುಂತಾದವುಗಳಿಗೆ ಎಐಎಸಿ ನೆರವಿಗೆ ಬರುತ್ತದೆ. ದೂರಸಂವೇದಿ ತಂತ್ರಜ್ಞಾನದೊಂದಿಗೆ ವೈಜ್ಞಾನಿಕವಾಗಿ ಸಂಪನ್ಮೂಲಗಳ ನಿರ್ವಹಣೆಯನ್ನು ಮಾಡಬಹುದಾಗಿದೆ. ಕೃತಕ ಬುದ್ಧಿಮತ್ತೆ ಕೇಂದ್ರ ಕಟ್ಟಡವನ್ನು 3.75 ಕೋಟಿ ಮೊತ್ತದಲ್ಲಿ ಕರ್ನಾಟಕ ಗೃಹ ಮಂಡಳಿ ಇವರಿಂದ ನಿರ್ಮಿಸಲಾಗಿದೆ.

ಕಟ್ಟಡದಲ್ಲಿ ವರ್ಕ್ ಸ್ಪೇಸ್ ಕ್ಯೂಬಿಕಲ್ಸ್, ಸರ್ವರ್ ಕೊಠಡಿ, ಬ್ಯಾಟರಿ ಕೊಠಡಿ, ಯುಟಿಲಿಟಿ & ಟೂಲ್ ರೂಮ್, ಕಾನ್ಫರೆನ್ಸ್ ಹಾಲ್, ಹಾಡ್ ಕ್ಯಾಬಿನ್, ಊಟದ ಕೊಠಡಿ, ಲಿಫ್ಟ್, ಇನ್ನು ಹಲವಾರು ವ್ಯವಸ್ಥೆಗಳನ್ನು ಮಾಡಲಾಗಿದೆ.

**ಧಾರವಾಡ ಜಿಲ್ಲಾ ಕೃಷಿ ತರಬೇತಿ ಕೇಂದ್ರ:** ಕೃಷಿ ಇಲಾಖೆಯ ಹಿರಿಯ, ಕಿರಿಯ ಅಧಿಕಾರಿಗಳಿಗೆ ಮತ್ತು ರೈತ ಸಮುದಾಯದವರಿಗೆ ವಿವಿಧ ತರಬೇತಿ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಲು ಬೆಳೆ ಸಂಗೋಪನೆ ಅಲ್ಲದೆ ಕೃಷಿ ಸಂಬಂಧಿ ಎಲ್ಲ ಉಪಕಸುಬಗಳು ಹಾಗೂ ಆದಾಯ ತರುವ ಚಟುವಟಿಕೆಗಳ ಕುರಿತಾಗಿ ವಿವಿಧ ತರಬೇತಿಗಳನ್ನು ನೀಡಲಾಗುತ್ತಿದೆ. ತರಬೇತಿ ಕೇಂದ್ರದ ನೂತನ ಕಟ್ಟಡವನ್ನು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ಅಡಿಯಲ್ಲಿ, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಗಮ, ಧಾರವಾಡ ಇವರಿಂದ ನಿರ್ಮಿಸಲಾಗಿದೆ. ಧಾರವಾಡ ಜೈವಿಕ ಗೊಬ್ಬರ ಗುಣ ನಿಯಂತ್ರಣ ಪ್ರಯೋಗಾಲಯ: ಜೈವಿಕ ಗೊಬ್ಬರ ಬಳಕೆಯಿಂದ ಕೃಷಿಯಲ್ಲಿ ರಸಗೊಬ್ಬರ ಪ್ರಮಾಣವನ್ನು ಕಡಿಮೆ ಮಾಡಬಹುದು, ಉತ್ಪಾದನಾ ವೆಚ್ಚವನ್ನು ತಗ್ಗಿಸುವುದು, ಪರಿಸರ ಮಾಲಿನ್ಯವನ್ನು ನಿಯಂತ್ರಿಸಬಹುದು. ಮಾರುಕಟ್ಟೆಯಲ್ಲಿ ವಿವಿಧ ಜೈವಿಕ ಗೊಬ್ಬರಗಳು ಲಭ್ಯವಿದ್ದು, ಅವುಗಳ ಗುಣಮಟ್ಟವನ್ನು ಖಾತ್ರಿ ಪಡಿಸಿಕೊಳ್ಳುವುದು ಅವಶ್ಯಕವಾಗಿದೆ.

ಜೈವಿಕ ಗೊಬ್ಬರ ಗುಣನಿಯಂತ್ರಣ ಪ್ರಯೋಗಾಲಯವು ಮಾದರಿ ವಿಶ್ಲೇಷಣೆ ಕೆಲಸವನ್ನು ಪೂರೈಸುತ್ತದೆ. 2019–20 ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯಲ್ಲಿ ಕಟ್ಟಡ ನವೀಕರಣ ಮತ್ತು ವಿಸ್ತರ್ಣೆ ಕಾಮಗಾರಿಯನ್ನು ಕೈಕೊಳ್ಳಲಾಗಿದೆ.

# ಕೃಷಿಗೆ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಲಭ್ಯವಾಗುವಂತೆ ಕ್ರಮ



**ಹರಿಹರ :** ಕೃಷಿಗೆ ಅವಶ್ಯಕವಾಗಿರುವ ಉತ್ತಮ ಗುಣ ಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳು ಸಕಾಲದಲ್ಲಿ ರೈತರಿಗೆ ಲಭ್ಯವಾಗುವಂತೆ ಕ್ರಮ ವಹಿಸಲಾಗುವುದು ಎಂದು ಸಹಾಯಕ ಕೃಷಿ ನಿರ್ದೇಶಕ ಎಸ್.ನಟರಾಜ್ ಹೇಳಿದರು.

ನಗರದ ಕೃಷಿ ಇಲಾಖೆಯ ಆವರಣದಲ್ಲಿ ಕೃಷಿ ಪರಕರ ಮಾರಾಟ ಗಾರರಿಗೆ ಬುಧವಾರ ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಯನ್ನು ಉದ್ಘಾಟಿಸಿ ಮಾತನಾಡಿದ ಅವರು,2025–26 ನೇ ಸಾಲಿನ ಮುಂಗಾರು ಹಂಗಾಮು ಜೂನ್ ನಿಂದ ಪ್ರಾರಂಭ ವಾಗುತ್ತಿದ್ದು, ಕೃಷಿಗೆ ಅವಶ್ಯಕವಾಗಿರುವ ಉತ್ತಮ ಗುಣ ಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳು ಸಕಾಲದಲ್ಲಿ ರೈತರಿಗೆ ಲಭ್ಯವಾಗುವಂತೆ ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಕೃಷಿ ನಿರ್ದೇಶಕರ ಕಛೇರಿಯ ಜಾರಿದಳ ಸಹಾಯಕ ಕೃಷಿ ನಿರ್ದೇಶಕ ಬಿ.ವಿ.ಶ್ರೀನಿವಾಸಲು ಮಾತನಾಡುತ್ತಾ ಎಲ್ಲಾ ಕೃಷಿ ಪರಿಕರ ಮಾರಾಟಗಾರರಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರ ಕಾಯ್ದೆ ಕಾನೂನಿನ ಬಗ್ಗೆ ಅರಿವು ಮೂಡಿಸುವ ಉಪನ್ಯಾಸ ಸವಿಸ್ತಾರವಾಗಿ ನೀಡಿದರು.

ಇದೇ ವೇಳೆ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಜಾರಿದಳ ಸಹಾಯಕ ಕೃಷಿ ನಿರ್ದೇಶಕ ವಿ.ಪಿ.ಗೋವರ್ಧನ ಮಾತನಾಡಿ ಕೃಷಿ ಪರಿಕರ ಮಾರಾಟಗಾರರಿಗೆ ಕೀಟನಾಶಕ ಕಾಯ್ದೆಗೆ ಸಂಬಂಧಿಸಿದ ನೂತನ ತಿದ್ದುಪಡಿಗಳ ಬಗ್ಗೆ ವಿವರಣೆ ನೀಡಿದರು .

ಕೃಷಿ ಪರಿಕರ ಮಾರಾಟಗಾರರಿಗೆ ಒಂದು ದಿನದ ತರಬೇತಿ ಯಶಸ್ವಿಯಾಗಿ ನಡೆದ ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿ ಎನ್.ಕೆ. ವಿಕಾಸ್ ನಿರೂಪಿಸಿದರು. ಕೃಷಿ ಇಲಾಖೆ ತಾಂತ್ರಿಕ ಅಧಿಕಾರಿ ಶ್ರೀಮತಿ ಪೂರ್ಣಶ್ರೀ ಎಂ ಬಡಿಗೇರ, ಗಜಾನನ ಮೇಹರ್ವಾಡೆ, ಯೋಗೇಶ್ ಗೌಡ, ಎಂ.ವಿ.ರಾಕೇಶ್ ಮತ್ತು ಪ್ರಸಾದ ಬಿ.ಎಂ., ಗಣೇಶ್ ರವರು ಉಪಸ್ಥಿತರಿದ್ದರು.

# ಯುವಕರ ದೃಢ ನಿರ್ಧಾರ, ಕಠಿಣ ಪರಿಶ್ರಮ, ಸತತ ಪ್ರಯತ್ನ ರಾಷ್ಟ್ರದ ಅಭಿವೃದ್ಧಿಗೆ ಶಕ್ತಿ

**ದಾವಣಗೆರೆ:** ಭಾರತವು ಯೌವನದ ಶಕ್ತಿಯಿಂದ ಕೂಡಿದ ರಾಷ್ಟ್ರವಾಗಿದೆ. ಇಂದಿನ ವಿದ್ಯಾರ್ಥಿಗಳು ಕೇವಲ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಷ್ಟೇ ಅಲ್ಲ, ನಾಳೆಯ ನಾಯಕರಾಗಿದ್ದಾರೆ. ಯುವಕರ ದೃಢ ನಿರ್ಧಾರ, ಕಠಿಣ ಪರಿಶ್ರಮ ಮತ್ತು ಸತತ ಪ್ರಯತ್ನಗಳನ್ನು ಸಮಾಜ ಮುಖಿ ಕಾರ್ಯಗಳಿಗೆ ಬಳಸಿ ರಾಷ್ಟ್ರದ ಅಭಿವೃದ್ಧಿಗೆ ಶಕ್ತಿಯಾಗಬೇಕು ಎಂದು ಪ್ರಾಧ್ಯಾಪಕ ಡಾ. ವೆಂಕಟೇಶ್‌ಬಾಬು ಕರೆ ನೀಡಿದರು.

ನಗರದ ಚಾಣಕ್ಯ ಪ್ರಥಮ ದರ್ಜೆ ಕಾಲೇಜಿನ ಆಶ್ರಯದಲ್ಲಿ ಹೊಸಳ್ಳಿ ಗ್ರಾಮದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ಶಿಬಿರದ ನಾಲ್ಕನೇ ದಿನದ ಕಾರ್ಯಕ್ರಮದಲ್ಲಿ ಬುದ್ಧ ಪೂರ್ಣಿಮೆಯ ಸಂದರ್ಭದಲ್ಲಿ ಉಪಸ್ಥಿತರಿದ್ದು ಅವರು ಮಾತನಾಡುತ್ತಿದ್ದರು.



ಸ್ವಾಮಿ ವಿವೇಕಾನಂದ, ಭಗತ್ ಸಿಂಗ್, ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಜೀವನದ ಉದಾಹರಣೆಗಳನ್ನು ನೀಡಿ, ಯುವಕರಲ್ಲಿ ದೇಶಭಕ್ತಿ, ಶಿಸ್ತು ಮತ್ತು ನೈತಿಕ ಮೌಲ್ಯಗಳ ಅಗತ್ಯವನ್ನು ಒತ್ತಿ ಹೇಳಿದರು. ಸಾಮಾಜಿಕ ಮಾಧ್ಯಮಗಳಲ್ಲಿ ಸಮಯ ವ್ಯರ್ಥ ಮಾಡುವ ಬದಲು, ಯುವಕರು ತಮ್ಮ ಕೌಶಲ್ಯಗಳನ್ನು ಬೆಳೆಸಿಕೊಳ್ಳಲು ಒತ್ತು ನೀಡಬೇಕು ಎಂದು ವೆಂಕಟೇಶ್‌ಬಾಬು ಸಲಹೆ ನೀಡಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಡಾ. ಮಂಜುನಾಥ್ ಜೆ.ಎಂ. ಅವರು ಬುದ್ಧ ಪೂರ್ಣಿಮೆಯ ಮಹತ್ವ ಮತ್ತು ಗೌತಮ ಬುದ್ಧರ ತತ್ವಗಳ ಕುರಿತು ವಿವರಿಸುತ್ತಾ, ಬುದ್ಧ ಪೂರ್ಣಿಮೆಯು ಶಾಂತಿ, ಸಹಿಷ್ಣುತೆ ಮತ್ತು ಜ್ಞಾನದ ಪ್ರತೀಕವಾಗಿದೆ. ಬುದ್ಧರ ಜನನ, ಬೋಧಿ ಮತ್ತು ಮಹಾಪರಿನಿರ್ವಾಣವು ಈ ದಿನದಂದೇ ಸಂಭವಿಸಿದೆ. ಅವರ ಅಷ್ಟಾಂಗಮಾರ್ಗ ಸಮ್ಯಕ್ ದೃಷ್ಟಿ, ಸಮ್ಯಕ್ ಸಂಕಲ್ಪ, ಸಮ್ಯಕ್ ವಾಚನ ಮುಂತಾದ ತತ್ವಗಳು ಮಾನವೀಯತೆಯ ಮಾರ್ಗದರ್ಶಿಗಳಾಗಿವೆ ಎಂದು ತಿಳಿಸಿದರು. ಯುವಕರು ಬುದ್ಧನ ತತ್ವಗಳನ್ನು ಅಳವಡಿಸಿಕೊಂಡು ವ್ಯಕ್ತಿತ್ವ ವಿಕಾಸ, ಶಾಂತಿಯುತ ಸಮಾಜ ನಿರ್ಮಾಣ ಮತ್ತು ಜ್ಞಾನಮಾರ್ಗದಲ್ಲಿ ಮುನ್ನಡೆಯಬೇಕೆಂದು ಸಲಹೆ ನೀಡಿದರು.

ಚೈತನ್ಯ ಕಾಲೇಜಿನ ಉಪನ್ಯಾಸಕ ನಾಗರಾಜ್ ನಾಯಕ್ ಅವರು ಎನ್ನೆಸ್ಸೆಸ್‌ನ ಉದ್ದೇಶಗಳನ್ನು ವಿವರಿಸಿದರು. ರಾಷ್ಟ್ರೀಯ ಸೇವಾ ಯೋಜನೆಯು ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ನಾಯಕತ್ವ ಕೌಶಲ್ಯ ಮತ್ತು ಗ್ರಾಮೀಣ ಅಭಿವೃದ್ಧಿಯ ಜವಾಬ್ದಾರಿಯನ್ನು ಬೆಳೆಸುತ್ತದೆ. ಇದು ಪಠ್ಯೇತರ ಚಟುವಟಿಕೆಗಳ ಮೂಲಕ ವ್ಯಕ್ತಿತ್ವ ವಿಕಾಸಕ್ಕೆ ವೇದಿಕೆಯಾಗಿದೆ ಎಂದು ಒತ್ತಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ವಾಣಿಜ್ಯ ವಿಭಾಗದ ಉಪನ್ಯಾಸಕರಾದ ಕು. ಸಂಜನಾ ವಹಿಸಿದ್ದರು. ಮುಖ್ಯ ಅತಿಥಿಯಾಗಿ ಕಾಲೇಜಿನ ಪ್ರಾಂಶುಪಾಲ ಸ್ವಾಮಿ, ಸಂಯೋಜನಾಧಿಕಾರಿ ರವಿ ಕುಮಾರ್ ಹಲವಾಗಲು ಸೇರಿದಂತೆ ಇತರೆ ಗಣ್ಯರು ಉಪಸ್ಥಿತರಿದ್ದರು.

# ಒಂದು ಸಣ್ಣ ಅಭ್ಯಾಸ, ದೊಡ್ಡ ಪ್ರಯೋಜನ..!

ಸಂಜೆಯ ನಂತರ ದೇಹದಲ್ಲಿನ ಚಯಾಪಚಯ (Metabolism) ಕ್ರಿಯೆಯ ಪ್ರಮಾಣ ಕಡಿಮೆ ಇರುತ್ತದೆ. ತಿಂದ ಆಹಾರ ಸರಿಯಾಗಿ ಜೀರ್ಣವಾಗದಿದ್ದರೆ ಅದು ದೇಹದಲ್ಲಿ ಕೊಬ್ಬಾಗಿ ಬದಲಾಗುವ ಅಪಾಯವಿದೆ. ಇದರಿಂದ ತೂಕ ಹೆಚ್ಚಾಗುವುದು, ಅಜೀರ್ಣ ಮತ್ತು ಹೊಟ್ಟೆ ಉಬ್ಬರದಂತಹ ಸಮಸ್ಯೆಗಳಿಗೆ ದಾರಿ ಮಾಡಿಕೊಡುತ್ತದೆ. ಹಾಗಾಗಿ ನಾವು ರಾತ್ರಿಯ ಊಟವನ್ನು ಬೇಗ ಮಾಡಿದ್ರೆ, ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು.

ರಾತ್ರಿ ವಿಶ್ರಾಂತಿ ಬಯಸುತ್ತದೆ..

ರಾತ್ರಿ ವೇಳೆ ನಮ್ಮ ದೇಹವು ವಿಶ್ರಾಂತಿ ಬಯಸುತ್ತದೆ. ನಾವು ತಡವಾಗಿ ಊಟ ಮಾಡಿದಾಗ ದೇಹವು ವಿಶ್ರಾಂತಿಯ ಮೇಲೆ ಸಂಪೂರ್ಣವಾಗಿ ಗಮನಹರಿಸಲು ಸಾಧ್ಯವಾಗುವುದಿಲ್ಲ. ಆದರೆ ಮೊದಲೇ ಊಟ ಮಾಡುವುದರಿಂದ ದೇಹವು ಆರಾಮವಾಗಿ ವಿಶ್ರಾಂತಿ ಪಡೆಯಲು ಅನುವು ಮಾಡಿಕೊಡುತ್ತದೆ. ಮಾತ್ರವಲ್ಲ, ನಿದ್ರೆಯು ಕೂಡ ತುಂಬಾ ಚೆನ್ನಾಗಿ ಆಗುತ್ತದೆ. ಒಳ್ಳೆಯ ನಿದ್ರೆ ಮಾನಸಿಕ ಒತ್ತಡವನ್ನು ಕಡಿಮೆ ಮಾಡುತ್ತದೆ.



ಇದರಿಂದ ಆರೋಗ್ಯ ಸುಧಾರಿಸುತ್ತದೆ.

ದೇಹದಲ್ಲಿರುವ ಲೆಪ್ಟಿನ್ ಮತ್ತು ಗ್ರೆಲಿನ್ ಹಾರ್ಮೋನುಗಳು (leptin and obesity) ಆಹಾರ ಸೇವಿಸಿದ ನಂತರ ಹಸಿವು ಮತ್ತು ಹೊಟ್ಟೆ ತುಂಬುವಿಕೆಯ ಭಾವನೆ ನಿಯಂತ್ರಿಸುತ್ತವೆ.

ತಡವಾಗಿ ಊಟ ಮಾಡುವುದರಿಂದ ಈ ಹಾರ್ಮೋನುಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ. ಇದು ನಿದ್ರೆಗೆ ಅಗತ್ಯವಾದ ಮೆಲಟೋನಿನ್ (melatonin) ಎಂಬ ಹಾರ್ಮೋನ್ ಕಾರ್ಯನಿರ್ವಹಣೆಯನ್ನು ಅಡ್ಡಿಪಡಿಸುತ್ತದೆ. ಇದರಿಂದ ರಾತ್ರಿ ನಿದ್ರೆ ಬರದೆ ಪರದಾಡಬೇಕಾಗುತ್ತದೆ.

ಅಲ್ಲದೇ ರಾತ್ರಿ ವೇಳೆ ಹೆಚ್ಚಾಗಿ ಕಾರ್ಬೋಹೈಡ್ರೇಟ್ ಇರುವ ಪದಾರ್ಥ ಸೇವಿಸೋದ್ರಿಂದ ಇದು ರಕ್ತದಲ್ಲಿನ ಸಕ್ಕರೆ ಪ್ರಮಾಣವನ್ನು ಹೆಚ್ಚಿಸುತ್ತದೆ. ಟೈಪ್ 2 ಮಧುಮೇಹ ಬರುವ ಅಪಾಯ ಹೆಚ್ಚಿಸುತ್ತದೆ. ಹಾಗಿದ್ದೂ ನೀವು ನಿಮ್ಮ ಊಟ ಬೇಗನೆ ಮುಗಿಸಿದರೆ ಇಂಥ ಸಮಸ್ಯೆ ಕಡಿಮೆ ಪ್ರಮಾಣದಲ್ಲಿ ಇರುತ್ತದೆ.

### ಎಷ್ಟು ಗಂಟೆಗೆ ಊಟ ಮಾಡಬೇಕು..?

ಸಂಜೆ 7 ಗಂಟೆಯ ಮೊದಲು ಊಟ ಮುಗಿಸುವುದು ಉತ್ತಮ ಅಭ್ಯಾಸ. ಇದರಿಂದ ಬೆಳಗ್ಗೆ ಬೇಗನೆ ಎದ್ದು ಆರೋಗ್ಯಕರ ಉಪಹಾರ ಸೇವಿಸಲು ಸಹಾಯ ಆಗುತ್ತದೆ. ಈ ರೀತಿಯ ಅಭ್ಯಾಸ ದೇಹದ ಸದೃಢಕ್ಕೆ ಮತ್ತು ದಿನಚರಿಯ ಅಗತ್ಯ ನಿಯಮಗಳ ಅನುಸರಿಸಲು ಸಹಾಯ ಮಾಡ್ತದೆ.

# ಆಯಸಿಡಿಟಿ, ಮಲಬದ್ಧತೆ, ಸಾಕಷ್ಟು ಆರೋಗ್ಯ ಪ್ರಯೋಜನಗಳನ್ನು ನೀಡುತ್ತೆ ಓಂಕಾಳು

ಓಂ ಕಾಳನ್ನು ಅಡುಗೆಗೆ ಸಾಮಾನ್ಯವಾಗಿ ಉಪಯೋಗಿಸುತ್ತಲೇ ಇರುತ್ತೇವೆ. ಆದರೆ, ಈ ಓಂ ಕಾಳನ್ನು ಸೇವಿಸುವುದರಿಂದ ಹತ್ತು ಹಲವು ಆರೋಗ್ಯಕಾರಿ ಲಾಭಗಳಿದೆ. ಸಾಕಷ್ಟು ಮಂದಿ ಹೊಟ್ಟೆ, ಕರುಳು ಹಾಗೂ ಜೀರ್ಣಕ್ರಿಯೆಗೆ ಸಂಬಂಧಪಟ್ಟ ಅಂಗಾಂಗಗಳಲ್ಲಿ ಹುಣ್ಣುಗಳಿಂದ ಬಳಲುತ್ತಿರುತ್ತಾರೆ, ಈ ಹುಣ್ಣುಗಳಿಂದ ಬಹಳಷ್ಟು ತೊಂದರೆಯನ್ನು ಅನುಭವಿಸುತ್ತಿರುತ್ತಾರೆ, ಇದಕ್ಕಾಗಿ ಹಲವು ಔಷಧಗಳ ಮೊರೆ ಹೋಗಿರುತ್ತಾರೆ. ಆದರೆ, ಓಂ ಕಾಳುಗಳು ಇಂತಹ ಹುಣ್ಣುಗಳನ್ನು ವಾಸಿಪ್ಎಾಡ್ಲು ಪರಿಣಾಮಕಾರಿಯಾಗಿದೆ ಎಂದರೆ ನಿಮಗೆ ಆಶ್ಚರ್ಯವಾಗಬಹುದು.



ಓಂ ಕಾಳುಗಳು ಅಸಿಡಿಟಿ, ಗ್ಯಾಸ್ ಸಮಸ್ಯೆ, ಜೀರ್ಣಕ್ರಿಯೆಯ ವಿಳಂಬವಾಗುವ ತೊಂದರೆಗಳನ್ನು ಸರಿಪಡಿಸುತ್ತದೆ. ಜೀರ್ಣಕ್ರಿಯೆಯ ತೊಂದರೆಗಳನ್ನು ಸರಿಮಾಡಿಕೊಳ್ಳಲು ಅರ್ಧ ಚಮಚದಷ್ಟು ಓಂಕಾಳುಗಳನ್ನು ಜಗಿದು ತಿನ್ನಬಹುದು ಅಥವಾ ನೀರಿನೊಂದಿಗೆ ಬೆರೆಸಿ ಕುಡಿಯಬಹುದು.

# ಹೆರಿಗೆ ಬಳಿಕ ಕೂದಲು ಉದುರುತ್ತಿದೆಯೇ? ನಿಮ್ಮ ಆಹಾರದಲ್ಲಿ ಈ ವಸ್ತುಗಳನ್ನು ಸೇರಿಸಿ!

ಹೆರಿಗೆಯ ನಂತರ ಮಹಿಳೆಯರು ಎದುರಿಸುವ ಸಾಮಾನ್ಯ ಸಮಸ್ಯೆ ಕೂದಲು ಉದುರುವುದು. ಈ ಸಮಸ್ಯೆ ನಿಧಾನವಾಗಿ ಪ್ರಾರಂಭವಾಗುತ್ತದೆ ಮತ್ತು ಇದ್ದಕ್ಕಿದ್ದಂತೆ ಬಹಳಷ್ಟು ಹೆಚ್ಚಾಗುತ್ತದೆ. ಸ್ವಲ್ಪ ಸಮಯದ ನಂತರ, ಮಹಿಳೆಯರಿಗೆ ತಾವು ಬೋಳಾಗುತ್ತೇವೆ ಎಂದು ಅನ್ನಿಸಲು ಶುರುವಾಗುತ್ತದೆ.

ಹೌದು, ಸಾಕಷ್ಟು ಮಹಿಳೆಯರ ಜೀವನ ಹೆರಿಗೆ ನಂತರ ಬದಲಾಗುತ್ತದೆ. ಇದು ಮಹಿಳೆಯ ಜೀವನವನ್ನು ಬದಲಾಯಿಸುವುದಲ್ಲದೆ, ಆಕೆಯ ದೈಹಿಕ ಆರೋಗ್ಯದ ಮೇಲೂ ಆಳವಾದ ಪರಿಣಾಮ ಬೀರುತ್ತದೆ. ಹೆರಿಗೆಯ ನಂತರ ಮಹಿಳೆಯರು ಎದುರಿಸುವ ಸಾಮಾನ್ಯ ಸಮಸ್ಯೆ ಕೂದಲು ಉದುರುವುದು. ಈ ಸಮಸ್ಯೆ ನಿಧಾನವಾಗಿ ಪ್ರಾರಂಭವಾಗುತ್ತದೆ ಮತ್ತು ಇದ್ದಕ್ಕಿದ್ದಂತೆ ಬಹಳಷ್ಟು ಹೆಚ್ಚಾಗುತ್ತದೆ. ಸ್ವಲ್ಪ ಸಮಯದ ನಂತರ, ಮಹಿಳೆಯರಿಗೆ ತಾವು ಬೋಳಾಗುತ್ತೇವೆ ಎಂದು ಅನ್ನಿಸಲು ಪ್ರಾರಂಭಿಸುತ್ತದೆ. ಆದರೆ ಈ ಸಮಸ್ಯೆ ತುಂಬಾ ಸಾಮಾನ್ಯವಾಗಿದೆ ಮತ್ತು ಪ್ರತಿಯೊಬ್ಬ ಹೊಸ ತಾಯಿಯೂ ಇದನ್ನು ಎದುರಿಸಬೇಕಾಗುತ್ತದೆ.

### ಹೆರಿಗೆಯ ನಂತರ ಕೂದಲು ಏಕೆ ಉದುರುತ್ತದೆ?

ಗರ್ಭಾವಸ್ಥೆಯಲ್ಲಿ ಮಹಿಳೆಯರ ದೇಹದಲ್ಲಿ ಈಸ್ಟ್ರೊಜೆನ್ ಹಾರ್ಮೋನ್ ಮಟ್ಟ ಹೆಚ್ಚಾಗುತ್ತದೆ. ಆದರೆ ಮಗುವಿನ ಜನನದ ನಂತರ ಮಹಿಳೆಯರ ದೇಹದಲ್ಲಿ ಈಸ್ಟ್ರೊಜೆನ್ ಹಾರ್ಮೋನ್ ಮಟ್ಟವು ಕಡಿಮೆಯಾಗಲು ಪ್ರಾರಂಭಿಸುತ್ತದೆ. ಇದರಿಂದಾಗಿ ಕೂದಲು ಉದುರಲು ಪ್ರಾರಂಭಿಸುತ್ತದೆ. ಸ್ವಲ್ಪ ಸಮಯದ



ನಂತರ, ಈ ಹಾರ್ಮೋನ್ ಸಾಮಾನ್ಯ ಮಟ್ಟಕ್ಕೆ ಬಂದಾಗ, ಕೂದಲು ಉದುರುವುದು ಸ್ವಯಂಚಾಲಿತವಾಗಿ ನಿಂತು ಹೊಸ ಬೆಳವಣಿಗೆ ಪ್ರಾರಂಭವಾಗುತ್ತದೆ. ಕೂದಲು ಉದುರುವ ಸಮಯದಲ್ಲಿ, ನಿಮ್ಮ ಆಹಾರದಲ್ಲಿ ಪೌಷ್ಟಿಕಾಂಶಯುಕ್ತ ಆಹಾರಗಳನ್ನು ಸೇರಿಸಿಕೊಳ್ಳುವುದು ಮುಖ್ಯ.

ಮಹಿಳೆಯರು ಮಾಡುವ ತಪ್ಪುಗಳೇನು?

ಹೆರಿಗೆಯ ನಂತರ ಕೂದಲು ಉದುರುವಿಕೆಯನ್ನು ನಿಭಾಯಿಸಲು, ಮಹಿಳೆಯರು ಬಯೋಟಿನ್ ಸೇವನೆಯ ಮೇಲೆ ಮಾತ್ರ ಗಮನ ಹರಿಸುತ್ತಾರೆ. ಕೂದಲಿನ ಆರೋಗ್ಯಕ್ಕೆ ಬಯೋಟಿನ್ ಅತ್ಯಗತ್ಯ ಪೋಷಕಾಂಶವೆಂದು ಪರಿಗಣಿಸಲಾಗಿದ್ದರೂ, ಅದು ಮಾತ್ರ ನಿಮ್ಮ ದೇಹದಲ್ಲಿ ಈಸ್ಟ್ರೊಜೆನ್ ಹಾರ್ಮೋನ್ ಮಟ್ಟವನ್ನು ಹೆಚ್ಚಿಸಲು ಸಾಧ್ಯವಿಲ್ಲ. ಇದಕ್ಕಾಗಿ, ನಿಮ್ಮ ಆಹಾರದಲ್ಲಿ ಎಲ್ಲಾ ರೀತಿಯ ಪೋಷಕಾಂಶಗಳನ್ನು ಸೇರಿಸಿಕೊಳ್ಳುವುದು ಮುಖ್ಯ.

### ಹೆರಿಗೆಯ ನಂತರ ಕೂದಲು ಮತ್ತೆ ಬೆಳೆಯಲು ಈ ಪೋಷಕಾಂಶಗಳು ಅವಶ್ಯಕ

**ಪ್ರೋಟೀನ್:** ಪ್ರೋಟೀನ್ ಕೂದಲಿಗೆ ಬಿಲ್ಡಿಂಗ್ ಬ್ಲಾಕ್ ಆಗಿ ಕಾರ್ಯನಿರ್ವಹಿಸುತ್ತದೆ. ಪ್ರೋಟೀನ್ ಇಲ್ಲದೆ, ಕೂದಲು ದುರ್ಬಲವಾಗುತ್ತದೆ ಮತ್ತು ಮುರಿಯುತ್ತದೆ. ಅನೇಕ ಹೊಸ ತಾಯಂದಿರು ಬಹಳ ಕಡಿಮೆ ಪ್ರೋಟೀನ್ ಸೇವಿಸುತ್ತಾರೆ. ಪ್ರತಿದಿನ 80 ರಿಂದ 100 ಗ್ರಾಂ ಪ್ರೋಟೀನ್ ತಿನ್ನಲು ಪ್ರಯತ್ನಿಸಿ.

**ಕಬ್ಬಿಣ:** ಕೂದಲು ಕಿರುಚೀಲಗಳು ಸೇರಿದಂತೆ ಜೀವಕೋಶಗಳಿಗೆ ಕಬ್ಬಿಣವು ಆಮ್ಲಜನಕವನ್ನು ಪೂರೈಸುತ್ತದೆ.

ಹೆರಿಗೆಯ ನಂತರ ರಕ್ತಸ್ರಾವ ಮತ್ತು ನಿದ್ರೆಯ ಕೊರತೆಯು ದೇಹದಲ್ಲಿ ಕಬ್ಬಿಣದ ಕೊರತೆಯನ್ನು ಉಂಟುಮಾಡುತ್ತದೆ, ಇದು ಅತಿಯಾದ ಕೂದಲು ಉದುರುವಿಕೆ ಮತ್ತು ಶಾಶ್ವತವಾಗಿ ಕೂದಲು ತೆಳುವಾಗುವುದಕ್ಕೆ ಕಾರಣವಾಗುತ್ತದೆ.

**ಸತು:** ಸತುವು ಅಂಗಾಂಶ ದುರಸ್ತಿಗೆ ಸಹಾಯ ಮಾಡುತ್ತದೆ ಮತ್ತು ಕೂದಲು ಕಿರುಚೀಲಗಳ ಸುತ್ತಲಿನ ಎಣ್ಣೆ ಗ್ರಂಥಿಗಳು ಸರಿಯಾಗಿ ಕಾರ್ಯನಿರ್ವಹಿಸಲು ಸಹಾಯ ಮಾಡುತ್ತದೆ.

**ವಿಟಮಿನ್ ಡಿ:** ಹೊಸ ಕೂದಲು ಕಿರುಚೀಲಗಳನ್ನು ರಚಿಸುವಲ್ಲಿ ಮತ್ತು ಕೂದಲಿನ ಬೆಳವಣಿಗೆಯ ಚಕ್ರವನ್ನು ಕಾಪಾಡಿಕೊಳ್ಳುವಲ್ಲಿ ವಿಟಮಿನ್ ಡಿ ಪ್ರಮುಖ ಪಾತ್ರ ವಹಿಸುತ್ತದೆ. ಇದರ ಕೊರತೆಯು ಕೂದಲಿನ ಬೆಳವಣಿಗೆಯನ್ನು ನಿಲ್ಲಿಸುತ್ತದೆ ಮತ್ತು ಕೂದಲು ಉದುರುವಿಕೆಗೆ ಕಾರಣವಾಗಬಹುದು. ಸೂರ್ಯನ ಬೆಳಕು ವಿಟಮಿನ್ ಡಿ ಯ ಅತ್ಯುತ್ತಮ ಮೂಲವಾಗಿದೆ.

# ಬಾದಾಮಿ ತಿನ್ನುವುದರಿಂದ ಚರ್ಮ, ಕೂದಲು ಮತ್ತು ಆರೋಗ್ಯಕ್ಕಗುವ ಪ್ರಯೋಜನ?

ಇದರಲ್ಲಿರುವ ವಿಟಮಿನ್ ಇ, ಆಂಟಿಆಕ್ಸಿಡೆಂಟ್ಸ್, ಆರೋಗ್ಯಕರ ಕೊಬ್ಬು ನಮ್ಮ ಚರ್ಮವನ್ನು ಕಾಪಾಡುವಲ್ಲಿ ಸಹಾಯ ಮಾಡುತ್ತದೆ. ಬಾದಾಮಿ ಚರ್ಮವನ್ನು ತೇವಗೊಳಿಸಲು ಮತ್ತು ಹೈಡ್ರೇಟ್ ಮಾಡಲು ಸಹಾಯ ಮಾಡುತ್ತದೆ, ಕೊಲ್ಯಾಜಿನ್ ಉತ್ಪಾದನೆಯನ್ನು ಉತ್ತೇಜಿಸುತ್ತದೆ ಮತ್ತು ಆಕ್ಸಿಡೇಟಿವ್ ಹಾನಿಯಿಂದ ರಕ್ಷಿಸುತ್ತದೆ.

ಬಾದಾಮಿಯು ಕೊಬ್ಬಿನಾಮ್ಲಗಳಿಂದ ತುಂಬಿದ್ದು, ಇದು ಕೂದಲಿನ ಆರೋಗ್ಯ ಹಾಗೂ ಬಲ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಬಾದಾಮಿ ಎಣ್ಣೆಯನ್ನು ಕೂದಲಿಗೆ ಹಚ್ಚಿದರೆ, ಕೂದಲಿನ ಆರೋಗ್ಯ ಹೆಚ್ಚಾಗುವುದಲ್ಲದೆ, ಕೂದಲಿನ ಹೊಳಪು ಕೂಡ ಹೆಚ್ಚಾಗುತ್ತದೆ.

ಬಾದಾಮಿಯಲ್ಲಿ ಕಂಡುಬರುವ ಮೆಗ್ನೀಸಿಯಮ್ ಆರೋಗ್ಯಕರ ಕೂದಲನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಮೆಗ್ನೀಸಿಯಮ್ ಕೊರತೆಯು ಸಾಮಾನ್ಯವಾಗಿ ಕೂದಲು ಉದುರುವಿಕೆಗೆ ಕಾರಣವಾಗುತ್ತದೆ. ಆದ್ದರಿಂದ ಬಾದಾಮಿ ಎಣ್ಣೆ ಅಥವಾ ಬೀಜಗಳನ್ನು ನಿಮ್ಮ ದಿನಚರಿಯಲ್ಲಿ ಸೇರಿಸಿಕೊಂಡರೆ, ಕೂದಲು ತೆಳುವಾಗುವುದನ್ನು ತಡೆಯಬಹುದಾಗಿದೆ.

ಬಾದಾಮಿ ಎಣ್ಣೆಯನ್ನು ನೇರವಾಗಿ ನೆತ್ತಿಗೆ ಹಚ್ಚುವ ಮೂಲಕ, ಕೂದಲಿನ ಬೇರುಗಳನ್ನು ಗಟ್ಟಿ ಮಾಡಬಹುದು. ಇದು ಆರೋಗ್ಯಕರ ಕೂದಲು ಪಡೆಯಲು ಹಾಗೂ ಕೂದಲು ಉದುರುವಿಕೆಯನ್ನು ಕಡಿಮೆ ಮಾಡುತ್ತದೆ.

ಬಾದಾಮಿಯು ಚರ್ಮವನ್ನು ಮೃದುಗೊಳಿಸುವ ಮತ್ತು ಆರೋಗ್ಯಕರವಾಗಿರುವಂತೆ ಮಾಡುವ ಸಾಮರ್ಥ್ಯವನ್ನು ಹೊಂದಿದೆ. ಅಟೊಪಿಕ್ ಎಸ್ಜಿಮಾದಂತಹ ಒಣ ಚರ್ಮದ ಸಮಸ್ಯೆಗೆ ಚಿಕಿತ್ಸೆ ನೀಡಲು ಬಾದಾಮಿ ಎಣ್ಣೆಯನ್ನು ಹೆಚ್ಚಾಗಿ ಶಿಫಾರಸು ಮಾಡಲಾಗುತ್ತದೆ. ಗರ್ಭಾವಸ್ಥೆಯಿಂದ ಉಂಟಾಗುವ ಗುರುತುಗಳನ್ನೂ ಕಡಿಮೆ ಮಾಡಲು ಇದು ಪರಿಣಾಮಕಾರಿಯಾಗಿದೆ.



ಬಾದಾಮಿಯಲ್ಲಿ ವಿಟಮಿನ್ ಇ ಮತ್ತು ಉತ್ಕರ್ಷಣ ನಿರೋಧಕಗಳಿವೆ, ಇದು ಆರೋಗ್ಯಕರ ಚರ್ಮವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ವಿಟಮಿನ್ ಇ ಚರ್ಮವನ್ನು ಆಕ್ಸಿಡೇಟಿವ್ ಒತ್ತಡದಿಂದ ರಕ್ಷಿಸಲು ಸಹಾಯ ಮಾಡುತ್ತದೆ, ಇದು ಅಕಾಲಿಕ ವಯಸ್ಸಾಗುವಿಕೆ ಮತ್ತು ಇತರ ಚರ್ಮದ ಸಮಸ್ಯೆಗಳಿಂದ ನಿಮ್ಮ ದೇಹವನ್ನು ದೂರವಿರಿಸುತ್ತದೆ. ಬಾದಾಮಿಯಲ್ಲಿರುವ ಆರೋಗ್ಯಕರ ಕೊಬ್ಬುಗಳು ಚರ್ಮದ ಆರೋಗ್ಯಕ್ಕೆ ಸಹಕಾರಿಯಾಗಿದೆ.

ಬಾದಾಮಿಯು ಮೊನೊಸಾಚುರೇಟೆಡ್ ಫ್ಯಾಟಿ ಆಸಿಡ್ (ಒಗಈಂ) ಗಳಿಂದ ತುಂಬಿದ್ದು, ಇದು ಇನ್ಸುಲಿನ್ ಸುಧಾರಿಸಲು ಮತ್ತು ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡಲು ಪ್ರಯೋಜನಕಾರಿಯಾಗಿದೆ. ಬಾದಾಮಿಯಲ್ಲಿರುವ ಹೆಚ್ಚಿನ ಫೈಬರ್ ಮತ್ತು ಆಂಟಿಆಕ್ಸಿಡೆಂಟ್ ಅಂಶವು ಚರ್ಮದ ಕ್ಯಾನ್ಸರ್ ನಿಂದ ದೇಹವನ್ನು ರಕ್ಷಿಸಲು ಮತ್ತು ಹಾನಿಕಾರಕ ಪರಿಣಾಮಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ತೂಕವನ್ನು ನಿರ್ವಹಿಸಲು ಬಯಸುವವರಿಗೆ, ಬಾದಾಮಿ ಉತ್ತಮ ಆಯ್ಕೆಯಾಗಿದೆ. ಬಾದಾಮಿಯಲ್ಲಿರುವ ಪ್ರೋಟೀನ್, ಫೈಬರ್ ಮತ್ತು ಆರೋಗ್ಯಕರ ಕೊಬ್ಬಿನ ಸಂಯೋಜನೆಯು ಹೊಟ್ಟೆ ತುಂಬಿದ ಭಾವನೆಯನ್ನು ಉತ್ತೇಜಿಸುತ್ತದೆ ಮತ್ತು ಒಟ್ಟಾರೆ ಕ್ಯಾಲೊರಿ ಸೇವನೆಯನ್ನು ಕಡಿಮೆ ಮಾಡುತ್ತದೆ. ಬೆರಳೆಣಿಕೆಯಷ್ಟು ಬಾದಾಮಿಯನ್ನು ತಿನ್ನುವುದು ಹಸಿವನ್ನು ನಿಯಂತ್ರಿಸಲು ಮತ್ತು ಅತಿಯಾಗಿ ತಿನ್ನುವುದನ್ನು ತಡೆಯಲು ಸಹಾಯ ಮಾಡುತ್ತದೆ.

ಬಾದಾಮಿಯ ಗುಣಗಳಲ್ಲಿ ಅತ್ಯುತ್ತಮ ಪ್ರಯೋಜನವೆಂದರೆ ಮೆದುಳಿನ ಕ್ಷಮತೆ ಹೆಚ್ಚಿಸುವುದು. ಬಾದಾಮಿಯಲ್ಲಿರುವ ವಿಟಮಿನ್ ಇ ಮೆದುಳಿನ ತಾರ್ಕಿಕ, ಸ್ಮರಣಾ ಮತ್ತು ಚಿಂತನಾ ಸಾಮರ್ಥ್ಯಗಳನ್ನು ಹೆಚ್ಚಿಸುತ್ತದೆ ಹಾಗೂ ಮರೆಗುಳಿತನವನ್ನು ಇಲ್ಲವಾಗಿಸುತ್ತದೆ. ಮಕ್ಕಳಿಗೆ ಪರೀಕ್ಷಾ ಸಮಯದಲ್ಲಿ ಹೆಚ್ಚಿನ ಸ್ಮರಣ ಶಕ್ತಿಯ ಅಗತ್ಯವಿರುವ ಕಾರಣದಿಂದಲೇ ತಾಯಂದಿರುವ ಮಕ್ಕಳಿಗೆ ತಪ್ಪದೇ ಬಾದಾಮಿಯನ್ನು ತಿನ್ನಿಸುತ್ತಾರೆ.

ಬಾದಾಮಿಯನ್ನು ಒಣದಾಗಿದ್ದಾಗ ಸೇವಿಸುವುದಕ್ಕಿಂತ ನೆನೆಸಿಟ್ಟು ಸೇವಿಸಿದಾಗ ಜೀರ್ಣಿಸಿಕೊಳ್ಳುವುದು ಸುಲಭ. ನೆನೆಸಿಟ್ಟ ಬಾದಾಮಿ ಜೀರ್ಣಕ್ರಿಯೆಯನ್ನು ಉತ್ತೇಜಿಸುತ್ತದೆ. ಅಲ್ಲದೇ, ಪೋಷಕಾಂಶಗಳನ್ನು ಹೀರಿಕೊಳ್ಳಲು ಹೆಚ್ಚಿನ ಸಹಾಯ ಸಿಗುತ್ತದೆ. ಈ ಪೋಷಕಾಂಶಗಳು ಜೀರ್ಣಕ್ರಿಯೆಯನ್ನು ಉತ್ತೇಜಿಸುವ ಕಿಣ್ವಗಳ ಉತ್ಪಾದನೆಗೆ ಪ್ರಚೋದನೆ ನೀಡುತ್ತವೆ. ಪರಿಣಾಮವಾಗಿ ಜೀರ್ಣಕ್ರಿಯೆ ಸುಲಭ ಮತ್ತು ಪರಿಪೂರ್ಣವಾಗುತ್ತದೆ.

ಬಾದಾಮಿಯು ಒಮೆಗಾ–3 ಕೊಬ್ಬಿನಾಮ್ಲಗಳು ಮತ್ತು ಪಾಲಿಫಿನಾಲ್ ಉರಿಯೂತ ಕಡಿಮೆಗೊಳಿಸುವ ಸಾಮರ್ಥ್ಯ ಹೊಂದಿರುತ್ತದೆ. ನೆನೆಸಿದ ಬಾದಾಮಿ ತಿನ್ನುವುದರಿಂದ ಮುಖದ ಮೇಲೆ ಮೊಡವೆ, ಎಸ್ಜಿಮಾ, ಮತ್ತು ಸೋರಿಯಾಸಿಸ್ ನಂತಹ ಸಮಸ್ಯೆಗಳು ಸಹ ದೂರವಾಗುತ್ತದೆ. ಆರೋಗ್ಯಕರ ಕಾಂತಿಯುಕ್ತ ಚರ್ಮ ನಿಮ್ಮದಾಗುತ್ತದೆ.

ಒಂದು ದಿನಕ್ಕೆ ಸರಿಸುಮಾರು 23 ಬಾದಾಮಿಗಳನ್ನು ತಿನ್ನಬಹುದು ಎಂದು ತಜ್ಞರು ಶಿಫಾರಸು ಮಾಡುತ್ತಾರೆ. ಬಾದಾಮಿಯ ಬಹುತೇಕ ಎಲ್ಲಾ ಪೋಷಕಾಂಶಗಳು ಒಳಗಿನ ತಿರುಳಿನಲ್ಲಿದೆ ಹಾಗೂ ಸಿಪ್ಪೆಯಲ್ಲಿ ಅತ್ಯಲ್ಪ ಪ್ರಮಾಣದಲ್ಲಿವೆ. ಸಿಪ್ಪೆಯಲ್ಲಿ ಕರಗದ ನಾರು ಹೆಚ್ಚಿನ ಪ್ರಮಾಣದಲ್ಲಿದೆ. ಹಾಗಾಗಿ, ಸಿಪ್ಪೆ ಸಹಿತ ತಿನ್ನುವುದು ಉತ್ತಮವೇ ಆದರೂ ಕಡ್ಡಾಯವಲ್ಲ. ಸಿಪ್ಪೆ ನಿವಾರಿಸಿ ತಿನ್ನುವುದರಿಂದ ಹೆಚ್ಚಿನ ನಷ್ಟವೇನೂ ಇಲ್ಲದ ಕಾರಣ ಹಾಗೂ ಸಿಪ್ಪೆಯ ಮೂಲಕ ಸಿಗಬಹುದಾದ ಕರಗದ ನಾರಿನ ಅಂಶ ಬೇರೆ ಆಹಾರದ ಮೂಲಕವೂ ಸಿಗುವ ಸಾಧ್ಯತೆ ಹೆಚ್ಚಿರುವ ಕಾರಣ ಸಿಪ್ಪೆಯನ್ನು ನಿವಾರಿಸಿಯೂ ತಿನ್ನಬಹುದು ಎಂದು ತಜ್ಞರು ಹೇಳುತ್ತಾರೆ.

# ದೃಷ್ಟಿಯನ್ನೇ ಕಸಿದುಕೊಳ್ಳುವ ಡೇಂಜರ್ ಗ್ಲುಕೋಮಾ

ಕಂಪ್ಯೂಟರ್ ವೀಕ್ಷಿಸುವುದರಿಂದ ಕಣ್ಣಿನ ಸಮಸ್ಯೆ ಸಾಮಾನ್ಯವಾಗಿದೆ. ಲ್ಯಾಪ್ ಟಾಪ್/ ಕಂಪ್ಯೂಟರ್ ಮೂಲಕ ಕೆಲಸ ಮಾಡುವುದು ಅನಿವಾರ್ಯವಾದ ಕಾರಣ ಕಣ್ಣಿನ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದು ಅಗತ್ಯವಾಗಿದೆ.

ವಯಸ್ಸಾದಂತೆ ಕಣ್ಣಿನ ಸಮಸ್ಯೆಗಳು ಹೆಚ್ಚಾಗುತ್ತಿರುತ್ತದೆ. ಅಂತಹ ಸಮಸ್ಯೆಗಳಲ್ಲಿ ಗ್ಲುಕೋಮಾ ಕೂಡ ಒಂದು. ಆರಂಭದಲ್ಲಿ ಗ್ಲುಕೋಮಾ ಯಾವುದೇ ತರಹದ ರೋಗ ಲಕ್ಷಣಗಳನ್ನು ತೋರುವುದಿಲ್ಲ. ಸದ್ದಿಲ್ಲದೆ ತನ್ನ ಪಾಡಿಗೆ ತಾನು ಬೆಳವಣಿಗೆ ಆಗುತ್ತಿರುತ್ತದೆ. ವಯಸ್ಸಾಗುತ್ತಾ ಹೋದಂತೆ ಕಣ್ಣಿನೊಳಗಿನ ಹೆಚ್ಚಿದ ಒತ್ತಡವು ಆಪ್ಟಿಕ್ ನರದ ಅಂಗಾಂಶಕ್ಕೆ ಹಾನಿ ಮಾಡುತ್ತದೆ. ಇದರಿಂದ ದೃಷ್ಟಿ ದುರ್ಬಲವಾಗುತ್ತದೆ. ಹಾಗೆಯೇ ಕುರುಡುತನ ಉಂಟು ಮಾಡುತ್ತದೆ. ಇದರಿಂದ ದೂರ ಇರಬೇಕಾದರೆ ಆಗಾಗ ಕಣ್ಣುಗಳನ್ನು ಪರೀಕ್ಷೆ ಮಾಡಿಸಿಕೊಳ್ಳುವುದು ಇದಕ್ಕಿರುವ ಒಂದು ಉತ್ತಮ ಮಾರ್ಗ.ವೈದ್ಯರು ರೋಗ ನಿರ್ಣಯ ಮಾಡುವ ಮೂಲಕ ಕಣ್ಣುಗಳ ನರಮಂಡಲಗಳ ಮೇಲೆ ಇರುವ ಒತ್ತಡ ಮತ್ತು ಕಣ್ಣುಗಳ ದೃಷ್ಟಿಗೆ ಸಂಬಂಧಪಟ್ಟಂತೆ ಪರೀಕ್ಷೆಗಳನ್ನು ಮಾಡುತ್ತಾರೆ. ಇದರಿಂದ ಗಂಭೀರವಾದ ದೃಷ್ಟಿ ಸಮಸ್ಯೆ ಎದುರಾಗುವ ಮುನ್ನವೇ ಸಮಸ್ಯೆಯನ್ನು



ಸರಿಪಡಿಸುತ್ತಾರೆ. ಭಾರತದಲ್ಲಿ ಈ ಸಮಸ್ಯೆ 12 ಮಿಲಿಯನ್ ಜನರಲ್ಲಿ ಕಂಡುಬರುತ್ತಿದ್ದು, ಶೇ.90 ರಷ್ಟು ಗ್ಲುಕೋಮಾ ಸಮಸ್ಯೆಯು ಪತ್ತೆಯಾಗುವುದೇ ಇಲ್ಲ. ಇದರಿಂದಾಗಿ ಪ್ರತೀ ವರ್ಷ ಗ್ಲುಕೋಮಾದಿಂದ ದೃಷ್ಟಿ ಕಳೆದುಕೊಳ್ಳುವವರ ಸಂಖ್ಯೆಯು ಹೆಚ್ಚಾಗುತ್ತಲೇ ಇದೆ.

### ಏನಿದು ಗ್ಲುಕೋಮಾ ಕಾಯಿಲೆ?

ಗ್ಲುಕೋಮಾ ಎಂಬುವುದು ಒಂದು ರೀತಿಯ ಕಣ್ಣಿನ ಕಾಯಿಲೆಯಾಗಿದ್ದು, ಈ ಸ್ಥಿತಿಯಲ್ಲಿ ಕಣ್ಣಿನ ದೃಷ್ಟಿನರ ನಿಧಾನವಾಗಿ ಘಾಸಿಗೊಳ್ಳುತ್ತಾ ತನ್ನ ಕ್ಷಮತೆಯನ್ನು ಕಳೆದುಕೊಳ್ಳುತ್ತಾ ಬರುತ್ತದೆ. ಇದಕ್ಕೆ ಮುಖ್ಯ ಕಾರಣ ಕಣ್ಣಿನ ಒಳಭಾಗದ ಒತ್ತಡ.

# ಬೇಬಿ ಕಾರ್ನ್ ಫ್ರೈ

**ಬೇಕಾಗುವ ಪದಾರ್ಥಗಳು...**

ಬೇಬಿ ಕಾರ್ನ್– 1 ಬಟ್ಟಲು
ಕಡಲೆ ಹಿಟ್ಟು– 1 ಬಟ್ಟಲು
ಈರುಳ್ಳಿ– 1
ಬ್ರೆಡ್ ಪೌಡರ್– 1 ಬಟ್ಟಲು
ಅಕ್ಕಿ ಹಿಟ್ಟು– 1 ಚಮಚ
ಕ್ಯಾಪ್ಸಿಕಂ– 1
ಅಚ್ಚ ಖಾರದ ಪುಡಿ– 1 ಚಮಚ
ಕಾಳುಮೆಣಸಿನ ಪುಡಿ– ಅರ್ಧ ಚಮಚ
ಉಪ್ಪು–ರುಚಿಗೆ ತಕ್ಕಷ್ಟು



### ಮಾಡುವ ವಿಧಾನ...

ಒಂದು ಪಾತ್ರೆಯಲ್ಲಿ ಎಣ್ಣೆಯನ್ನು ಬಿಸಿ ಮಾಡಲು ಇಡಿ. ಮತ್ತೊಂದು ಪಾತ್ರೆಯಲ್ಲಿ ಕಡಲೆ ಹಿಟ್ಟು, ಕಾಳು ಮೆಣಸಿನ ಪುಡಿ, ಖಾರದ ಪುಡಿ, ಅಕ್ಕಿ ಹಿಟ್ಟು, ಉಪ್ಪು ಹಾಗೂ ಸ್ವಲ್ಪ ನೀರು ಹಾಕಿ ದಪ್ಪ ಮಿಶ್ರಣ ಮಾಡಿಕೊಳ್ಳಿ.ಒಲೆಯ ಮೇಲೆ ಬಾಣಲೆ ಇಟ್ಟು, ಎಣ್ಣೆ ಹಾಕಿ. ಬಿಸಿಯಾದ ಮೇಲೆ ಕತ್ತರಿಸಿದ ಕ್ಯಾಪ್ಸಿಕಂ ಹಾಗೂ ಕತ್ತರಿಸಿದ ಈರುಳ್ಳಿಯನ್ನು ಎಣ್ಣೆಗೆ ಹಾಕಿ ಫ್ರೈ ಮಾಡಿ. ಬದಿಗಿಟ್ಟುಕೊಳ್ಳಿ.ನಂತರ ಬೇಬಿ ಕಾರ್ನ್ ಪೀಸ್ ಗಳನ್ನು ಕಡಲೆ ಹಿಟ್ಟಿನ ಮಿಶ್ರಣದಲ್ಲಿ ಅದ್ದಿ.


ನಂತರ ಬ್ರೆಡ್ ಪೌಡರ್ ನಲ್ಲಿ ಹೊರಳಿಸಿ ಎಣ್ಣೆಯಲ್ಲಿ ಬಿಡಿ.

ಬೇಬಿ ಕಾರ್ನ್ ಗೋಲ್ಡನ್ ಬಣ್ಣಕ್ಕೆ ಬರ್ತಿದ್ದಂತೆ ತೆಗೆದು, ಕರಿದ ಈರುಳ್ಳಿ, ಕ್ಯಾಪ್ಸಿಕಂ ಮೇಲೆ ಉದುರಿಸಿದರೆ ರುಚಿಕರಾದ ಬೇಬಿ ಕಾರ್ನ್ ಫ್ರೈ ಸವಿಯಲು ಸಿದ್ಧ.

# ಪ್ರತಿ ಐವರು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ: ಅಧ್ಯಯನ ಬಹಿರಂಗ

**ನವದೆಹಲಿ: ಭಾರತೀಯರು ಗುಪ್ತ ಆರೋಗ್ಯ ಸಮಸ್ಯೆಯ ಸಂಕಷ್ಟದಲ್ಲಿ ಸಿಲುಕಿಹಾಕಿಕೊಂಡಿದ್ದಾರೆಯೇ? ಇತ್ತೀಚಿನ ಅಧ್ಯಯನವೊಂದರ ಪ್ರಕಾರ, ಪ್ರತಿ ಐದು ಭಾರತೀಯರಲ್ಲಿ ಒಬ್ಬರು ವಿಟಮಿನ್ ಡಿ ಕೊರತೆಯಿಂದ ಬಳಲುತ್ತಿದ್ದಾರೆ ಎಂದು ತಿಳಿದುಬಂದಿದೆ. ಜನರ ಜೀವನಶೈಲಿ, ಆಹಾರ ಪದ್ಧತಿ ಮತ್ತು ನೀತಿ ನಿರೂಪಣೆಯಲ್ಲಿನ ನ್ಯೂನತೆಗಳಿಂದಾಗಿ ಆರೋಗ್ಯ ಸಮಸ್ಯೆಗಳು ಇತ್ತೀಚಿನ ವರ್ಷಗಳಲ್ಲಿ ಹೆಚ್ಚಾಗಿ ಕಾಡುತ್ತಿವೆ ಎಂಬ ಆತಂಕಕಾರಿ ಅಂಕಿಅಂಶಗಳನ್ನು ಅಧ್ಯಯನವು ತೋರಿಸಿದೆ.**

**ಭಾರತೀಯ ಅಂತಾರಾಷ್ಟ್ರೀಯ ಆರ್ಥಿಕ ಸಂಬಂಧಗಳ ಸಂಶೋಧನಾ ಮಂಡಳಿ (ಖಅಖಇಖ) ಮತ್ತು ಒಟಿಎಂ ಫೌಂಡೇಶನ್ ನಡೆಸಿದ ಸಂಶೋಧನೆ ಪ್ರಕಾರ, ದೇಶದ ನೀತಿ ನಿರೂಪಕರು, ಆರೋಗ್ಯ ವೃತ್ತಿಪರರು ಮತ್ತು ಶಿಕ್ಷಣ ತಜ್ಞರು ಸೇರಿದಂತೆ 300 ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಈ ವಿಷಯ ಬಹಿರಂಗವಾಗಿದೆ.**




ಭಾರತ ದೇಶದ ಪೂರ್ವ ಪ್ರದೇಶದಲ್ಲಿ ವಿಟಮಿನ್ ಡಿ ಕೊರತೆಯು ಹೆಚ್ಚಾಗಿದೆ. ಹದಿಹರೆಯದವರು, ಶಿಶುಗಳು, ವೃದ್ಧರು ಮತ್ತು ಎಲ್ಲಾ ವಯೋಮಾನದ ಮಹಿಳೆಯರು ವಿಟಮಿನ್ ಡಿ ಕೊರತೆಯಿಂದ ಹೆಚ್ಚು ಬಳಲುತ್ತಿದ್ದಾರೆ. ನಗರ ಪ್ರದೇಶದ ಜನರ ಜೀವನಶೈಲಿ ಮತ್ತು ಸೂರ್ಯನ ಬೆಳಕಿಗೆ ಸೀಮಿತ ಒಡ್ಡಿಕೊಳ್ಳುವಿಕೆಯಿಂದಾಗಿ, ಗ್ರಾಮೀಣ ಪ್ರದೇಶದವರಿಗಿಂತ ಕಾಯಿಲೆಗಳಿಗೆ ಹೆಚ್ಚಾಗಿ ಒಳಗಾಗುತ್ತಿದ್ದಾರೆ.

ವಿಟಮಿನ್ ಡಿ ಕೊರತೆಯು ರಿಕೆಟ್ಸ್ ಮತ್ತು ಆಸ್ಟಿಯೋಮಲೇಶಿಯಾದಂತಹ ಅಸ್ಥಿಪಂಜರದ ಅಸ್ವಸ್ಥತೆಗಳನ್ನು ಮೀರಿ ಬೆಳೆಯುತ್ತದೆ ಎಂದು ತಜ್ಞರು ಎಚ್ಚರಿಸಿದ್ದಾರೆ. ಇದು ಸ್ನಾಯು

ದೌರ್ಬಲ್ಯ, ಖಿನ್ನತೆ, ಹೃದಯ ಸಂಬಂಧಿ ಕಾಯಿಲೆಗಳು, ಟೈಪ್ 2 ಮಧುಮೇಹ ಮತ್ತು ಕೆಲವು ಕ್ಯಾನ್ಸರ್ಗೆ ಕಾರಣವಾಗುತ್ತದೆ.

ವಿಟಮಿನ್ ಡಿ ಕೊರತೆಯು ಲಕ್ಷಾಂತರ ಜನರನ್ನು ಬಾಧಿಸುವ ಮೌನ ಸಾಂಕ್ರಾಮಿಕ ರೋಗವಾಗಿದೆ, ಆದರೆ ಹೆಚ್ಚಾಗಿ ಜನರು ಇದನ್ನು ಕಡೆಗಣಿಸುತ್ತಾರೆ. ಇದರ ಪರಿಣಾಮಗಳು ದುರ್ಬಲ ಮೂಳೆಗಳನ್ನು ಮೀರಿ ವಿಸ್ತರಿಸುತ್ತವೆ. ಆರೋಗ್ಯ ವ್ಯವಸ್ಥೆಯನ್ನು ಒತ್ತಡಕ್ಕೆ ಒಳಪಡಿಸುತ್ತದೆ.

ನಮ್ಮ ರಾಷ್ಟ್ರೀಯ ಆರೋಗ್ಯ ಗುರಿಗಳನ್ನು ದುರ್ಬಲಗೊಳಿಸುತ್ತದೆ ಎಂದು ಆಕಾಶ್ ಹೆಲ್ತ್ಕೇರ್ ವ್ಯವಸ್ಥಾಪಕ ನಿರ್ದೇಶಕ ಮತ್ತು ಅಧ್ಯಯನದ ಸಹ–ಲೇಖಕ ಡಾ. ಆಶಿಶ್ ಚೌಧರಿ ಹೇಳುತ್ತಾರೆ.

ಬಿಕ್ಕಟ್ಟನ್ನು ಪರಿಹರಿಸಲು ಹಲವಾರು ವ್ಯವಸ್ಥಿತ ಅಡೆತಡೆಗಳನ್ನು ವರದಿಯು ಗುರುತಿಸುತ್ತದೆ. ಆರೋಗ್ಯ ಕೇಂದ್ರಗಳು, ಆಸ್ಪತ್ರೆಗಳಲ್ಲಿ ಹೆಚ್ಚಿನ ಪರೀಕ್ಷಾ ವೆಚ್ಚಗಳು ಮತ್ತು ಆರೋಗ್ಯ ಪೂರಕಗಳ ಮೇಲಿನ ಶೇಕಡಾ 18ರಷ್ಟು ಜಿಎಸ್ಟಿಯು ರೋಗನಿರ್ಣಯ ಮತ್ತು ಚಿಕಿತ್ಸೆಯನ್ನು ಅನೇಕರಿಗೆ ಭರಿಸಲಾಗದಂತೆ ಮಾಡುತ್ತದೆ.

# ಮಕ್ಕಳಲ್ಲಿ ಮಧುಮೇಹ ತಡೆಯುವುದು ಹೇಗೆ...?

ಬದಲಾದ ಜೀವನಶೈಲಿಯಿಂದ ಇಂದು ಮಕ್ಕಳಲ್ಲಿಯೂ ಮಧುಮೇಹವನ್ನು

ಸರ್ವೇಸಾಮಾನ್ಯವಾಗಿ ನೋಡುತ್ತಿದ್ದೇವೆ. ಮಕ್ಕಳಲ್ಲಿಯೂ ಟೈಪ್?1 ಮತ್ತು ಟೈಪ್?2 ಡಯಾಬಿಟಿಸ್ ಕಾಣಿಸಿಕೊಳ್ಳುತ್ತಿದ್ದು, ಇದು ಮಕ್ಕಳ ಭವಿಷ್ಯದ ದೃಷ್ಟಿಯಿಂದ ಅತ್ಯಂತ ಅಪಾಯಕಾರಿಯಾಗಿದೆ.

ಇಂದು ಮಕ್ಕಳ ದಿನಾಚರಣೆ, ಈ ದಿನದಂದು ಮಕ್ಕಳಲ್ಲಿ ಹೆಚ್ಚಾಗುತ್ತಿರುವ ಡಯಾಬಿಟಿಸ್ ನಿಯಂತ್ರಿಸಲು ಒಂದಷ್ಟು ಸಲಹೆಯನ್ನು ವೈದ್ಯರು ನೀಡಿದ್ದಾರೆ.

ಬಂಜಾರಾ ಹಿಲ್ಸ್‌ನ ರೆನೋವಾ ಸೆಂಚುರಿ ಹಾಸ್ಪಿಟಲ್ಸ್‌ನ ಕನ್ಸಲ್ಟೆಂಟ್ ಕ್ಲಿನಿಕಲ್ ಡಯೆಟಿಷಿಯನ್ ಸೌಜನ್ಯ ಗನಿವಾಡ ಅವರು ಮಾತನಾಡಿ, ಪೌಷ್ಟಿಕಾಂಶದ ಸಲಹೆ ನೀಡುವುದಷ್ಟೇ

ಅಲ್ಲ, ಸಕ್ಕರೆ ಅಂಶವುಳ್ಳ ಆಹಾರ ಪದಾರ್ಥಗಳು ಮತ್ತು ಸಂಸ್ಕರಿಸಿದ ಆಹಾರಗಳಿಂದ ಎದುರಾಗುವ ಅಪಾಯಗಳ ಕುರಿತು ತಿಳಿಸಬೇಕಾಗಿದೆ. ಮೈದಾ, ಬ್ರೆಡ್ ಬದಲಿಗೆ ಧಾನ್ಯ ಅಥವಾ ಕಡಿಮೆ ಸಕ್ಕರೆ ಅಂಶವುಳ್ಳ ಹಣ್ಣುಗಳನ್ನು ಬಳಕೆ ಮಾಡುವಂತೆ ತಿಳಿಸಲಾಗುವುದು. ಇದು ಜೀವನಶೈಲಿಯನ್ನು ಬದಲಾಯಿಸುತ್ತದೆ ಎಂದು ಹೇಳಿದ್ದಾರೆ.

ಎಲ್‌ಬಿ ನಗರದ ಕಾಮಿನೇನಿ ಹಾಸ್ಪಿಟಲ್ಸ್‌ನ ಕನ್ಸಲ್ಟೆಂಟ್

ಎಂಡೋಕ್ರೈನಾಲಜಿಸ್ಟ್ ಡಾ ಜಿ ಸಂದೀಪ್ ರೆಡ್ಡಿ ಅವರು ಮಾತನಾಡಿ, ಮಧುಮೇಹ ದೈಹಿಕ ಆರೋಗ್ಯದ ಮೇಲಷ್ಟೇ ಅಲ್ಲ, ಮಕ್ಕಳ ಮಾನಸಿಕ ಆರೋಗ್ಯದ ಮೇಲೂ ಪರಿಣಾಮ ಬೀರುತ್ತದೆ.

ಹೀಗಾಗಿ ಮಕ್ಕಳಿಗೆ ಅವರ ಸ್ಥಿತಿಯ ಬಗ್ಗೆ ಅರ್ಥ ಮಾಡಿಸುವುದು ಮುಖ್ಯವಾಗುತ್ತದೆ. ಇದರಿಂದ ಮಧುಮೇಹವನ್ನು ಸುಲಭವಾಗಿ ನಿರ್ವಹಣೆ ಮಾಡಬಹುದು. ಸ್ನೇಹಿತರೊಂದಿಗೆ ಕೂಡಿದಾಗ ಮಕ್ಕಳು ಒತ್ತಡವನ್ನು ಅನುಭವಿಸುತ್ತಾರೆ. ಇದು ಅವರ ಆತ್ಮವಿಶ್ವಾಸದ ಮೇಲೆ ಪರಿಣಾಮ ಬೀರುತ್ತದೆ.



**ಪರ್ಯಾಯ ಹಾಗೂ ಆರೋಗ್ಯಕರ ಸಿಹಿ ಪದಾರ್ಥಗಳು ಇಂತಿವೆ...**

**ಡಾರ್ಕ್ ಚಾಕೊಲೇಟ್**
**ಸಿರಿಧಾನ್ಯದ ಹಿಟ್ಟು**
**ಡ್ರೈಫ್ರೂಟ್ಸ್ ಲಡ್ಡು**
**ಹಣ್ಣುಗಳಿಂದ ತಯಾರಿಸಿದ ತಿನಿಸುಗಳು (ಸ್ಮೂಥಿಸ್, ಮೊಸರು, ಕಸ್ಟರ್ಡ್ ಇತ್ಯಾದಿ...)**

**ಚಿಕ್ಕಿ, ಮಖಾನ, ಧಾನಗಳಿಂದ ಮಾಡಿದ ಬಿಸ್ಕೆಟ್.**

ಹೀಗಾಗಿ ಮಕ್ಕಳಿಕೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ.

ಮಕ್ಕಳನ್ನು ನಿಯಂತ್ರಿಸುವ ಬದಲು ಅವರಿಗೆ ಆಹಾರ ಸಿದ್ಧಪಡಿಸಿಕೊಳ್ಳಲು ಬಿಡಬೇಕು.

ಇದು ಅವರ ಆತ್ಮಸ್ಥೈರ್ಯವನ್ನು ಹೆಚ್ಚಿಸುವುದಲ್ಲದೆ ಇದು ಅವರ ಆತ್ಮವಿಶ್ವಾಸದ ಮೇಲೆ ಪರಿಣಾಮ ಬೀರುತ್ತದೆ. ಹೀಗಾಗಿ ಮಕ್ಕಳಿಕೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು ಎಂದು ಹೇಳಿದ್ದಾರೆ.

ಮಕ್ಕಳನ್ನು ನಿಯಂತ್ರಿಸುವ ಬದಲು ಅವರಿಗೆ ಆಹಾರ ಸಿದ್ಧಪಡಿಸಿಕೊಳ್ಳಲು ಬಿಡಬೇಕು. ಇದು ಅವರ ಆತ್ಮಸ್ಥೈರ್ಯವನ್ನು ಹೆಚ್ಚಿಸುವುದಲ್ಲದೆ,, ಆರೋಗ್ಯಕರ ಆಹಾರ

**ಪೋಷಕರಿಗೆ ಕೆಲ ಸಲಹೆಗಳು...**

**ಮಕ್ಕಳೊಂದಿಗೆ ಮುಕ್ತವಾಗಿ ಮಾತನಾಡಿ.**
**ಆರೋಗ್ಯದ ಬಗ್ಗೆ ಮಕ್ಕಳಿಗೆ ಶಿಕ್ಷಣ ನೀಡಿ.**
**ನಿಮ್ಮ ಕೆಲಸಗಳಲ್ಲಿ ಅವರನ್ನು ತೊಡಗಿಸಿಕೊಳ್ಳಿ ಭಾವನಾತ್ಮಕ ಬೆಂಬಲ**
**ಮಕ್ಕಳು ವಿಭಿನ್ನವಾಗಿ ಭಾವಿಸಬೇಡಿ**
**ಆರೋಗ್ಯಕರ ದಿನಚರಿಯನ್ನು ರೂಪಿಸಿ.**
**ಅವರ ಪ್ರತಿಯೊಂದು ಕಾರ್ಯಕ್ಕೂ ಪ್ರೋತ್ಸಾಹಿಸಿ.**

ಸೇವನೆ ರೂಢಿಸಿಕೊಳ್ಳಲು ಸಹಾಯ ಮಾಡುತ್ತದೆ. ಇಲ್ಲದೆ, ದೈಹಿಕ ಚಟುವಟಿಕೆ ಕೂಡ ನಿರ್ಣಾಯವಾಗಿದ್ದು, ಈ ಬಗ್ಗೆಯೂ ಅರಿವು ಮೂಡಿಸಬೇಕು. ವ್ಯಾಯಾಮವು ಮಧುಮೇಹವನ್ನು ನಿರ್ವಹಿಸಲು ಸಹಾಯ ಮಾಡುವ ಸರಳ ಮಾರ್ಗಗಳಲ್ಲಿ ಒಂದಾಗಿದೆ. ಇದು ಅವರ ಮಾನಸಿಕ ಯೋಗಕ್ಷೇಮಕ್ಕೂ ಒಳ್ಳೆಯದು ಎಂದು

ತಿಳಿಸಿದ್ದಾರೆ.ಮಕ್ಕಳಲ್ಲಿ ಮಧುಮೇಹ ನಿಯಂತ್ರಿಸುವುದು ಹೇಗೆ?

ಮಕ್ಕಳಲ್ಲಿ ಮಧುಮೇಹ ನಿಯಂತ್ರಿಸಲು ಸಮತೋಲಿತ ಮತ್ತು ಪೌಷ್ಟಿಕ ಆಹಾರ ಅತ್ಯಗತ್ಯ. ಹೆಚ್ಚು ತರಕಾರಿ, ಹಣ್ಣು, ಧಾನ್ಯ ಮತ್ತು ಪ್ರೋಟೀನ್ ಸೇವನೆ ಹೆಚ್ಚಾಗಿರಲಿ. ಸಕ್ಕರೆ,

ಕಾರ್ಬೋಹೈಡ್ರೇಟ್ ಆಹಾರದ ಮೇಲೆ ಸಂಪೂರ್ಣ ನಿಯಂತ್ರಣ ಇರಿಸಬೇಕು.ನಿಯಮಿತ ಏರೋಬಿಕ್ ವ್ಯಾಯಾಮ, ಮಕ್ಕಳನ್ನು ಕ್ರೀಡೆಯಲ್ಲಿ ತೊಡಗಿಸುವುದು ಸೇರಿದಂತೆ ದೈಹಿಕ ಚಟುವಟಿಕೆಯಲ್ಲಿ ಕ್ರಿಯಾಶೀಲರಾಗಿರುವಂತೆ ನೋಡಿಕೊಳ್ಳಿ. ಜೊತೆಗೆ, ಸಕ್ಕರೆ ಮಟ್ಟವನ್ನು ಪ್ರತಿ ನಿತ್ಯ ತಪಾಸಣೆ ಮಾಡುತ್ತ ಬರುವುದರಿಂದ ಸಕ್ಕರೆ ಮಟ್ಟದ ಬಗ್ಗೆ ತಿಳಿದುಕೊಳ್ಳಲು ಸಾಧ್ಯವಾಗುತ್ತದೆ.





Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**